ಸಂಪುಟ: 21, ಸಂಚಿಕೆ: 239, ಪುಟಗಳು: 8, ಶುಕ್ರವಾರ, 7 ಜೂನ್ 2024 RNI NO. KARKAN/2002/08054
epaper: www.sanjemugilu.com



ನೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

ಸುಭಾಷಿತ

ಒಳ್ಳೆಯದು ಉಳಿಯಬೇಕಾದರೆ ಕೆಟ್ಟವರೊಂದಿಗೆ ಹೋರಾಡಬೇಕು.
। ಅನಕೃ

## ಪಂಚಾಂಗ

(ಶುಕ್ರವಾರ 7, ಜೂನ್-2024)

- ಶ್ರೀ ಕ್ರೋಧಿನಾಮ ಸಂವತ್ಸರ,
- ಉತ್ತರಾಯಣ, ಗ್ರೀಷ್ಮ ಋತು,
- ಜೇಷ್ಠ ಮಾಸ, ಶುಕ್ಲ ಪಕ್ಷ,
- ಶುಕ್ರವಾರ, ಮೃಗಶಿರಾ ನಕ್ಷತ್ರ
- ರಾಹುಕಾಲ: 10:47 ರಿಂದ 12:23
- ಗುಳಿಕಕಾಲ: 07:35 ರಿಂದ 09:11
- ಯಮಗಂಡಕಾಲ: 03:35 ರಿಂದ 05:11




# ಸಾಗರ್ ಖಂಡ್ರೆ ಗೆಲುವು

## ಬೀದರ್‌ನಲ್ಲಿ ಈಗ ಭಾಲ್ಕಿ ಶಕ್ತಿ ಕೇಂದ್ರ!

**ಬೀದರ್:** ಲೋಕಸಭಾ ಚುನಾವಣಾ ಫಲಿತಾಂಶದಿಂದಾಗಿ ಬೀದರ್‌ನಲ್ಲಿ ಭಾಲ್ಕಿ ಕ್ಷೇತ್ರ ಈಗ ರಾಜಕೀಯವಾಗಿ ಶಕ್ತಿ ಕೇಂದ್ರವಾಗಿ ಮಾರ್ಪಟ್ಟಿದೆ.

ಬೀದರ್ ಲೋಕಸಭಾ ಕೇತ್ರದ ಚುನಾವಣೆಯಲ್ಲಿ ಖಂಡ್ರೆ ಪರಿವಾರದ ಮೂರನೇ ತಲೆಮಾರಿನ 26 ವಯಸ್ಸಿನ ಸಾಗರ ಖಂಡ್ರೆ ಗೆಲುವು ಭಾಲ್ಕಿ ಹಿರಿಮೆ ಮತ್ತಷ್ಟು ಎತ್ತರಕ್ಕೇರಿಸಿದೆ. ಹ್ಯಾಟ್ರಿಕ್ ಗೆಲುವಿನ ನಿರೀಕ್ಷೆಯಲ್ಲಿದ್ದ ಹಾಲಿ ಕೇಂದ್ರ ಸಚಿವ ಭಗವಂತ ಖೂಬಾ ಅವರನ್ನು 1.28 ಲಕ್ಷಕ್ಕೂ ಅಧಿಕ ಮತಗಳ ಅಂತರದಿಂದ ಪರಾಭವಗೊಳಿಸುವ ಮೂಲಕ ಸಾಗರ್ ಖಂಡ್ರೆ ಕಿರಿಯ ಸಂಸದರಾಗಿ ಸಂಸತ್ತಿಗೆ ಎಂಟ್ರಿ ಕೊಟ್ಟಿದಾರೆ. ಪುಟ 2



ಉಪ ಚುನಾವಣೆಗೆ ಬಿಜೆಪಿ, ಜೆಡಿಎಸ್ ಮೈತ್ರಿ ಫಿಕ್ಸ್

# ಟಿಕೆಟ್ ಪಡೆಯಲು ಯೋಗೇಶ್ವರ್ ಕಸರತ್ತು

**ಬೆಂಗಳೂರು:** ಲೋಕಸಭಾ ಚುನಾವಣೆಯಲ್ಲಿ ಮಂಡ್ಯ ಸಂಸದರಾಗಿ ಹೆಚ್‌ಡಿ ಕುಮಾರಸ್ವಾಮಿ ಆಯ್ಕೆಯಾದ ಬೆನ್ನಲ್ಲೇ ಚನ್ನಪಟ್ಟಣ ಉಪ ಚುನಾವಣೆಗೆ ಮೈತ್ರಿ ಅಭ್ಯರ್ಥಿ ಯಾರಾಗುತ್ತಾರೆ ಎಂಬ ಕುತೂಹಲ ಈಗ ಮನೆ ಮಾಡಿದೆ.

ವಿಧಾನಸಭಾ ಚುನಾವಣೆಯಲ್ಲಿ ಹೆಚ್‌ಡಿ ಕುಮಾರಸ್ವಾಮಿ ರಾಮನಗರ ಮತ್ತು ಚನ್ನಪಟ್ಟಣದಿಂದ ಸ್ಪರ್ಧಿಸಿದ್ದರು. ರಾಮನಗರದಲ್ಲಿ ಸೋತರೆ ಚನ್ನಪಟ್ಟಣದಿಂದ ಗೆದ್ದಿದ್ದರು. ಈಗ ಲೋಕಸಭೆಗೆ ಆಯ್ಕೆಯಾಗಿರುವ ಕಾರಣ ಚನ್ನಪಟ್ಟಣ ಕ್ಷೇತ್ರಕ್ಕೆ ಕುಮಾರಸ್ವಾಮಿ ರಾಜೀನಾಮೆ ನೀಡಬೇಕಾಗುತ್ತದೆ.

ಲೋಕಸಭೆ ಮತ್ತು ಪರಿಷತ್ ಚುನಾವಣೆಯಲ್ಲಿ ಬಿಜೆಪಿ, ಜೆಡಿಎಸ್ ಮೈತ್ರಿ ಯಶಸ್ವಿಯಾದ ಬೆನ್ನಲ್ಲೇ ಚನ್ನಪಟ್ಟಣದಲ್ಲೂ ಮೈತ್ರಿ ಅಭ್ಯರ್ಥಿ ಕಣಕ್ಕೆ ಇಳಿಯಲಿದ್ದಾರೆ. ಮೈತ್ರಿ ಫಿಕ್ಸ್ ಆಗುತ್ತಿದ್ದಂತೆ ಮಾಜಿ ಶಾಸಕ ಯೋಗೇಶ್ವರ್ ಟಿಕೆಟ್ ಪಡೆಯಲು ಕಸರತ್ತು ಆರಂಭಿಸಿದ್ದಾರೆ. ಪುಟ 2



## ಸಂಕ್ಷಿಪ್ತ ಸುದ್ದಿ

### ಮದುವೆಯಾಗುವುದಾಗಿ ನಂಬಿಸಿ ಪ್ರೇಯಸಿ ಮೇಲೆ ಅತ್ಯಾಚಾರ



**ಕೊಪ್ಪಳ:** ಮದುವೆಯಾಗುವುದಾಗಿ ನಂಬಿಸಿ ಪ್ರಿಯತಮೆ ಮೇಲೆ ಅತ್ಯಾಚಾರವೆಸಗಿ ಪರಾರಿಯಾದ ಪ್ರಿಯಕರನ ವಿರುದ್ಧ ಕಾರಟಗಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಗಂಗಾವತಿ ತಾಲೂಕು ನಿವಾಸಿ ರವಿರಾಜ್ ಅತ್ಯಾಚಾರ ಎಸಗಿದ ಆರೋಪಿ. ಆರೋಪಿ ರವಿರಾಜ್ ನನ್ನು ಬಂಧಿಸಿ, ನನ್ನ ಜೊತೆ ಮದುವೆ ಮಾಡಿಸಿ ಎಂದು ಸಂತ್ರಸ್ತೆ ಪೊಲೀಸ್ ಠಾಣೆ ಎದುರು ಧರಣಿ ಕುಳಿತಿದ್ದಾಳೆ. 2020ರಲ್ಲಿ ಸಂತ್ರಸ್ತೆ ದ್ವಿತೀಯ ಪಿಯುಸಿ ಓದುವಾಗ ರವಿರಾಜ್ ಪರಿಚಯವಾಗಿದ್ದಾನೆ. ಪರಿಚಹ ಸ್ನೇಹ, ಸ್ನೇಹ ಪ್ರೀತಿಯಾಗಿ ಬದಲಾಗಿದೆ. ಇಬ್ಬರೂ 2021ರಿಂದ ಪರಸ್ಪರ ಪ್ರೀತಿಸಲು ಆರಂಭಿಸಿದ್ದಾರೆ. ಪುಟ 2

### ಮಾಡದ ಕೊಲೆಗೆ ಯಾರಿಗೋ ಜೈಲು ಶಿಕ್ಷೆ, ನಿಂದನೆ, 24 ವರ್ಷಗಳ ಬಳಿಕ ಮೃತ ವ್ಯಕ್ತಿ ಪ್ರತ್ಯಕ್ಷ



**ಉತ್ತರ ಪ್ರದೇಶ:** ಒಂದೆಡೆ ಕೊಲೆ ಮಾಡದೆ ವ್ಯಕ್ತಿಯೊಬ್ಬ ಜೈಲು ಶಿಕ್ಷೆ ಅನುಭವಿಸಿದ್ದರೆ, ಮೃತಪಟ್ಟಿದ್ದಾನೆ ಎನ್ನಲಾದ ವ್ಯಕ್ತಿ 24 ವರ್ಷಗಳ ಬಳಿಕ ಪ್ರತ್ಯಕ್ಷನಾದ ಘಟನೆ ಉತ್ತರ ಪ್ರದೇಶದಲ್ಲಿ ನಡೆದಿದೆ. ಇದು 2001ರ ಸೆಪ್ಟೆಂಬರ್ 28ರಂದು ನಡೆದ ಘಟನೆ. ಕುದಂಹಿ ಕೋಠಿ ಗ್ರಾಮದ ಸೇಮರಿಯಾ ನಿವಾಸಿ ಸಂತ್ ರಾಜ್ ಎಂಬಾತ ಮನೆಯ ಹೊರಗೆ ಮಲಗಿದ್ದವನು ಏಕಾಏಕಿ ನಾಪತ್ತೆಯಾಗಿದ್ದ, ಪತ್ತಿದಾರ್ ರಾಮನಾಗಿನಾ ಸೇರಿದಂತೆ ಐವರು ತನ್ನ ಪತಿಯನ್ನು ಅಪಹರಿಸಿದ್ದಾರೆ ಎಂದು ಸಂತ್ ರಾಜ್ ಪತ್ನಿ ಆರೋಪಿಸಿದ್ದರು. ಪುಟ 2

## ಮೋದಿ ಮುಂದೆ ಸವಾಲುಗಳ ಸರಮಾಲೆ | ಮಿತ್ರಪಕ್ಷಗಳಿಂದ ಭಾರಿ ಬೇಡಿಕೆ

# ಬಿಜೆಪಿ 4:1 ಸೂತ್ರ!

**ನವದೆಹಲಿ:** ಕೇಂದ್ರದಲ್ಲಿ ನರೇಂದ್ರ ದಾಮೋದರ್ ದಾಸ್ ಮೋದಿ ಯುಗ ಮತ್ತೆ ಶುರುವಾಗುತ್ತಿದೆ. ಮೋದಿ ಹ್ಯಾಟ್ರಿಕ್ ಆಡಳಿತಕ್ಕೆ ಕ್ಷಣಗಣನೆ ಶುರುವಾಗಿದೆ. ಇದಕ್ಕಾಗಿ ಸಮಯ ನಿಗದಿಯಾಗಿದ್ದು, ಜೂನ್ 9ರ ಸಂಜೆ 6 ಗಂಟೆಗೆ ಮೋದಿ ಪದಗ್ರಹಣ ನಡೆಯಲಿದೆ. ಮೋದಿ ಪ್ರಮಾಣವಚನಕ್ಕೆ ರಾಷ್ಟ್ರಪತಿ ಭವನದಲ್ಲಿ ಅಂತಿಮ ಸಿದ್ಧತೆಗಳು ನಡೆದಿವೆ. ದೆಹಲಿಯಲ್ಲಿ ಇಂದು ಎನ್‌ಡಿಎ ಮಿತ್ರಪಕ್ಷಗಳ ಸಂಸದೀಯ ಸಭೆ ನಡೆಯದೆ. ಈ ಸಭೆಯಲ್ಲಿ ಎಲ್ಲವೂ ಅಂತಿಮಗೊಳ್ಳುವ ಸಾಧ್ಯತೆ ಇದೆ. ಸಭೆಯ ಬಳಿಕ ಎನ್‌ಡಿಎ ನಾಯಕರ ನಿಯೋಗ ರಾಷ್ಟ್ರಪತಿ ಭವನಕ್ಕೆ ತೆರಳಲಿದ್ದು, ಸರ್ಕಾರ ರಚನೆಗೆ ಹಕ್ಕು ಮಂಡಿಸಲಿದೆ.

**ಮೋದಿ ಮುಂದಿದೆ ಬೆಟ್ಟದಷ್ಟು ಸವಾಲು:** ಕಳೆದ 10 ವರ್ಷ ಇಲ್ಲದ ಸವಾಲು ನರೇಂದ್ರ ಮೋದಿಗೆ ಈಗ ಎದುರಾಗಿದೆ. ಇಷ್ಟು ವರ್ಷ ಬಿಜೆಪಿಗೆ ಬಹುಮತವಿದ್ದ ಕಾರಣ, ನಿರ್ಧಾರಗಳನ್ನ ತೆಗೆದುಕೊಳ್ಳಲು ಯಾರನ್ನೂ ಕೇಳಬೇಕೆಂದಿರಲಿಲ್ಲ. ಆದರೆ ಈಗ ಮೈತ್ರಿ ಸರ್ಕಾರವಾದ ಕಾರಣ, ಮಿತ್ರಪಕ್ಷಗಳ ಮರ್ಜಿಗೆ ಬೀಳುವಂತಾಗಿದೆ. ಅದರಲ್ಲೂ ಸಚಿವ ಸ್ಥಾನ ಹಂಚಿಕೆಗೆ ಪ್ರಧಾನಿ ಮೋದಿಗೆ ದೊಡ್ಡ ಸವಾಲಾಗಿದೆ. ಟಿಡಿಪಿ, ಜೆಡಿಯು ಕ್ಯಾಬಿನೆಟ್ ದರ್ಜೆಯ ಸಚಿವ ಸ್ಥಾನದ ಜತೆಗೆ ಪ್ರಮುಖ ಖಾತೆಗಳಿಗೆ ಬೇಡಿಕೆ ಇಟ್ಟಿವೆ. ಎನ್‌ಡಿಎ ಮಿತ್ರಕೂಟದ ಸಣ್ಣಪುಟ್ಟ ಪಕ್ಷಗಳು ಡಿಮ್ಯಾಂಡ್ ಇಟ್ಟಿವೆ. ಇದೆಲ್ಲವನ್ನು ಸರಿದೂಗಿಸಲು ಬಿಜೆಪಿ 4:1 ಸೂತ್ರ ಹೆಣೆದಿದೆ. ಪುಟ 2



ಎನ್‌ಸಿಪಿಯ ಕಳಪೆ ಪ್ರದರ್ಶನದ ಹೊಣೆ ಹೊತ್ತುಕೊಂಡ

# ಅಜಿತ್ ಪವಾರ್

**ಮಹಾರಾಷ್ಟ್ರ:** 2024ರ ಲೋಕಸಭೆ ಚುನಾವಣೆಯಲ್ಲಿ ರಾಷ್ಟ್ರೀಯವಾದಿ ಕಾಂಗ್ರೆಸ್ ಪಕ್ಷ ತೋರಿದ ಕಳಪೆ ಪ್ರದರ್ಶನದ ಹೊಣೆಯನ್ನು ಅಜಿತ್ ಪವಾರ್ ಹೊತ್ತುಕೊಂಡಿದ್ದಾರೆ. ಚುನಾವಣಾ ಫಲಿತಾಂಶ ಹೊರಬಿದ್ದ ಬಳಿಕ ಮಹಾರಾಷ್ಟ್ರ ಉಪಮುಖ್ಯಮಂತ್ರಿ ಅಜಿತ್ ಪವಾರ್ ಗುರುವಾರ ಸಂಜೆ ಶಾಸಕಾಂಗ ಪಕ್ಷದ ಸಭೆ ನಡೆಸಿದರು. ಪುಟ 2



# ಮಂತ್ರಿ ಸ್ಥಾನಕ್ಕೆ ಒತ್ತಡ ಹಾಕಲ್ಲ

**ನವದೆಹಲಿ:** ನನಗೆ ಮಂತ್ರಿ ಸ್ಥಾನ ಬೇಕೆಂದು ನಾನು ಒತ್ತಡ ಹಾಕುವುದಿಲ್ಲ ಎಂದು ಮಂಡ್ಯ ಸಂಸದ, ಮಾಜಿ ಸಿಎಂ ಹೆಚ್‌ಡಿ ಕುಮಾರಸ್ವಾಮಿ ಹೇಳಿದರು.

ಎನ್‌ಡಿಎ ಸಭೆಯಲ್ಲಿ ಭಾಗವಹಿಸಲು ದೆಹಲಿಗೆ ಆಗಮಿಸಿದ ಅವರು ಮಾಧ್ಯಮಗಳ ಜೊತೆ ಮಾತನಾಡಿದರು. ನರೇಂದ್ರ ಮೋದಿ ನಾಯಕತ್ವದಲ್ಲಿ ಮತ್ತೆ ಸರ್ಕಾರ ಮುಂದುವರಿಯಲಿದೆ. ಸಚಿವ ಸ್ಥಾನದ ಬಗ್ಗೆ ನನಗೆ ಅಧಿಕೃತ ಮಾಹಿತಿ ಬಂದಿಲ್ಲ. ಆದರೂ ಸ್ಥಳೀಯ ಪಕ್ಷಗಳಿಗೆ ಸಹ ಖಾತೆ ನೀಡುತ್ತಾರೆ. ನಮ್ಮಿಂದ ಒಳ್ಳೆಯ ಕೆಲಸ ಮಾಡಲು ಸಾಧ್ಯ ಎನ್ನುವುದು ಹೈಕಮಾಂಡ್‌ಗೆ ಗೊತ್ತಿದೆ ಎಂದು ತಿಳಿಸಿದರು

ನಾಡಿನ ಜನತೆಗೆ, ದೇಶಕ್ಕೆ ಒಳ್ಳೆದಾಗುವ ಖಾತೆ ಸಿಕ್ಕಿದರೆ ಉತ್ತಮವಾಗಿ ಕೆಲಸ ಮಾಡಬಹುದು. ಡಾ. ಮಂಜುನಾಥ್‌ಗೆ ಖಾತೆ ನೀಡುವ ಬಗ್ಗೆ ಅವರೇ ತೀರ್ಮಾನ ಮಾಡುತ್ತಾರೆ. ನನಗೆ ಮಂತ್ರಿ ಸ್ಥಾನ ನೀಡಬೇಕು ಎಂದು ನಾನು ನಾನು ಒತ್ತಡ ಹಾಕುತ್ತಿಲ್ಲ. ಅವರು ನೀಡಿದರೆ ಜವಾಬ್ದಾರಿ ನಿರ್ವಹಿಸುತ್ತೇನೆ ಅಷ್ಟೇ. ತೀರ್ಮಾನ ಏನಿದ್ದರೂ ಸಹ ಅವರದ್ದು ಎಂದು ಪ್ರತಿಕ್ರಿಯಿಸಿದರು.

ಸಚಿವ ನಾಗೇಂದ್ರ ರಾಜೀನಾಮೆ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ಅವರು ಕೊಡಲೇಬೇಕಿತ್ತು ಕೊಟ್ಟಿದ್ದಾರೆ. ಕೊನೆಗೂ ಅತ್ತು ಕರೆದು ರಾಜೀನಾಮೆ ನೀಡಿದ್ದಾರೆ. ಸಿಎಂ ಡಿಸಿಎಂ ಎಷ್ಟು ನಾಟಕ ಮಾಡಿದ್ದಾರೆ ಅಂತ ನಿನ್ನೆ ನೀವೇ ತೋರಿಸಿದ್ದೀರಿ ಎಂದರು.



ಬಿಜೆಪಿಯಿಂದ ಪಕ್ಷಕ್ಕೆ ಬಂದವರಿಂದ ಕೊನೆಯವರೆಗೂ ಸಮಸ್ಯೆ

# ಸವದಿ ವಿರುದ್ಧ ಅಸಮಾಧಾನ

**ಬೆಳಗಾವಿ:** ಲೋಕಸಭೆ ಚುನಾವಣೆಯಲ್ಲಿ ಚಿಕ್ಕೋಡಿ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿಗೆ ಗೆಲುವಾದರೂ ಪಕ್ಷದ ಒಳಬೇಗುದಿ ಹೆಚ್ಚಾಗಿದೆ. ಇದೀಗ ಶಾಸಕ ಲಕ್ಷ್ಮಣ್ ಸವದಿ ವಿರುದ್ಧ ಸಚಿವ ಸತೀಶ್ ಜಾರಕಿಹೊಳಿ ಬಹಿರಂಗವಾಗಿಯೇ ಅಸಮಾಧಾನ ಹೊರಹಾಕಿದ್ದು, ಬಿಜೆಪಿಯಿಂದ ಪಕ್ಷಕ್ಕೆ ಬಂದವರಿಂದ ಕೊನೆಯ ವರೆಗೂ ಸಮಸ್ಯೆಯಾಯಿತು ಎಂದಿದ್ದಾರೆ.





ಅಥಣಿಯಲ್ಲಿ ಮಾತನಾಡಿದ ಅವರು, ಈಗ ಕಾಂಗ್ರೆಸ್ ಗೆ ಜಯ ಸಿಕ್ಕಿದೆ ಎಂದು ಹೇಳುತ್ತಿದ್ದಾರೆ. ಮುಖಂಡರು ಬದಲಾದರೂ ಕಾರ್ಯಕರ್ತರು ಬದಲಾಗಲಿಲ್ಲ. ಅಥಣಿಯಲ್ಲಿ 20-30 ಸಾವಿರ ಲೀಡ್ ಸಿಗುತ್ತೆ ಅಂದುಕೊಂಡಿದ್ದೆವು. ಆದರೆ ಏನೋ ಮಾಡಲು ಹೋಗಿ ಇನ್ನೇನೋ ಆಯಿತು ಎಂದು ಹೇಳಿದ್ದಾರೆ.

ಅವರು ಏಕೆ ಹಾಗೆ ಮಾಡಿದರು, ಅವರ ಪ್ಲ್ಯಾನ್ ಏನಿತ್ತು ನೋಡೋಣ. ಅವರು ಸೀರಿಯಲ್ ನಲ್ಲಿ ಬರುವಂತೆ ನಿಧಾನ ಆಗುತ್ತಾ ಹೋದರು. ಸರಿಯಾಗಿ ಪ್ರಚಾರ ಮಾಡಲಿಲ್ಲ, ಇದನ್ನು ನಾವು ನೋಡಿದ್ದೇವೆ. ವಿಶ್ವಾಸ ಇಟ್ಟು ಕೊಟ್ಟಿದ್ದೆವು, ಬಹಳ ನಂಬಿದ್ದೆವು. ಆದರೆ ಬಹಳ ಮೋಸ ಮಾಡಿದ್ದಾರೆ ಎಂದು ಅವರು ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ನಮಗೆ ಹತ್ತಿರ ಬರಲು ಅವರಿಗೆ ಒಳ್ಳೆಯ ಅವಕಾಶ ಇತ್ತು. ಆದರೆ, ಬಿಜೆಪಿಯಿಂದ ಪಕ್ಷಕ್ಕೆ ಬಂದವರು ಕೊನೆಯವರೆಗೆ ಸಮಸ್ಯೆ ಮಾಡಿದರು ಎಂದು ಲಕ್ಷ್ಮಣ್ ಸವದಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಪುಟ 2

ನಕಲಿ ಆಧಾರ್ ಕಾರ್ಡ್ ತೋರಿಸಿ ಸಂಸತ್ ಪ್ರವೇಶಿಸಲು ಯತ್ನ

# ಮೂವರ ಬಂಧನ



**ನವದೆಹಲಿ:** ನಕಲಿ ಆಧಾರ್ ಕಾರ್ಡ್ ತೋರಿಸಿ ಸಂಸತ್ ಭವನ ಪ್ರವೇಶಿಸಲು ಮೂವರು ಯತ್ನಿಸಿದ ಘಟನೆ ಜೂನ್ 4ರಂದು ನಡೆದಿರುವುದು ಈಗ ಬೆಳಕಿಗೆ ಬಂದಿದೆ. ಮೈಸೂರು ಕೊಡಗು ಮಾಜಿ ಸಂಸದ ಪ್ರತಾಪ್ ಸಿಂಹ ಅವರಿಂದ ಪಾಸ್ ಗಿಟ್ಟಿಸಿಕೊಂಡು ಸಂಸತ್ ಪ್ರವೇಶಿಸಿ ಲೋಕಸಭೆ ಕಲಾಪದ ವೇಳೆ ಅಶ್ರುವಾಯು ಸಿಡಿಸಿದ್ದ ಪ್ರಕರಣದ ನೆನಪು ಪೂರ್ಣ ಮಾಸುವ ಮುನ್ನವೇ ಈ ವಿದ್ಯಮಾನ ನಡೆದಿದೆ. ಘಟನೆ ಸಂಬಂಧ ಮೂವರನ್ನು ಬಂಧಿಸಲಾಗಿದೆ. ಪುಟ 2

ರಾಜ್ಯಾದ್ಯಂತ ಮುಂದುವರಿದ ಮಳೆ

# ಸಿಡಿಲಿಗೆ ಮತ್ತಿಬ್ಬರು ಬಲಿ

**ಬೆಂಗಳೂರು:** ಬೆಂಗಳೂರು ಸೇರಿದಂತೆ ಕರ್ನಾಟಕದ ವಿವಿಧೆಡೆ ಮುಂಗಾರು ಮಳೆಯ ಅಬ್ಬರ ಭಾರಿ ಜೋರಾಗಿದೆ. ಬೆಂಗಳೂರಿನ ಕೆಆರ್ ಮಾರುಕಟ್ಟೆ, ಮೆಜೆಸ್ಟಿಕ್, ರಿಚ್ಮಂಡ್ ಟೌನ್ ಸೇರಿದಂತೆ ಅನೇಕ ಕಡೆಗಳಲ್ಲಿ ಗುರುವಾರ ತಡರಾತ್ರಿ ಸಾಧಾರಣ ಮಳೆಯಾಯಿತು. ಶುಕ್ರವಾರ ಮುಂಜಾನೆಯೂ ಅನೇಕ ಕಡೆಗಳಲ್ಲಿ ತುಂತುರು ಮಳೆಯಾಯಿತು. ಇನ್ನು ರಾಜ್ಯದ ಇತರ ಕಡೆಗಳಲ್ಲಿ ಗುಡುಗು ಸಿಡಿಲಿನೊಂದಿಗೆ ಮಳೆ ಅಬ್ಬರಿಸಿದೆ.

ಬುಧವಾರವಷ್ಟೇ ಹಾಸನ ಜಿಲ್ಲೆಯಲ್ಲಿ ಸಿಡಿಲಿನಿಂದ ಮೂವರು ಮೃತಪಟ್ಟಿದ್ದರು. ಗದಗ ಜಿಲ್ಲೆಯ ನರಗುಂದ ತಾಲೂಕಿನ ಬಂಡೆಮ್ಮನಗರ ಗ್ರಾಮದ ಬಳಿ ಕುರಿ ಮೇಯಿಸಲು ಹೋಗಿದ್ದ 17 ವರ್ಷದ ಯಲ್ಲಪ್ಪ ಮೃತಪಟ್ಟಿದ್ದಾರೆ. 15 ವರ್ಷದ ಮತ್ತೊಬ್ಬ ಬಾಲಕ ಗಾಯಗೊಂಡು ಆಸ್ಪತ್ರೆ ಸೇರಿದ್ದಾನೆ.



ಕೊಪ್ಪಳ ಜಿಲ್ಲೆ ಕುಷ್ಟಗಿ ತಾಲೂಕಿನ ಜೆ.ರಾಂಪುರ ಗ್ರಾಮದಲ್ಲಿ ಹೊಲದಲ್ಲಿ ಮರದ ಕೆಳಗೆ ನಿಂತಿದ್ದಾಗ ಸಿಡಿಲು ಬಡಿದು ರತ್ನಮ್ಮ ಓತಗೇರಿ ಎಂಬ ಮಹಿಳೆ ಸಾವನ್ನಪ್ಪಿದ್ದಾರೆ. ತಾವರಗೇರಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಕೊಪ್ಪಳದ ಹಾಲವರ್ತಿ ಗ್ರಾಮದಲ್ಲಿ ತೆಂಗಿನ ಮರಕ್ಕೆ ಸಿಡಿಲು ಬಡಿದು ಹೊತ್ತಿ ಉರಿದಿದೆ. ದೃಶ್ಯ ಮೊಬೈಲ್ ನಲ್ಲಿ ಸೆರೆಯಾಗಿದೆ. ಕೊಪ್ಪಳ ತಾಲೂಕಿನ ಬಚಿನಾಳ ಗ್ರಾಮದಲ್ಲಿ ಭಾರಿ ಮಳೆಗೆ ಸೇತುವೆ ಜಲಾವೃತಗೊಂಡಿದ್ದು, ಸಂಪರ್ಕ ಕಡಿತಗೊಂಡಿದೆ.

ಬಾಗಲಕೋಟೆಯ ಕುಳಗೇರಿ ಕ್ರಾಸ್ ನಲ್ಲಿ ಹಲವು ಮನೆಗಳಿಗೆ ನೀರು ನುಗ್ಗಿದ್ದು, ವಸ್ತುಗಳೆಲ್ಲ ನೀರಿನಲ್ಲಿ ತೇಲಿ ಹೋಗಿವೆ. ನಿವಾಸಿಗಳು ರಾತ್ರಿಯೆಲ್ಲಾ ಜಾಗರಣೆ ಮಾಡಿ ಪರದಾಡಿದ್ದಾರೆ. ಪುಟ 2

ಹಲವು ಮನೆಗಳಿಗೆ ಬೆಂಕಿ ಹಚ್ಚಿದ ಗುಂಪು

# ವ್ಯಕ್ತಿಯ ಶಿರಚ್ಛೇದ



**ಮಣಿಪುರ:** ಮಣಿಪುರದಲ್ಲಿ ದುಷ್ಕರ್ಮಿಗಳ ಅಟ್ಟಹಾಸ ಹೆಚ್ಚಿದೆ, ವ್ಯಕ್ತಿಯೊಬ್ಬರ ಶಿರಚ್ಛೇದ ಮಾಡಿರುವ ಘಟನೆ ವರದಿಯಾಗಿದೆ. ಬಲಿಯಾದವರನ್ನು ಸೋಬಾಮ್ ಶರತ್ ಕುಮಾರ್ ಸಿಂಗ್ ಎಂದು ಗುರುತಿಸಲಾಗಿದೆ. ಶರತ್‌ಕುಮಾರ್ ಅವರು ಲೀಶಾಬಿಥೋಲ್ ನಲ್ಲಿರುವ ತಮ್ಮ ಮಗನ ಜಮೀನಿನಿಂದ ಹಿಂತಿರುಗುತ್ತಿದ್ದಾಗ ಸಂಜೆ 5 ಗಂಟೆ ಸುಮಾರಿಗೆ ಈ ಘಟನೆ ಸಂಭವಿಸಿದೆ.

ಪೊಲೀಸರ ಪ್ರಕಾರ, ಶರತ್ ಕುಮಾರ್ ಮನೆಗೆ ಹೋಗುತ್ತಿದ್ದಾಗ ಖಾಸಿಯಾ ಪುಂಜಿ ಬಳಿ ಅಪರಿಚಿತ ದುಷ್ಕರ್ಮಿಗಳು ಅವರನ್ನು ಕಟ್ಟಿಹಾಕಿದ್ದಾರೆ. ಅವರ ಕುಟುಂಬ ಸದಸ್ಯರು ಜಿರಿಬಾಮ್ ಜಿಲ್ಲಾ ಪೊಲೀಸರಿಗೆ ತಕ್ಷಣ ಘಟನೆ ಕುರಿತು ಮಾಹಿತಿ ನೀಡಿದ್ದಾರೆ, ಪ್ರದೇಶದಲ್ಲಿ ಜಂಟಿ ಶೋಧ ಕಾರ್ಯಾಚರಣೆಯನ್ನು ನಡೆಸಲಾಯಿತು. ಪುಟ 2

## ನಿಯಂತ್ರಣ ತಪ್ಪಿ ಹಳ್ಳಕ್ಕೆ ಉರುಳಿದ ಕಾರು : ಮೂವರ ದುರ್ಮರಣ!

**ಚಿಕ್ಕಬಳ್ಳಾಪುರ:** ಜಿಲ್ಲೆಯ ಗೌರಿಬಿದನೂರು ಗ್ರಾಮಾಂತರ ಪೊಲೀಸ್ ಠಾಣೆ ವ್ಯಾಪ್ತಿಯ ನಗರಗೆರೆ ಬಳಿಯ ತಿರುವಿನಲ್ಲಿ ಕಾರು ಚಾಲಕನ ನಿಯಂತ್ರಣ ತಪ್ಪಿ ತಗ್ಗು ಪ್ರದೇಶಕ್ಕೆ ನುಗ್ಗಿದ ಪರಿಣಾಮ ಕಾರಿನಲ್ಲಿದ್ದ ನಾಲ್ವರ ಪೈಕಿ ಮೂವರು ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ನಡೆದಿದೆ.



ಗುರುವಾರ ತಡರಾತ್ರಿ ನಡೆದ ಘಟನೆಯಲ್ಲಿ ಓರ್ವನ ಸ್ಥಿತಿ ಗಂಭೀರವಾಗಿದೆ. ಅಪಘಾತದಲ್ಲಿ ಮೃತಪಟ್ಟವರನ್ನು ಗೌರಿಬಿದನೂರು ತಾಲ್ಲೂಕು ವಾಟದಹೊಸಹಳ್ಳಿ ಬೆಸ್ಕಾಂ ಶಾಖೆಯ ಲೈನ್‌ಮ್ಯಾನ್‌ಗಳಾದ ಶ್ರೀಧರ್, ವೇಣು ಗೋಪಾಲ್, ಮಂಜುನಾಥ್ ಎಂದು ಗುರುತಿಸಲಾಗಿದೆ.

**ಅಷ್ಟಕ್ಕೂ ಆಗಿದ್ದೇನು?:** ಕಳೆದ ರಾತ್ರಿ ಗೌರಿಬಿದನೂರು ತಾಲ್ಲೂಕು ನಗರಗೆರೆ-ವಾಟದಹೊಸಹಳ್ಳಿ ರಸ್ತೆಯಲ್ಲಿ ವೇಣುಗೋಪಾಲ್ ಬ್ರಿಜಾ ಕಾರಿನಲ್ಲಿ ಬರುವಾಗ, ಚಾಲಕನ ನಿಯಂತ್ರಣ ತಪ್ಪಿ ಕಾರು ರಸ್ತೆ ಪಕ್ಕದ ತಗ್ಗು ಪ್ರದೇಶಕ್ಕೆ ಉರುಳಿದೆ. ಇದರಿಂದ ಶ್ರೀಧರ್ (28) ವೇಣುಗೋಪಾಲ (38), ಮಂಜುನಾಥ (37), ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ. ಇನ್ನೂ ಕಾರಿನಲ್ಲಿದ್ದ ಶಿವಕುಮಾರ್ ಎಂಬಾತ ಗಂಭೀರವಾಗಿ ಗಾಯಗೊಂಡು ಬೆಂಗಳೂರಿನ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಘಟನೆಗೆ ನಿಖರ ಕಾರಣ ತಿಳಿದು ಬಂದಿಲ್ಲ. ಆದ್ರೆ, ನಗರಗೆರೆ ಬಳಿ ತಿರುವು ಇರುವುದರಿಂದ ಮುಂಜಾನೆ ಸಮಯದಲ್ಲಿ ಚಾಲಕ ನಿದ್ರೆಗೆ ಜಾರಿದ್ದು ಅಪಘಾತಕ್ಕೆ ಕಾರಣವಾಗಿರಬಹುದು ಎಂಬ ಶಂಕೆ ವ್ಯಕ್ತವಾಗಿದೆ. ಸ್ಥಳಕ್ಕೆ ಗೌರಿಬಿದನೂರು ಗ್ರಾಮಾಂತರ ಠಾಣೆಯ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡಿದ್ದಾರೆ. ಮೃತಪಟ್ಟವರ ಶವಗಳನ್ನ ಗೌರಿಬಿದನೂರು ಸಾರ್ವಜನಿಕ ಆಸ್ಪತ್ರಗೆ ರವಾನಿಸಿದ್ದಾರೆ.

## ಸಚಿವ ಸ್ಥಾನಕ್ಕೆ ರಾಜೀನಾಮೆ ಕೊಟ್ಟ ನಾಗೇಂದ್ರ

**ಬೆಂಗಳೂರು:** ರಾಜ್ಯದಲ್ಲಿ ತೀವ್ರ ರಾಜಕೀಯ ಕೆಸರೆರಚಾಟಕ್ಕೆ ಕಾರಣವಾಗಿದ್ದ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದ 187 ಕೋಟಿ ರೂ. ಹಗರಣಕ್ಕೆ ಸಂಬಂಧಿಸಿದಂತೆ ನೈತಿಕ ಹೊಣೆಗಾರಿಕೆ ಹೊತ್ತು ಸಚಿವ ಬಿ.ನಾಗೇಂದ್ರ, ರಾಜೀನಾಮೆ ಸಲ್ಲಿಕೆ ಮಾಡಿದ್ದಾರೆ.



ಸಚಿವ ಬಿ.ನಾಗೇಂದ್ರ, ಅವರ ರಾಜೀನಾಮೆಗೆ ವಿರೋಧ ಪಕ್ಷಗಳು ಆಗ್ರಹಿಸಿದ್ದವು. ಪಕ್ಷ ಹಾಗೂ ಸರ್ಕಾರಗ ಘನತೆಗೆ ಧಕ್ಕೆಯಾಗಬಾರದು. ಹಾಗಾಗಿ ಸ್ವಯಂ ಪ್ರೇರಿತರಾಗಿ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಲು ಮುಂದಾಗಿದ್ದಾರೆ. ಈ ಹಿನ್ನೆಲೆಯಲ್ಲಿ ಸರ್ಕಾರದ ಘನತೆ ಉಳಿಸಲು ನಾಗೇಂದ್ರ, ಸ್ವಯಂ ಪ್ರೇರಣೆಯಿಂದ ರಾಜೀನಾಮೆ ನೀಡಲು ಮುಂದಾಗಿದ್ದಾರೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಾಹಿತಿ ನೀಡಿದ್ದರು. ಇದರ ಬೆನ್ನಲ್ಲಿಯೇ ಬಿ. ನಾಗೇಂದ್ರ, ಅವರು ತಮ್ಮ ಸಚಿವ ಸ್ಥಾನಕ್ಕೆ ರಾಜೀನಾಮೆ ಸಲ್ಲಿಕೆ ಮಾಡಿದ್ದಾರೆ. ಈ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸಚಿವ ಸಂಪುಟದ ಮೊದಲ ವಿಕೆಟ್ ಪತನವಾಗಿದೆ.

# ಬಹುಕೋಟಿ ಬಿಟ್ ಕಾಯಿನ್ ಹಗರಣ ಶ್ರೀಕಿ ಗರ್ಲ್ ಫ್ರೆಂಡ್ ಪೂಜಾ ಭಟ್‌ಗೆ ನೋಟಿಸ್

**ಬೆಂಗಳೂರು:** ಬಹುಕೋಟಿ ಬಿಟ್ ಕಾಯಿನ್ ಹಗರಣ ಪ್ರಕರಣದ ಆರೋಪಿಯಾಗಿರುವ ಅಂತರರಾಷ್ಟ್ರೀಯ ಹ್ಯಾಕರ್ ಶ್ರೀಕೃಷ್ಣ ಅಲಿಯಾಸ್ ಶ್ರೀಕಿಯಿಂದಾಗಿ ಆತನ ಗರ್ಲ್ ಫ್ರೆಂಡ್‌ಗೂ ಸಂಕಷ್ಟ ಎದುರಾಗಿದೆ. ಎಸ್‌ಐಟಿ ಅಧಿಕಾರಿಗಳು ಆರೋಪಿ ಶ್ರೀಕಿ ಗರ್ಲ್ ಫ್ರೆಂಡ್ ಪೂಜಾ ಭಟ್ ಅವರಿಗೆ ವಿಚಾರಣೆಗೆ ಹಾಜರಾಗುವಂತೆ ನೋಟಿಸ್ ನೀಡಿದ್ದಾರೆ. ತುರ್ತಾಗಿ ವಿಚಾರಣೆಗೆ ಹಾಜರಾಗಲು ನೋಟಿಸ್‌ನಲ್ಲಿ ತಿಳಿಸಲಾಗಿದೆ.



ಶ್ರೀಕಿ ಬಿಟ್ ಕಾಯಿನ್ ವಹಿವಾಟು, ಶ್ರೀಕಿಯಿಂದ ಕಾರು, ಮನೆ ಪಡೆದುಕೊಂಡಿರೋ ಹಿನ್ನೆಲೆ ಶ್ರೀಕಿ ಗರ್ಲ್ ಫ್ರೆಂಡ್ ಪೂಜಾ ಭಟ್‌ಗೆ ನೋಟಿಸ್ ನೀಡಲಾಗಿದೆ. ಸದ್ಯ ರಾಜಸ್ಥಾನದಲ್ಲಿ ಇರುವ ಪೂಜಾ ಭಟ್ ವಿಚಾರಣೆಗಾಗಿ ಬೆಂಗಳೂರಿಗೆ ಆಗಮಿಸಬೇಕಿದೆ. 2017ರಲ್ಲಿ ಆರೋಪಿ ಶ್ರೀಕಿ ತುಮಕೂರಿನಲ್ಲಿರುವ ಯೂನೊಕಾಯಿನ್ ಟೆಕ್ನಾಲಜೀಸ್ ಕಂಪನಿಯ ಸರ್ವರ್ ಹ್ಯಾಕ್ ಮಾಡಿ 60.6 ಬಿಟ್ ಕಾಯಿನ್‌ಗಳನ್ನು (ಮಾರುಕಟ್ಟೆ ಮೌಲ್ಯ 32.48 ಕೋಟಿ ಮೌಲ್ಯ) ಕಳ್ಳತನ ಮಾಡಿದ್ದ. ಈ ಸಂಬಂಧ ಸದ್ಯ ಎಸ್‌ಐಟಿ ಅಧಿಕಾರಿಗಳು, ಆತನನ್ನು ಬಂಧಿಸಿದ್ದಾರೆ. ಇನ್ನು ಈ ಘಟನೆ ಸಂಬಂಧ ಯೂನೊಕಾಯಿನ್ ಟೆಕ್ನಾಲಜೀಸ್ ಕಂಪನಿ ನಿರ್ದೇಶಕ ಬಿ.ವಿ. ಹರೀಶ್ ಅವರು ತುಮಕೂರಿನ ನ್ಯೂ ಎಕ್ಸ್‌ಟೆನ್ಷನ್ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ಮೊದಲಿಗೆ ಆರೋಪಿ ಯಾರು ಎಂದು ಪತ್ತೆಯಾಗದ ಹಿನ್ನೆಲೆ ಅಪರಿಚಿತರ ವಿರುದ್ಧ ಎಫ್‌ಐಆರ್ ದಾಖಲಾಗಿತ್ತು. ಪ್ರಕರಣದ ತನಿಖೆ ಕೈಗೆತ್ತಿಕೊಂಡು ಪರಿಶೀಲಿಸಿದಾಗ, ಶ್ರೀಕಿಯೇ ಆರೋಪಿ ಎಂಬುದು ಸಾಭೀತಾಗಿದೆ. ಮತ್ತೊಂದೆಡೆ ಈ ಪ್ರಕರಣದ ವಿಚಾರಣೆ ವೇಳೆ ಕೆಲವು ಬಾರಿ ಶ್ರೀಕಿ ಗೈರಾಗಿದ್ದ. ಅಲ್ಲದೆ ತಲೆಮರೆಸಿಕೊಂಡು ಸುತ್ತಾಡುತ್ತಿದ್ದ. ಬೆಂಗಳೂರಿನ ಬಳ್ಳಾರಿ ರಸ್ತೆಯಲ್ಲಿರುವ ಪಂಚತಾರಾ ಹೋಟೆಲ್‌ವೊಂದರಲ್ಲಿ ಆತ ವಾಸ್ತವ್ಯ ಹೂಡಿದ್ದ ಬಗ್ಗೆ ಮಾಹಿತಿ ಸಿಗುತ್ತಿದ್ದಂತೆ ಅದೇ ಹೋಟೆಲ್‌ನಲ್ಲಿಯೇ ಆತನನ್ನು ಒಂದು ತಿಂಗಳ ಹಿಂದೆ ಬಂಧಿಸಲಾಗಿದೆ. ಸದ್ಯ ಇದೀಗ ರಾಜಸ್ಥಾನದಲ್ಲಿರುವ ಶ್ರೀಕಿ ಗರ್ಲ್ ಫ್ರೆಂಡ್ ಪೂಜಾ ಭಟ್‌ಗೆ ನೋಟಿಸ್ ನೀಡಲಾಗಿದೆ.

## ಎಸ್‌ಐಟಿ ಯಿಂದ ಮೊದಲ ಚಾರ್ಜ್ ಶೀಟ್ ಸಲ್ಲಿಕೆ

**ಬೆಂಗಳೂರು:** ಬಿಟ್ ಕಾಯಿನ್ ಹಗರಣ ಪ್ರಕರಣದ ತನಿಖೆ ಚುರುಕುಗೊಂಡಿದ್ದು, ಎಸ್‌ಐಟಿ ಯಿಂದ ಮೊದಲ ಚಾರ್ಜ್ ಶೀಟ್ ಸಲ್ಲಿಕೆಯಾಗಿದೆ. ಕೆಜಿ ನಗರ ಡ್ರಗ್ಸ್ ಕೇಸ್‌ನಲ್ಲಿ ಶ್ರೀಖಿ, ರಾಬಿನ್ ಖಂಡೇವಾಲ ಹಾಗೂ ಸುನೀಶ್ ಹೆಗ್ಡೆ ಸೇರಿ ಒಟ್ಟು 6 ಜನರ ವಿರುದ್ಧ ದೋಷಾರೋಪ ಪಟ್ಟಿ ಸಲ್ಲಿಸಿದೆ. ಮೂರು ಎಫ್‌ಐಆರ್‌ಗಳನ್ನು ಎಸ್‌ಐಟಿ ತನಿಖೆ ಮಾಡುತ್ತಾ ಇತ್ತು. ಬಿಟ್ ಕಾಯಿನ್ ಹಗರಣದ ಮುನ್ನ ಡ್ರಗ್ಸ್ ಕೇಸ್ ಬಂದಿತ್ತು. ಆ ಕುರಿತು ತನಿಖೆ ನಡೆಸಿದಾಗ ಬಿಟ್ ಕಾಯಿನ್ ಹಗರಣ ಬೆಳಕಿಗೆ ಬಂದಿತ್ತು. ಈ ಹಿನ್ನಲೆ ನಿನ್ನೆ ಎಸ್‌ಐಟಿ ಮೊದಲನೇ ಎಸಿಎಂಎಂ ನ್ಯಾಯಾಲಯಕ್ಕೆ ಚಾರ್ಜ್ ಶೀಟ್ ಸಲ್ಲಿಕೆ ಮಾಡಿದೆ.






ಇದೇ 2015ರಲ್ಲಿ ಕೆಂಪೇಗೌಡನಗರ ಠಾಣೆಯಲ್ಲಿ ದಾಖಲಾಗಿದ್ದ ಡ್ರಗ್ಸ್ ಕೇಸ್‌ನಲ್ಲಿ ಶ್ರೀಕಿಯನ್ನು ಬಂಧಿಸಲಾಗಿತ್ತು. ಈ ಪ್ರಕರಣವನ್ನು ತನಿಖೆ ಮಾಡುತ್ತಿದ್ದ ವೇಳೆ ಬಿಟ್‌ಕಾಯಿನ್ ಪ್ರಕರಣ ಬೆಳಕಿಗೆ ಬಂದಿತ್ತು. ಅದರಂತೆ 2020ರಲ್ಲಿ ಸುಮಾರು ಸಾವಿರ ಕೋಟಿ ಹಗರಣದ ಬಿಟ್‌ಕಾಯಿನ್ ಕೇಸ್‌ನಲ್ಲಿ ಶ್ರೀಕಿ ಬಂಧನವಾಗಿತ್ತು. ಇದಾದ ನಂತರ ಶ್ರೀಕಿ ಕಳೆದ ಐದಾರು ವರ್ಷಗಳಿಂದ ವಿವಿಧ ಕ್ರಿಪ್ಟೋ ಕರೆನ್ಸಿ ಮಾರಾಟ ಪ್ಲಾಟ್‌ಫಾರ್ಮ್‌ಗಳನ್ನು ಹ್ಯಾಕ್ ಮಾಡಿ ಅವುಗಳಿಂದ ಸಾವಿರಾರು ಬಿಟ್‌ಕಾಯಿನ್‌ಗಳನ್ನು ಎಗರಿಸಿದ್ದನು. ಅಲ್ಲದೇ ರಾಜ್ಯ ಸರ್ಕಾರದ ಇ-ಸಂಗ್ರಹಣಾ ಪೋರ್ಟಲ್ ಜಾಲತಾಣ ಹ್ಯಾಕ್ ಮಾಡಿದ್ದನು. ಈ ಪ್ರಕರಣವನ್ನು ಸಿಸಿಬಿ ಪೊಲೀಸರು ತನಿಖೆ ನಡೆಸಿ, ಆರೋಪಿಯನ್ನು ಬಂಧಿಸಿದ್ದರು.

ಇನ್ನು 2017ರಲ್ಲಿ ತುಮಕೂರು ಸೆನ್ ಠಾಣೆಯಲ್ಲಿ ದಾಖಲಾಗಿದ್ದ ಬಿಟ್ ಕಾಯಿನ್ ಪ್ರಕರಣದ ಹಿನ್ನಲೆ ಇತ್ತೀಚೆಗಷ್ಟೇ ಶ್ರೀಕಿ ಅಂಡ್ ಟೀಮ್ ಮೇಲೆ ಕೋಕಾ ಕಾಯಿದೆ ಜಾರಿ ಮಾಡಲಾಗಿತ್ತು. ಕರ್ನಾಟಕ ಸಂಘಟಿತ ಅಪರಾಧ ನಿಯಂತ್ರಣ ಕಾಯ್ದೆಯಡಿ ಕೇಸ್ ದಾಖಲಾಗಲಿದೆ. ಈ ಕಾಯ್ದೆಯಲ್ಲಿ ಕನಿಷ್ಠ ಒಂದು ವರ್ಷ ಅಪರಾಧಿಗಳಿಗೆ ಜಾಮೀನು ಸಿಗುವುದಿಲ್ಲ.

# ವಾಲ್ಮೀಕಿ ನಿಗಮ ಹಗರಣ: ಇಡಿ ಮೊರೆ ಹೋದ ಬಿಜೆಪಿ

**ಬೆಂಗಳೂರು:** ರಾಜ್ಯ ಸರ್ಕಾರದ ಕಾಲಿಗೆ ಹಗರಣದ ಸುಳಿ ಸುತ್ತಿಕೊಂಡಿದೆ. ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದಿರುವ ಅವ್ಯವಹಾರ ಆರೋಪ ಕೇಸ್ ಸರ್ಕಾರಕ್ಕೆ, ಅದ್ರಲ್ಲೂ ಸಿಎಂ ಸಿದ್ದರಾಮಯ್ಯಗೆ ತಲೆನೋವಾಗಿ ಪರಿಣಮಿಸಿತ್ತು. ಈ ಹಗರಣದ ತನಿಖೆಯನ್ನು ಇತ್ತೀಚೆಗೆ ಅಧಿಕೃತವಾಗಿ ಸರ್ಕಾರ ಎಸ್‌ಐಟಿಗೆ ವಹಿಸಿತ್ತು ಮತ್ತು ಇಬ್ಬರ ಬಂಧನ ಕೂಡ ಆಗಿದೆ. ಇದೀಗ ಪ್ರಕರಣದ ತನಿಖೆ ನಡೆಸುವಂತೆ ಇಡಿಗೆ ಬಿಜೆಪಿ ಮುಖಂಡ ಎನ್. ಆರ್.ರಮೇಶ್ ಮತ್ತು ಕರ್ನಾಟಕ ರಾಷ್ಟ್ರ ಸಮಿತಿ ಇಡಿಗೆ ದೂರು ನೀಡಿದೆ.

**ಸಚಿವರಷ್ಟೇ ಅಲ್ಲ, ಸಿಎಂ ರಾಜೀನಾಮೆ ನೀಡಬೇಕು:** ಪ್ರಕರಣದ ಬಗ್ಗೆ ರಾಜಪಾಲರಿಗೂ ದೂರು ನೀಡಲಾಗಿದೆ. ಈ ಕುರಿತಾಗಿ ಬೆಂಗಳೂರಿನಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮಾಧ್ಯಮದವರೊಂದಿಗೆ ಮಾತನಾಡಿದ್ದು, ಸಚಿವರಷ್ಟೇ ಅಲ್ಲ, ಸಿಎಂ ಸಿದ್ದರಾಮಯ್ಯ ರಾಜೀನಾಮೆ ಪಡೆಯಲು ಆಗ್ರಹಿಸಿದ್ದೇವೆ. ಹಣಕಾಸು ಖಾತೆ ಸಿಎಂ ಬಳಿ ಇದೆ, ಅವರು ರಾಜೀನಾಮೆ ಕೊಡಬೇಕು ಎಂದು ಆಗ್ರಹಿಸಿದ್ದಾರೆ.

ಈ ಅಕ್ರಮ ಸಂಬಂಧ ರಾಜ್ಯಾದ್ಯಂತ ಪ್ರತಿಭಟನೆ ಮಾಡುತ್ತೇವೆ. ವಾಲ್ಮೀಕಿ ನಿಗಮದ ಹಣ ಲೋಕಸಭೆ ಚುನಾವಣೆಗೂ ಬಳಸಿದ್ದಾರೆ. ಸಿದ್ದರಾಮಯ್ಯ ಹಾರಿಕೆ ಉತ್ತರ ಕೊಟ್ಟರೆ ಸುಮ್ಮನೆ ಇರುವುದಿಲ್ಲ. ಆನೆ ನಡೆದಿದ್ದೇ ದಾರಿ ಎಂಬ ವರ್ತನೆ ತೋರಿದರೆ ಸುಮ್ಮನೆ ಇರಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

**ಸಿಎಂ ಜೇಬಿಗೆ ಹಣ ಹೋಗಿದೆ:** ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಮಾತನಾಡಿದ್ದು, ಸಿಎಂ ಜೇಬಿಗೆ ಹಣ ಹೋಗಿದೆ, ಚುನಾವಣೆಗೂ ಹಣ ಬಳಸಿದ್ದಾರೆ. ಸಿಎಂ ಸಿದ್ದರಾಮಯ್ಯ ಮೂಗಿನ ಅಡಿಯಲ್ಲಿ ಈ ಹಗರಣ ನಡೆದಿದೆ. ಸಿಎಂ ಸಿದ್ದರಾಮಯ್ಯ ಪ್ರಪಂಚದಲ್ಲಿ ನಾನೇ ಬುದ್ಧಿವಂತ ಎನ್ನುತ್ತಾರೆ. ನಿನ್ನ ಮೂಗಿನ ಅಡಿಯಲ್ಲೇ ಹಗರಣ ಆಗಿದೆ, ಸಿಎಂ ಆಗಲು ಲಾಯಕ್ಕಾ ಎಂದು ಪ್ರಶ್ನಿಸಿದ್ದಾರೆ.

ಸಚಿವ ಬಿ.ನಾಗೇಂದ್ರಗೆ 20% ಹಣ, ಸಿಎಂಗೆ 80% ಹಣ ಹೋಗಿದೆ. ಸಿದ್ದರಾಮಯ್ಯ ಇದರಲ್ಲಿ ಪಾಲು ಪಡೆದಿಲ್ಲ ಅಂದರೆ ಸಿಬಿಐಗೆ ಕೊಡಲಿ. 187 ಕೋಟಿ ರೂ. ಟಕಾಟಕ್ ವರ್ಗಾವಣೆ ಮಾಡಿದ ಎಟಿಎಂ ಸರ್ಕಾರ. ಚುನಾವಣೆ ವೇಳೆ ಬೇರೆ ಬೇರೆ ನಿಗಮದ ಹಣ ಬಳಸಿಕೊಂಡಿದ್ದಾರೆ. ಹೈದರಾಬಾದ್ ಐಟಿ ಕಂಪನಿಗೆ ಹಣ ಹೇಗೆ ಹೋಯಿತು ಉತ್ತರಿಸಲಿ ಎಂದು ವಾಗ್ದಾಳಿ ಮಾಡಿದ್ದಾರೆ. ಮಾನ, ಮರ್ಯಾದೆ ಇದ್ರೆ ಸಿಎಂ ರಾಜೀನಾಮೆ ಕೊಟ್ಟು ಹೋಗಬೇಕು. ಮೊದಲು ನಾಗೇಂದ್ರ ವಿಕೆಟ್ ಬೀಳಬೇಕು. ಗಾಂಧಿ ಪ್ರತಿಮೆ ಮುಂದೆ ಪ್ರತಿಭಟಿಸಿ ಸಿಎಂ ಮನೆಗೆ ಮುತ್ತಿಗೆ ಹಾಕುತ್ತೇವೆ ಎಂದು ಹೇಳಿದ್ದಾರೆ.

# ಡಿಸಿಎಂ ಡಿಕೆ, ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್‌ಗೆ ಜಾರಕಿಹೊಳಿ ಬಹಿರಂಗ ಎಚ್ಚರಿಕೆ!

**ಬೆಂಗಳೂರು:** ಲೋಕಸಭಾ ಚುನಾವಣೆಯಲ್ಲಿ ಬಿಜೆಪಿಯ ಡಾ.ಮಂಜುನಾಥ್ ವಿರುದ್ಧ ಡಿ.ಕೆ.ಸುರೇಶ್ ಸೋಲನುಭವಿಸಿದ್ದಾರೆ. ಇನ್ನು ಅಥಣಿಯಲ್ಲಿ ಈ ಬಗ್ಗೆ ಮಾತನಾಡಿದ ಮಾಜಿ ಸಚಿವ ರಮೇಶ್ ಜಾರಕಿಹೊಳಿ ಡಿ.ಕೆ.ಬ್ರದರ್ಸ್ ದರ್ಪ ನಡೆಯಲ್ಲ. ಅವರು ಹೊಂದಾಣಿಕೆ ರಾಜಕಾರಣ ನಡೆಯುವುದಿಲ್ಲ. ಇನ್ನು ಮುಂದಿನ ದಿನದಲ್ಲಿ ದರ್ಪ ಮಾಡಿದರೆ ನಡೆಯುವುದಿಲ್ಲ. ಜನರು ಯಾವಾಗ್ ಬುದ್ಧಿ ಕಲಿಸಬೇಕು ಆಗ ಕಲಿಸುತ್ತಾರೆ ಅಂತ ಹೇಳಿದ್ದಾರೆ. ಇನ್ನು ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್‌ಗೆ ಎಚ್ಚರಿಕೆ ನೀಡಿರುವ ರಮೇಶ್ ಜಾರಕೀಹೊಳಿ ಮೇಲೆ ಒಬ್ಬ ದೇವರು ಇದ್ದಾರೆ, ದೇವರ ಆಟದ ಮುಂದೆ ಮನುಷ್ಯ ಆಟ ನಡೆಯುವುದಿಲ್ಲ. ಕಳೆದ ಮೂರು ತಿಂಗಳಿಂದ ಚುನಾವಣೆ ಸಮದಲ್ಲಿ ಅವರ ಮಾತಿನ ದರ್ಪ ನಡೆಯುತಿತ್ತು. ಜನರು ಎಲ್ಲವನ್ನೂ ಗಮನಿಸಿ ಅವರಿಗೆ ಬುದ್ಧಿ ಕಲಿಸಿದ್ದಾರೆ ಅಂತ ಹೇಳಿದರು. ಸ್ವಪಕ್ಷದ ನಾಯಕರ ವಿರುದ್ಧವೂ ರಮೇಶ್ ಜಾರಕಿಹೊಳಿ ಬೇಸರ ವ್ಯಕ್ತಪಡಿಸಿದ್ದು, ರಾಜ್ಯ ಬಿಜೆಪಿ ನಾಯಕರು ಅಹಂಕಾರವನ್ನು ಬಿಡಬೇಕು. ಕರ್ನಾಟಕ ನಾಯಕರು ಕೆಳ ಹಂತದ ನಾಯಕರ ಜೊತೆ ಸಂಪರ್ಕ ಮಾಡಬೇಕು. ರಾಜ್ಯದಲ್ಲಿ ಬಿಜೆಪಿಗೆ ಒಳ್ಳೆಯ ಭವಿಷ್ಯ ಇದೆ. ಈ ಫಲಿತಾಂಶದಿಂದ ನಮಗೆ ಎಚ್ಚರಿಕೆ ಗಂಟೆ ರವಾನೆ ಆಗಿದೆ, ಸದ್ಯಕ್ಕೆ ರಾಜ್ಯ ನಾಯಕರು ಒಳ್ಳೆಯ ರೀತಿಯಲ್ಲಿ ನಡೆಯುತ್ತಾರೆ ಎಂದು ಅನಿಸುತ್ತದೆ ಎಂದರು.



**ಇನ್ನೂ 20 ವರ್ಷ ಕೇಂದ್ರದಲ್ಲಿ ಬಿಜೆಪಿ ಆಡಳಿತ:** ಮತ್ತೊಮ್ಮೆ ನರೇಂದ್ರ ಮೋದಿ ಪ್ರಮಾಣದ ವಚನ ಸ್ವೀಕಾರ ಮಾಡುತ್ತಾರೆ. ಮೂರನೇ ಬಾರಿಗೆ ಪ್ರಮಾಣ ವಚನ ಸ್ವೀಕರಿಸುವುದು ಶತಸಿದ್ಧ, ಮೋದಿ ಪ್ರಮಾಣ ವಚನ ಸ್ವೀಕರಿಸಿ, ಅಂತರಾಷ್ಟ್ರೀಯ ಮಟ್ಟದಲ್ಲಿ ಮತ್ತೊಮ್ಮೆ ಭಾರತ ಕೀರ್ತಿ ಹೆಚ್ಚಲಿದೆ. ಮೋದಿ ಪ್ರಮಾಣ ವಚನ ಸ್ವೀಕರಿಸುದಿಲ್ಲ ಎಂಬುವುದು ಊಹಾಪೋಹ ಅಷ್ಟೇ. ಪಾಪ ಕಾಂಗ್ರೆಸ್‌ನವರು 60 ಸೀಟು ಬರಬೇಕಾಗಿತ್ತು, ಮತ್ತೆ 30 ಜಾಸ್ತಿ ಆಗುತ್ತಿದ್ದಂತೆ, ಅವರು ಭ್ರಮೆಯಲ್ಲಿ ಇದ್ದಾರೆ. ಜಗತ್ತು ಗೆದ್ದಂತೆ ಕಾಂಗ್ರೆಸ್ ನವರು ಅಂದುಕೊಂಡಿದ್ದಾರೆ, ಇನ್ನು 20 ವರ್ಷ ಬಿಜೆಪಿ ಕೇಂದ್ರದಲ್ಲಿ ಆಡಳಿತ ನಡೆಸುತ್ತದೆ ಎಂದು ಭವಿಷ್ಯ ನುಡಿದರು.

ಚಿಕ್ಕೋಡಿ ಸಂಸದ ಅಣ್ಣಾಸಾಬ್ ಜೊಲ್ಲೆ ಸೋಲು ನೋವಾಗಿದೆ, ನಾವು ರಾಜ್ಯ ನಾಯಕರ ಜೊತೆ ಚರ್ಚೆ ಮಾಡಲಾಗುವುದು. ಪ್ರಜಾ ಪ್ರಭುತ್ವ ವ್ಯವಸ್ಥೆಯಲ್ಲಿ ಎಲ್ಲರೂ ಟಿಕೆಟ್ ಕೇಳುತ್ತಾರೆ. ಎಲ್ಲಿ ತಪ್ಪಾಗಿದೆ ಎಂದು ನಾವು ಚರ್ಚೆ ಮಾಡುತ್ತೇವೆ. ಒಬ್ಬರಿಗೆ ಟಿಕೆಟ್ ಕೊಟ್ಟ ಬಳಿಕ ಎಲ್ಲರೂ ಕೆಲಸ ಮಾಡಬೇಕು. ಆದರೂ ಎಲ್ಲಿ ತಪ್ಪಾಗಿದೆ ಎಂದು ಚರ್ಚೆ ನಡೆಸುತ್ತೇವೆ ಎಂದು ತಿಳಿಸಿದರು.

## ಯೋಗೇಶ್ವರ್ ಕಸರತ್ತು

ವಿಧಾನಸಭೆ ಚುನಾವಣೆಯಲ್ಲಿ ಹೆಚ್‌ಡಿಕೆ ವಿರುದ್ಧವೇ ಸೋತಿದ್ದ ಯೋಗೇಶ್ವರ್ ಗುರುವಾರ ಕುಮಾರಸ್ವಾಮಿ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದ್ದಾರೆ. ಹಾಗೆ ನೋಡಿದರೆ ಡಿಕೆ ಸುರೇಶ್ ವಿರುದ್ಧ ಬೆಂಗಳೂರು ಗ್ರಾಮಾಂತರದಲ್ಲಿ ಸ್ಪರ್ಧಿಸಲು ಯೋಗೇಶ್ವರ್ ಆಸೆ ವ್ಯಕ್ತಪಡಿಸಿದ್ದರು. ಆದರೆ ಬಿಜೆಪಿ ವರಿಷ್ಠ ಸೂಚನೆ ಮೇರೆಗೆ ಕ್ಷೇತ್ರವನ್ನು ಬಿಡಲು ಒಪ್ಪಿಗೆ ನೀಡಿದ್ದರು.

ಲೋಕಸಭಾ ಚುನಾವಣೆಯಲ್ಲಿ ಡಾ.ಮಂಜುನಾಥ್ ಅವರನ್ನು ಗೆಲ್ಲಿಸಲು ಯೋಗೇಶ್ವರ್ ಚನ್ನಪಟ್ಟಣದಲ್ಲಿ ಕೆಲಸ ಮಾಡಿದ್ದರು. ಚನ್ನಪಟ್ಟಣದಲ್ಲಿ ಮಂಜುನಾಥ್ ಅವರಿಗೆ 1,06,971 ಮತಗಳು ಬಿದ್ದಿದ್ದರೆ ಡಿಕೆ ಸುರೇಶ್ ಅವರಿಗೆ 85,357 ಮತಗಳು ಬಿದ್ದಿತ್ತು.

ಚನ್ನಪಟ್ಟಣದ ಕಾಂಗ್ರೆಸ್ ಅಭ್ಯರ್ಥಿ ಯಾರು ಎನ್ನುವುದು ತಿಳಿದು ಬಂದಿಲ್ಲ. ಈಗಾಗಲೇ ಬೆಂಗಳೂರು ಗ್ರಾಮಾಂತರದ ಸೋಲನ್ನು ಡಿಕೆ ಶಿವಕುಮಾರ್ ಪ್ರತಿಷ್ಠೆಯಾಗಿ ತೆಗೆದುಕೊಂಡಿದ್ದಾರೆ. ಈ ಕಾರಣಕ್ಕೆ ಡಿಕೆ ಸುರೇಶ್ ಅವರಿಗೆ ಕಾಂಗ್ರೆಸ್ ಟಿಕೆಟ್ ನೀಡಬಹುದು ಎಂಬ ಮಾತು ಕೇಳಿ ಬರುತ್ತಿದೆ.

ಲೋಕಸಭೆ, ಪರಿಷತ್‌ನಲ್ಲಿ ಜೆಡಿಎಸ್‌ಗೆ ಕ್ಷೇತ್ರವನ್ನು ಬಿಟ್ಟುಕೊಟ್ಟ ಹಿನ್ನೆಲೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯನ್ನು ಎದುರಿಸಲು ನನಗೆ ಟಿಕೆಟ್ ಸಿಗಬಹುದು ಎಂಬ ವಿಶ್ವಾಸದಲ್ಲಿ ಯೋಗೇಶ್ವರ್ ಇದ್ದಾರೆ. ಎನ್‌ಡಿಎ ಸರ್ಕಾರದ ಪ್ರಮಾಣವಚನ ಕಾರ್ಯಕ್ರಮದ ಬಳಿಕ ಮೈತ್ರಿ ಅಭ್ಯರ್ಥಿ ಯಾರಾಗಬಹುದು ಎನ್ನುವುದು ಅಧಿಕೃತವಾಗಿ ಪ್ರಕಟವಾಗಲಿದೆ.

## ಸಾಗರ್ ಖಂಡ್ರೆ ಗೆಲುವು

ಶತಾಯುಷಿ, ಮಾಜಿ ಸಚಿವ ಭೀಮಣ್ಣ ಖಂಡ್ರೆ, ಮಾಜಿ ಶಾಸಕ ದಿವಂಗತ ವಿಜಯ ಕುಮಾರ್ ಖಂಡ್ರೆ, ಹಾಲಿ ಅರಣ್ಯ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ, ಬೀದರ್ ಡಿಸಿಸಿ ಬ್ಯಾಂಕ್ ಮತ್ತು ಮಹಾತ್ಮಾಗಾಂಧಿ ಸಕ್ಕರೆ ಕಾರ್ಖಾನೆ ಅಧ್ಯಕ್ಷ ಅಮರ ಖಂಡ್ರೆ ಹಾಗೂ ನೂತನ ಸಂಸದ ಸಾಗರ್ ಖಂಡ್ರೆ ಭಾಲ್ಕಿ ನೆಲದವರಾಗಿದ್ದಾರೆ. ಹೀಗಾಗಿ ಖಂಡ್ರೆ ಕುಟುಂಬ ಈಗ ಮತ್ತೆ ರಾಜಕೀಯವಾಗಿ ಪಾರಮ್ಯ ಮೆರೆದಿದ್ದು ಭಾಲ್ಕಿ ರಾಜಕೀಯ ಪವರ್ ಸೆಂಟರ್ ಆಗಿ ಬದಲಾಗಿದೆ.

ಈ ಹಿಂದೆ ಔರಾದ್ ರಾಜಕೀಯ ಶಕ್ತಿ ಕೇಂದ್ರವಾಗಿತ್ತು. ಔರಾದ್ ಕ್ಷೇತ್ರದಲ್ಲಿ ಹಾಲಿ ಶಾಸಕ ಪ್ರಭು ಚವ್ಹಾಣ್ ಅವರು ಹಿಂದಿನ ಬಿಜೆಪಿ ಸರಕಾರದಲ್ಲಿ ಪಶು ಸಂಗೋಪನೆ ಜೊತೆಗೆ ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದರು. ಜೊತೆಗೆ ಔರಾದ್‌ನವರೇ ಆದ ಉಮಾಕಾಂತ್ ನಾಗಮಾರಪ್ಪಳ್ಳಿ ಡಿಸಿಸಿ ಬ್ಯಾಂಕ್ ಅಧ್ಯಕ್ಷರಾಗಿದ್ದರು. ಬಳಿಕ ಮೋದಿ ನೇತೃತ್ವದ ಕೇಂದ್ರ ಸರ್ಕಾರದಲ್ಲಿ ಭಗವಂತ ಖೂಬಾ ಕೇಂದ್ರ ಸಚಿವರಾದ ಮೇಲೆ ಎಲ್ಲದ್ದಕ್ಕೂ ಔರಾದ್ ಪವರ್ ಸೆಂಟರ್ ಆಗಿ ಬದಲಾಗಿತ್ತು. ಆದರೆ ಈಗ ಲೋಕಸಭಾ ಚುನಾವಣೆಯ ಬಳಿಕ ಜಿಲ್ಲೆಯ ಚಿತ್ರಣ ಬದಲಾಗಿದ್ದು ಖಂಡ್ರೆ ಪರಿವಾರ ಪವರ್ ಪುಲ್ ಆಗಿದೆ.

ಮೊದಲು ಔರಾದ್ ತಾಲೂಕಿನಲ್ಲಿಯೇ ಉಸ್ತುವಾರಿ ಸಚಿವ, ಕೇಂದ್ರ ಸಚಿವ, ಡಿಸಿಸಿ ಬ್ಯಾಂಕ್ ಅಧ್ಯಕ್ಷ ಹೀಗೆ ಹಲವಾರು ಪ್ರಮುಖ ಹುದ್ದೆಗಳಿದ್ದವು. ಯಾವುದೇ ಕೆಲಸಕ್ಕೂ ಔರಾದ್‌ನತ್ತ ಮುಖ ಮಾಡುತ್ತಿದ್ದ ಜನತೆ ಈಗ ಭಾಲ್ಕಿ ಕಡೆ ನೋಡುತ್ತಿದ್ದಾರೆ.

ಶತಾಯುಷಿ ಡಾ. ಭೀಮಣ್ಣ ಖಂಡ್ರೆಯವರು ಒಂದು ಬಾರಿ ಸಚಿವರಾಗಿ ನಾಲ್ಕು ಬಾರಿ ಶಾಸಕರಾಗಿ ಆಯ್ಕೆಯಾಗುವ ಮೂಲಕ ತಮ್ಮದೇಯಾದ ಛಾಪು ಮೂಡಿಸಿದ್ದಾರೆ. ಭೀಮಣ್ಣ ಖಂಡ್ರೆಯವರ ಪುತ್ರ, ಈಶ್ವರ್ ಖಂಡ್ರೆ ಅವರು ಕ್ರಮವಾಗಿ 2013, 2018 ಮತ್ತು 2023 ಭಾಲ್ಕಿ ವಿಧಾನಸಭೆ ಕ್ಷೇತ್ರದಿಂದ ಸ್ಪರ್ಧಿಸಿ ಗೆಲುವು ಸಾಧಿಸಿ ಸದ್ಯ ಅರಣ್ಯ ಖಾತೆ ಜತೆಗೆ ಜಿಲ್ಲಾ ಉಸ್ತುವಾರಿ ಸಚಿವರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ.

## ಬಿಜೆಪಿ 4:1 ಸೂತ್ರ!

**ಏನಿದು ಬಿಜೆಪಿ 4:1 ಸೂತ್ರ?:** ಎನ್‌ಡಿಎ ಮಿತ್ರ ಪಕ್ಷಗಳ ಸಚಿವ ಸ್ಥಾನದ ಬೇಡಿಕೆಗೆ ಬಿಜೆಪಿ ಸೂತ್ರ ಹೆಣೆದಿದೆ. ಪ್ರತಿ ನಾಲ್ಕು ಸಂಸದರಿಗೆ ಒಂದು ಸಚಿವ ಸ್ಥಾನ ನೀಡುವ ಭರವಸೆ ನೀಡಿದೆಯಂತೆ. ಈ ಪ್ರಕಾರ, 16 ಸಂಸದರನ್ನ ಹೊಂದಿರುವ ಟಿಡಿಪಿಗೆ 4 ಸಚಿವ ಸ್ಥಾನ ಸಿಗುವ ಸಾಧ್ಯತೆ ಇದೆ. 12 ಸಂಸದರನ್ನ

**ಮೊದಲನೇ ಪುಟದಿಂದ...**

ಹೊಂದಿರುವ ಜೆಡಿಯುಗೆ 3 ಸಚಿವ ಸ್ಥಾನ ಸಿಗಬಹುದು. ಟಿಡಿಪಿಗೆ ಸ್ಪೀಕರ್ ಸ್ಥಾನ ಕೊಡದಿರಲು ಬಿಜೆಪಿ ನಿರ್ಧಾರ ಮಾಡಿದೆ ಎಂದು ಮೂಲಗಳು ತಿಳಿಸಿವೆ. ಹಾಗಾದ್ರೆ, ಮಿತ್ರಪಕ್ಷಗಳು ಕೇಳ್ತಿರೋದೇನು? ಬಿಜೆಪಿ ಕೊಟ್ಟಿರೋ ಭರವಸೆ ಏನು ಎಂಬ ಮಾಹಿತಿ ಇಲ್ಲಿದೆ.

**ಟಿಡಿಪಿ ಬೇಡಿಕೆಗಳೇನು?:** ಚಂದ್ರಬಾಬು ನಾಯ್ಡು ಸ್ಪೀಕರ್ ಸ್ಥಾನಕ್ಕೆ ಬೇಡಿಕೆ ಇಟ್ಟಿದ್ದಾರೆ. ಆದರೆ, ಸ್ಪೀಕರ್ ಸ್ಥಾನ ಬಿಟ್ಟುಕೊಡಲು ಒಪ್ಪದ ಬಿಜೆಪಿ, ಡೆಪ್ಯೂಟಿ ಸ್ಪೀಕರ್ ಸ್ಥಾನ ನೀಡೋದಾಗಿ ಭರವಸೆ ನೀಡಿದೆಯಂತೆ. ಹಾಗೆಯೇ ಮೂರು ಕ್ಯಾಬಿನೆಟ್ ದರ್ಜೆ ಮತ್ತು 2 ರಾಜ್ಯ ಖಾತೆಗೆ ನಾಯ್ಡು ಬೇಡಿಕೆ ಇಟ್ಟಿದ್ದಾರೆ ಎನ್ನಲಾಗಿದೆ. ಆದ್ರೆ, ಫಾರ್ಮುಲಾದಂತೆ 4 ಸ್ಥಚಿವ ಸ್ಥಾನ ನೀಡಲು ಬಿಜೆಪಿ ನಿರ್ಧಾರ ಮಾಡಿದೆ ಎಂದು ಮೂಲಗಳು ತಿಳಿಸಿವೆ. ಟಿಡಿಪಿ, ಗ್ರಾಮೀಣಾಭಿವೃದ್ಧಿ ವಸತಿ ಖಾತೆ ಬೇಡಿಕೆ ಇಟ್ಟಿದ್ದರೆ, ಇದರ ಬದಲು ನಾಗರಿಕ ವಿಮಾನಯಾನ ಖಾತೆ ನೀಡೋದಾಗಿ ಬಿಜೆಪಿ ಹೇಳಿದೆಯಂತೆ. ಬಂದರು ಮತ್ತು ಹಡಗು ಖಾತೆ ಬೇಡಿಕೆ ಬದಲು, ಉಕ್ಕು ಖಾತೆ ನೀಡಲು ಬಿಜೆಪಿ ತಿಳಿಸಿದೆಯಂತೆ. ರಸ್ತೆ ಸಾರಿಗೆ, ಹೆದ್ದಾರಿ ಖಾತೆ ಬೇಡಿಕೆಯನ್ನೂ ಒಪ್ಪದ ಬಿಜೆಪಿ, ಇದರ ಬದಲು ಬೇರೆ ಎರಡು ಖಾತೆ ನೀಡುವ ಸಾಧ್ಯತೆ ಇದೆ.

**ಜೆಡಿಯು ಬೇಡಿಕೆಗಳೇನು?:** ಹಾಗೆಯೇ ನಿತೀಶ್ ಕುಮಾರ್ ನೇತೃತ್ವದ ಜೆಡಿಯು ಸಹ ಮೂರು ಸಚಿವ ಸ್ಥಾನಕ್ಕೆ ಬೇಡಿಕೆ ಇಟ್ಟಿದೆ. ಅದರಂತೆ ಮೂರು ಸಚಿವ ಸ್ಥಾನ ಜೆಡಿಯುಗೆ ಸಿಗಬಹುದು. ಆದರೆ, ನಿತೀಶ್ ರೈಲ್ವೆ ಖಾತೆಗೆ ಬೇಡಿಕೆ ಇಟ್ಟಿದ್ದಾರೆ ಎನ್ನಲಾಗಿದೆ. ಬಿಜೆಪಿ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಇಲಾಖೆ ನೀಡುವ ಸಾಧ್ಯತೆ ಇದೆ. ಇನ್ನೂ ಬಿಹಾರಕ್ಕೆ ವಿಶೇಷ ಸ್ಥಾನಮಾನದ ಬೇಡಿಕೆ ಬಗ್ಗೆ ನಿರ್ಧಾರ ಏನು ಅನ್ನೋದು ಗೊತ್ತಾಗಿಲ್ಲ.

**ಶಿವಸೇನೆ ಶಿಂಧೆ ಬೇಡಿಕೆ, ಬಿಜೆಪಿ ಭರವಸೆ?:** ಏಕನಾಥ್ ಶಿಂಧೆ ಬಣದ ಶಿವಸೇನೆ 1 ಕ್ಯಾಬಿನೆಟ್ ಮತ್ತು 2 ರಾಜ್ಯಖಾತೆಗೆ ಬೇಡಿಕೆ ಇಟ್ಟಿದ್ದರೂ ಬೃಹತ್ ಕೈಗಾರಿಕೆ ಖಾತೆಯನ್ನು ಶಿವಸೇನೆಗೆ ನೀಡಲು ಬಿಜೆಪಿ ಭರವಸೆ ನೀಡಿದೆ ಎನ್ನಲಾಗುತ್ತಿದೆ.

**ಇತರ ಮಿತ್ರಪಕ್ಷಗಳ ಬೇಡಿಕೆ:** ಉಳಿದಂತೆ ಇತರ ಮಿತ್ರಪಕ್ಷಗಳ ನಾಯಕರಾದ ಚಿರಾಗ್ ಪಸ್ವಾನ್ ಒಂದು ಕ್ಯಾಬಿನೆಟ್ ಮತ್ತು ಒಂದು ರಾಜ್ಯ ಖಾತೆ, ಜೀತನ್ ರಾಮ್ ಮಾಂಝಿ ಕ್ಯಾಬಿನೆಟ್ ದರ್ಜೆ ಖಾತೆಗೆ ಡಿಮ್ಯಾಂಡ್ ಇಟ್ಟಿದ್ದಾರೆ. ಎನ್‌ಡಿಎ ಮಿತ್ರರೆಲ್ಲಾ ಬಿಜೆಪಿ ಫಾರ್ಮುಲಾಕ್ಕೆ ಒಪ್ಪಿಕೊಳ್ಳುತ್ತಾರಾ? ಇಲ್ಲ ಪ್ರಬಲ ಖಾತೆಗೆ ಪಟ್ಟು ಹಿಡಿಯುತ್ತಾರಾ ಎಂಬುದು ಕುತೂಹಲ ಮೂಡಿಸಿದೆ. ಆದರೆ, ಬಿಜೆಪಿ ಮಾತ್ರ ಪ್ರಮುಖ ಖಾತೆ ಬಿಟ್ಟುಕೊಡದಿರಲು ನಿರ್ಧಾರ ಮಾಡಿದೆ ಎನ್ನಲಾಗಿದೆ.

**ಪ್ರಮುಖ ಖಾತೆ ಬಿಡಲ್ವಾ ಬಿಜೆಪಿ?:** ಪ್ರಮುಖ ಖಾತೆಗಳನ್ನ ತನ್ನಲ್ಲೇ ಉಳಿಸಿಕೊಳ್ಳಲು ಬಿಜೆಪಿ ಚಿಂತನೆ ನಡೆಸಿದೆ. ಹಣಕಾಸು, ಗೃಹ, ವಿದೇಶಾಂಗ, ರಕ್ಷಣಾ ಖಾತೆ ಬಿಟ್ಟುಕೊಡದಿರುವ ಬಿಜೆಪಿ ನಿರ್ಧಾರ ಮಾಡಿದೆ ಎನ್ನಲಾಗುತ್ತಿದೆ. ಹಾಗೆಯೇ ರೈಲ್ವೆ, ಸಾರಿಗೆ ಮೂಲಸೌಕರ್ಯ, ಸಮಾಜ ಕಲ್ಯಾಣ ಮತ್ತು ಕೃಷಿ ಖಾತೆಯೂ ಬಿಜೆಪಿಯೇ ಉಳಿಸಿಕೊಳ್ಳುವ ಸಾಧ್ಯತೆ ಇದೆ.

**ಕೇಂದ್ರ ಸಂಪುಟದಲ್ಲಿ ಕರ್ನಾಟಕಕ್ಕೆ 2-3 ಸ್ಥಾನ ಸಾಧ್ಯತೆ:**

ಇದೆಲ್ಲದರ ಮಧ್ಯೆ ರಾಜ್ಯಕ್ಕೆ ಎರಡರಿಂದ ಮೂರು ಸ್ಥಾನ ಸಿಗುವ ಸಾಧ್ಯತೆ ಇದೆ. ಕುಮಾರಸ್ವಾಮಿಗೆ ಮಂತ್ರಿ ಸ್ಥಾನ ಸಿಗುವುದು ಬಹುತೇಕ ಪಕ್ಕಾ ಆಗಿದೆ. ಪ್ರಲ್ಹಾದ್ ಜೋಶಿ ಕ್ಯಾಬಿನೆಟ್ ದರ್ಜೆ ಸಚಿವರಾಗಿ ಮುಂದುವರಿಯುವ ಸಾಧ್ಯತೆಯಿದೆ. ಉಳಿದಂತೆ ಬಿಜೆಪಿಯಲ್ಲಿ ಯಾರಿಗೆ ಮಂತ್ರಿ ಸ್ಥಾನ ನೀಡಲಾಗುತ್ತದೆ ಎಂಬುದೇ ಕುತೂಹಲದ ವಿಷಯವಾಗಿದೆ. ಬಸವರಾಜ ಬೊಮ್ಮಾಯಿ, ಜಗದೀಶ್ ಶೆಟ್ಟರ್, ಗದ್ದಿಗೌಡರ್, ಗೋವಿಂದ ಕಾರಜೋಳ, ಪಿ.ಮೋಹನ್, ಶೋಭಾ ಕರಂದ್ಲಾಜೆ, ಡಾ.ಸಿಎನ್. ಮಂಜುನಾಥ್ ಹೆಸರು ಕೂಡ ರೇಸ್‌ನಲ್ಲಿವೆ. ಹೀಗಾಗಿ ಬಿಜೆಪಿ ಹೈಕಮಾಂಡ್ ಯಾರಿಗೆ ಮಂತ್ರಿಗಿರಿ ನೀಡುತ್ತದೆ ಎಂಬುದನ್ನು ಕಾದುನೋಡಬೇಕಿದೆ.

## ಅಜಿತ್ ಪವಾರ್

ಸಭೆಯ ನಂತರ ಮಾತನಾಡಿದ ಅವರು, ಏಕನಾಥ್ ಶಿಂಧೆ ಅವರ ಶಿವಸೇನೆಗೆ ಉತ್ತಮ ಸ್ಥಾನಗಳು ಬಂದಿವೆ. ಅವರು ಶೇ.50 ಸ್ಥಾನಗಳನ್ನು ಪಡೆದಿದ್ದಾರೆ. ಎನ್‌ಡಿಎ ಕಳಪೆ ಪ್ರದರ್ಶನದ ಬಗ್ಗೆ ಮಾತನಾಡಿದ ಅವರು, ಮಹಾರಾಷ್ಟ್ರದಲ್ಲಿ ಪಕ್ಷಗಳು ಒಡೆಯುತ್ತಿರುವುದು ಇದೇ ಮೊದಲಲ್ಲ. 1978ರಲ್ಲಿಯೂ ಪಕ್ಷಗಳು ಇದೇ ರೀತಿಯಲ್ಲಿ ವಿಭಜನೆಯಾಗಿದ್ದವು.

ಪಕ್ಷದ ಅಧ್ಯಕ್ಷ ಅಜಿತ್ ಪವಾರ್ ಅವರಲ್ಲದೆ, ಪ್ರಫುಲ್ ಪಟೇಲ್ ಸೇರಿದಂತೆ ಹಲವು ಹಿರಿಯ ನಾಯಕರು ಮತ್ತು ಸಚಿವರು ಭಾಗವಹಿಸಿದ್ದರು. ಹಸನ್ ಮುಶ್ರೀಫ್, ಛಗನ್ ಭುಜಬಲ್, ದಿಲೀಪ್ ವಾಲ್ಸೆ ಪಾಟೀಲ್ ಮತ್ತು ಧನಂಜಯ್ ಮುಂಡೆ ಸೇರಿದ್ದಾರೆ.

2023 ರಲ್ಲಿ, ಅಜಿತ್ ಪವಾರ್, ಇತರ ಕೆಲವು ಶಾಸಕರೊಂದಿಗೆ, ಎನ್‌ಸಿಪಿಯಿಂದ ಬೇರ್ಪಟ್ಟು ಆಡಳಿತಾರೂಢ ಬಿಜೆಪಿಗೆ ಸೇರಿದರು. ನ್ಯಾಷನಲ್ ಡೆಮಾಕ್ರಟಿಕ್ ಅಲಯನ್ಸ್ (ಎನ್‌ಡಿಎ) ಯ ಮಿತ್ರಪಕ್ಷವಾಗಿ ಚುನಾವಣಾ ಕ್ಷೇತ್ರಕ್ಕೆ ಪ್ರವೇಶಿಸಿದ ಪವಾರ್ ಅವರ ರಾಷ್ಟ್ರೀಯವಾದಿ ಕಾಂಗ್ರೆಸ್ ಪಕ್ಷ (ಎನ್‌ಸಿಪಿ) ಲೋಕಸಭೆ ಚುನಾವಣೆಯಲ್ಲಿ ನಾಲ್ಕು ಸ್ಥಾನಗಳಲ್ಲಿ ಸ್ಪರ್ಧಿಸಿತ್ತು.

ಆದರೆ ಪಕ್ಷ ಒಂದೇ ಒಂದು ಸ್ಥಾನ ಗೆಲ್ಲಲು ಸಾಧ್ಯವಾಯಿತು. ಬಾರಾಮತಿ ಲೋಕಸಭಾ ಕ್ಷೇತ್ರದಲ್ಲಿ ಅಜಿತ್ ಪವಾರ್ ಅವರ ಪತ್ನಿ ಸುನೇತ್ರಾ ಪವಾರ್ ಅವರನ್ನು ಎನ್‌ಸಿಪಿ (ಎಸ್‌ಪಿ) ಅಭ್ಯರ್ಥಿ ಸುಪ್ರಿಯಾ ಸುಳೆ ಅವರು 1.5 ಲಕ್ಷ ಮತಗಳಿಂದ ಸೋಲಿಸಿದ್ದರು. ಸುಪ್ರಿಯಾ ಸುಳೆ ಶರದ್ ಪವಾರ್ ಅವರ ಮಗಳು.

48 ಲೋಕಸಭಾ ಸ್ಥಾನಗಳ ಪೈಕಿ ಕಾಂಗ್ರೆಸ್ ಗರಿಷ್ಠ 13 ಸ್ಥಾನಗಳನ್ನು ಪಡೆದುಕೊಂಡಿದೆ. ಇದರ ನಂತರ ಬಿಜೆಪಿ ಮತ್ತು ಶಿವಸೇನೆ ತಲಾ 9 ಸ್ಥಾನಗಳನ್ನು ಪಡೆದವು. ಇದಲ್ಲದೆ ಎನ್‌ಸಿಪಿ (ಎಸ್‌ಪಿ), ಶಿವಸೇನೆ (ಎಸ್‌ಎಚ್‌ಎಸ್) ಕ್ರಮವಾಗಿ 8 ಮತ್ತು 7 ಸ್ಥಾನಗಳನ್ನು ಪಡೆದಿವೆ. ಆದರೆ ಎನ್‌ಸಿಪಿ ಕೇವಲ ಒಂದು ಸ್ಥಾನಕ್ಕೆ ತೃಪ್ತಿಪಡಬೇಕಾಯಿತು. ಒಂದು ಸ್ಥಾನ ಸ್ವತಂತ್ರ ಅಭ್ಯರ್ಥಿಯ ಖಾತೆಗೆ ಹೋಗಿದೆ.

## ಸವದಿ ವಿರುದ್ಧ ಅಸಮಾಧಾನ

ಶಾಸಕ ತಮ್ಮಣ್ಣವರ್ ವಿರುದ್ಧ ಗುಡುಗಿದ ಸತೀಶ್

ಎಸ್ಸಿ ನಾಯಕರನ್ನು ತುಳಿದಿದ್ದಾರೆ ಎಂಬ ಕಾಂಗ್ರೆಸ್ ಶಾಸಕ ಮಹೇಂದ್ರ ತಮ್ಮಣ್ಣವರ್ ಆರೋಪಕ್ಕೆ ತಿರುಗೇಟು ನೀಡಿದ ಸತೀಶ್ ಜಾರಕಿಹೊಳಿ, ನಾನು ಯಾರನ್ನೂ ತುಳಿಯುವ ಪ್ರಶ್ನೆ ಇಲ್ಲ. ಚುನಾವಣೆಗೆ ಮೂರು ದಿನ ಇದ್ದಾಗಲೇ ಯಾರ ಕೈಗೂ ಶಾಸಕ ಸಿಕಿಲ್ಲ. ಸರಿಯಾಗಿ ಚುನಾವಣೆ ಮಾಡಲಿಲ್ಲ, ನಾನೇ ಇದ್ದು ಅವರನ್ನ ನೋಡಿದ್ದೇನೆ. ಅವರಿಗೆ ಟಿಕೇಟ್ ನಾವೇ ಕೊಡಿಸಿದ್ದೇವೆ. ಕಾಂಗ್ರೆಸ್ ಪಕ್ಷವನ್ನು ಬಿಟ್ಟು ತಮ್ಮ ಮಾವನ ಪರವಾಗಿ ಕೆಲಸವನ್ನು ಮಾಡಿದ್ದಾರೆ ಎಂದರು.

ಶಾಸಕ ಪಕ್ಷ ವಿರೋಧಿ ಕೆಲಸ ಮಾಡಿದರೂ ಕಾರ್ಯಕರ್ತರು ಪಕ್ಷ ಬಿಡಲಿಲ್ಲ. ಅವರ ಬಗ್ಗೆ ಹೆಚ್ಚು ಮಾತನಾಡುವ ಅವಶ್ಯಕತೆ ಇಲ್ಲ, ಮುಗಿದ ಹೋಗಿರುವ ಅಧ್ಯಾಯ. ಅವರು ವಿರೋಧ ಮಾಡಿದರೂ ನಮಗೆ ಗೆಲುವಾಗಿದೆ. ಶಾಸಕನ ಕಾರ್ಯವನ್ನು ಕೊನೆ ಗಳಿಗೆಯಲ್ಲಿ ನಾನೆ ನೊಡಿದ್ದೇನೆ. ಚುನಾವಣೆಗೆ ಎರಡು ದಿನ ಮುನ್ನ ತಮ್ಮಣ್ಣವರ್ ಎಲ್ಲಿ ಹೋದರು ಎಷ್ಟು ಹಳ್ಳಿಗಳಲ್ಲಿ ಪ್ರಚಾರ ಮಾಡಿದ್ದಾರೆ ಹೇಳಲಿ ಎಂದು ಸತೀಶ್ ಜಾರಕಿಹೊಳಿ ಸವಾಲೆಸೆದರು.

## ವ್ಯಕ್ತಿಯ ಶಿರಚ್ಛೇದ

ಜಿರಿಬಾಮ್ ಪೊಲೀಸ್ ಠಾಣೆಯಿಂದ ಉತ್ತರಕ್ಕೆ ಸುಮಾರು 12 ಕಿಲೋಮೀಟರ್ ದೂರದಲ್ಲಿರುವ ಮುಲರ್ಗೋನ್ ಬಳಿ ಶರತ್ ಕುಮಾರ್ ದೇಹವು ಪತ್ತೆಯಾಗಿತ್ತು.

ಹತ್ಯೆಯ ಹಿಂದಿನ ಉದ್ದೇಶ ಮತ್ತು ದಾಳಿಕೋರರ ಗುರುತು ಇನ್ನೂ ತಿಳಿದುಬಂದಿಲ್ಲ. ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ.

ಮೃತರ ಪತ್ನಿ ಸೋಬಾಮ್ ರೊಮೊಲಾ ಅವರು, ತಾನು ಮತ್ತು ತನ್ನ ಮಗ ತನ್ನ ಪತಿಗಿಂತ ಮುಂಚಿತವಾಗಿ ಜಮೀನಿನಿಂದ ಹಿಂತಿರುಗುತ್ತಿದ್ದಾಗ ಕುಕಿ ಸಮುದಾಯದ ಕೆಲವರು ಬಂದಿದ್ದರು ಎಂದು ಹೇಳಿದ್ದಾರೆ.

ಶರತ್‌ಕುಮಾರ್ ಅವರ ಫೋನ್ ಸ್ವಿಚ್ ಆಫ್ ಆಗಿರುವುದು ಕಂಡುಬಂದಿತ್ತು, ಬಳಿಕ ಮಗ ಹುಡುಕಾಟ ನಡೆಸಿದಾಗ ತಂದೆಯ ಬೈಕ್ ಹಾಗೂ ಚಪ್ಪಲಿಗಳು ಸಿಕ್ಕಿದ್ದವು ಎಂದು ಹೇಳಿದ್ದಾರೆ. ಕೋಪಗೊಂಡ ಗುಂಪೊಂದು ಸಮೀಪದ ಪ್ರದೇಶದಲ್ಲಿ ಕುಕಿ ಸಮುದಾಯಕ್ಕೆ ಸೇರಿದ ಮನೆಗಳಿಗೆ ಬೆಂಕಿ ಹಚ್ಚಿದೆ.

## ಸಿಡಿಲಿಗೆ ಮತ್ತಿಬ್ಬರು ಬಲಿ

**ಬಾಗಲಕೋಟೆಯ ಕುಳಗೇರಿ ಕ್ರಾಸ್‌ನಲ್ಲಿ ಭಾರಿ ಮಳೆ:** ಬಾಗಲಕೋಟೆಯ ಬಾದಾಮಿ ತಾಲೂಕಿನಲ್ಲಿರುವ ಅಕ್ಕ-ತಂಗಿ ಫಾಲ್ಸ್ ಮೈದುಂಬಿ ಹರಿಯುತ್ತಿದೆ. ಅಗಸ್ತ್ಯತೀರ್ಥ ಹೊಂಡ ಕೂಡ ಭರ್ತಿಯಾಗ್ತಿದೆ. ಬೆಳಗಾವಿಯ ಸವದತ್ತಿ ಯಲ್ಲಮ್ಮ ದೇವಾಲಯ ಜಲಾವೃತವಾಗಿತ್ತು. ಏಕಾಏಕಿ ನೀರು ನುಗ್ಗಿದ್ದರಿಂದ ಭಕ್ತಾದಿಗಳು ಪರದಾಡುವಂತಾಯ್ತು.

ರಾಮದುರ್ಗದ ಮಾಗನೂರಿನಲ್ಲಿ ಮಳೆಯಿಂದಾಗಿ ಹಳ್ಳ ಅಪಾಯದ ಮಟ್ಟ ಮೀರಿ ಹರಿಯುತ್ತಿದೆ. ರಸ್ತೆ ಮೇಲೆ ನೀರು ತುಂಬಿ ಹರಿಯುತ್ತಿದ್ದರಿಂದ ಮಾಗನೂರಿಗೆ ರಸ್ತೆ ಸಂಪರ್ಕ ಕಡಿತವಾಗಿದೆ.

ಕೋಲಾರದ ಮಾಲೂರು ತಾಲೂಕಿನ ಹುಣಸಿನ ಕೋಟೆಯಲ್ಲಿ ಮನೆಗಳಿಗೆ ಚರಂಡಿ ನೀರು ನುಗ್ಗಿ ಅವಾಂತರ ಸೃಷ್ಟಿಯಾಗಿದೆ. ಮತ್ತೊಂದೆಡೆ ಶ್ರೀನಿವಾಸಪುರ ತಾಲೂಕಿನಲ್ಲಿ ರೈಲ್ವೆ ಅಂಡರ್ ಪಾಸ್ ಜಲಾವೃತಗೊಂಡು ಸಂಚಾರ ಅಸ್ತವ್ಯಸ್ತವಾಗಿತ್ತು.

ಚಾಮರಾಜನಗರದ ಅಂಡಿಪಾಳ್ಯ ಬಳಿ ಜಡೆತಡಿ ಹಳ್ಳ ಉಕ್ಕಿ ಹರಿದಿದೆ. ಇದರಿಂದಾಗಿ ವಾಹನ ಸಂಚಾರ ಅಸ್ತವ್ಯಸ್ತವಾಗಿತ್ತು. ಬಿಟ್ಟು ಬಿಟ್ಟು ಬರ್ತಿರುವ ಮಳೆಯಿಂದಾಗಿ ರಾಜ್ಯದ ಹಲವು ಜಿಲ್ಲೆಗಳಲ್ಲಿ ಅಧ್ವಾನ, ಅವಾಂತರಗಳಾಗಿವೆ.

## ಮೂವರ ಬಂಧನ

ನಕಲಿ ಆಧಾರ್ ಕಾರ್ಡ್ ತೋರಿಸಿ ಸಂಸತ್ ಭವನ ಪ್ರವೇಶಿಸಲು ಮುಂದಾದ ಮೂವರನ್ನು ಸಿಐಎಸ್‌ಎಫ್ ವಶಕ್ಕೆ ಪಡೆದಿದೆ. ಕಾಸಿಂ, ಮೋನಿಸ್ ಮತ್ತು ಶೋಯೆಬ್ ಎಂದು ಗುರುತಿಸಲಾದ ಮೂವರು ವ್ಯಕ್ತಿಗಳು ಕಾರ್ಮಿಕರಂತೆ ನಟಿಸಿ ಗೇಟ್ ಸಂಖ್ಯೆ 3 ರಿಂದ ಸಂಸತ್ ಭವನದ ಒಳ ಪ್ರವೇಶಿಸಲು ಪ್ರಯತ್ನಿಸಿದರು.

ಬಂಧಿತರ ವಿರುದ್ಧ ಭಾರತೀಯ ದಂಡ ಸಂಹಿತೆಯ ಸೆಕ್ಷನ್ 19/465/468/471/120ಃ ಅಡಿಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ. ಎಫ್‌ಐಆರ್ ಪ್ರಕಾರ, ಜೂನ್ 4ರಂದು ಮಧ್ಯಾಹ್ನ 1.30ಕ್ಕೆ ಘಟನೆ ನಡೆದಿದೆ. ಈ ಬಗ್ಗೆ ಹೆಚ್ಚಿನ ತನಿಖೆ ನಡೆಯುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

**ಸಂಸತ್ ಪ್ರವೇಶಿಸಲು ಯತ್ನಿಸಿದವರು ಯಾರು?:** ಈ ಹಿಂದೆ, ಹೊಸ ಸಂಸತ್ ಭವನದ ಭದ್ರತೆಯ ಜವಾಬ್ದಾರಿಯನ್ನು ದೆಹಲಿ ಪೊಲೀಸರಿಗೆ ವಹಿಸಲಾಗಿತ್ತು. ಆದರೆ ಇತ್ತೀಚೆಗೆ ಅದರ ಭದ್ರತೆಯ ಜವಾಬ್ದಾರಿಯನ್ನು ಸಿಐಎಸ್‌ಎಫ್‌ಗೆ ಹಸ್ತಾಂತರಿಸಲಾಗಿದೆ. ಪಾರ್ಲಿಮೆಂಟ್ ಕಾಂಪ್ಲೆಕ್ಸ್ ಪ್ರವೇಶಿಸಲು ಪ್ರಯತ್ನಿಸಿದ ಮೂವರು ಕಾರ್ಮಿಕರನ್ನು ನಿರ್ಮಾಣ ಕಂಪನಿ ಡೀ ವೀ ಪ್ರಾಜೆಕ್ ಲಿಮಿಟೆಡ್ ಮೂಲಕ ನೇಮಕ ಮಾಡಿಕೊಳ್ಳಲಾಗಿದೆ ಎಂದು ಸಿಐಎಸ್‌ಎಫ್ ಅಧಿಕಾರಿಗಳು ತಿಳಿಸಿದ್ದಾರೆ. ಸಂಸತ್ತಿನ ಎಂಪಿ ಲಾಂಜ್‌ನಲ್ಲಿ ನಿರ್ಮಾಣ ಕಾರ್ಯ ಮಾಡಲು ಮೂವರು ಕಾರ್ಮಿಕರನ್ನು ನೇಮಿಸಿಕೊಳ್ಳಲಾಗಿತ್ತು.

ಇಬ್ಬರು ವ್ಯಕ್ತಿಗಳು ವೀಕ್ಷಕರ ಗ್ಯಾಲರಿಯಿಂದ ಲೋಕಸಭೆಯ ಚೇಂಬರ್‌ಗೆ ಜಿಗಿದು ಹಳದಿ ಬಣ್ಣದ ಅಶ್ರುವಾಯು ಸಿಡಿಸಿದ ಘಟನೆ ಕಳೆದ ವರ್ಷ ಡಿಸೆಂಬರ್ 13 ರಂದು ಸಂಭವಿಸಿತ್ತು. ಸಂಸತ್ ನಲ್ಲಿ ಉಂಟಾದ ಈ ಭದ್ರತಾ ಲೋಪ ಸಂಸದರಲ್ಲಿ ಭಯವನ್ನು ಉಂಟುಮಾಡಿತ್ತು. ಆಗಿನ ಮೈಸೂರು ಸಂಸದ ಪ್ರತಾಪ್ ಸಿಂಹ ಅವರ ಕಚೇರಿಯಿಂದ ಪಾಸ್ ವಿತರಿಸಲಾಗಿತ್ತು.

**ಅಂದು ನಡೆದಿದ್ದೇನು:** ಸಂಸತ್ ಮೇಲೆ ಭಯೋತ್ಪಾದಕ ದಾಳಿ ನಡೆದು 22 ವರ್ಷಗಳಾದ ಸಂದರ್ಭದಲ್ಲೇ ಸಂಸತ್ ಭವನದೊಳಕ್ಕೆ ಇಬ್ಬರು ನುಗ್ಗಿದ್ದರು. ಚಳಿಗಾಲದ ಅಧಿವೇಶನ ನಡೆಯುತ್ತಿದ್ದಾಗಲೇ ಈ ಘಟನೆ ಸಂಭವಿಸಿತ್ತು. ಇಬ್ಬರು ಯುವಕರು ಗ್ಯಾಲರಿಯಿಂದ ಜಿಗಿದು, ಅನಿಲ ಹೊರಸೂಸುವಂಥಾ ವಸ್ತುವನ್ನು ಎಸೆದಿದ್ದರು. ಅವರನ್ನು ಸಂಸದರು ಹಿಡಿದಿದ್ದರು. ಆಮೇಲೆ, ಅವರನ್ನು ಭದ್ರತಾ ಸಿಬ್ಬಂದಿ ಹೊರಗೆ ಕರೆತಂದಿದ್ದರು. ಅದೇ ವೇಳೆ, ಸಂಸತ್ ಭವನದ ಹೊರಗಡೆಯಲ್ಲಿಯೂ ಇಬ್ಬರು ಪ್ರತಿಭಟನೆ ನಡೆಸಿದ್ದರು. ಅವರನ್ನೂ ನಂತರ ಬಂಧಿಸಲಾಗಿತ್ತು.

## ಅತ್ಯಾಚಾರ

ಈ ವಿಚಾರ ಪ್ರೇಮಿಗಳ ಮನೆಯಲ್ಲಿ ಗೊತ್ತಾಗಿದ್ದು, ಇಬ್ಬರ ಮನೆಯಲ್ಲೂ ವಿರೋಧ ವ್ಯಕ್ತಪಡಿಸಿದ್ದಾರೆ. ಇದಾದ ಬಳಿಕ ಸಂತ್ರಸ್ತೆ ಪ್ರೀತಿ ಬೇಡ ಅಂತ ರವಿರಾಜ್ ನಿಂದ ದೂರು ಉಳಿಯಲು ಆರಂಭಿಸಿದ್ದಾಳೆ. ಆದರೆ ರವಿರಾಜ್ ಸಂತ್ರಸ್ತೆ ಮನೆಯವರ ಮತ್ತು ತನ್ನ ಪೋಷಕರ ಜೊತೆ ಮಾತನಾಡಿ ಮದುವೆಗೆ ಒಪ್ಪಿಸಿದ್ದಾನೆ.

ಬಳಿಕ ರವಿರಾಜ್ 2021ರ ಮಾರ್ಚ್ 17 ರಂದು ರಾತ್ರಿ 8 ಗಂಟೆ ಸುಮಾರಿಗೆ ಸಂತ್ರಸ್ತೆ ಮನೆಗೆ ಹೋಗಿ ಅತ್ಯಾಚಾರ ಎಸಗಿದ್ದಾನೆ. ಇದಾದ ಬಳಿಕ ತಾವು ಇಬ್ಬರೇ ಇರುವ ಖಾಸಗಿ ವಿಡಿಯೋವನ್ನು ಇಟ್ಟುಕೊಂಡು, ರವಿವಾರಜ್ ಬ್ಲ್ಯಾಕ್ ಮೇಲ್ ಮಾಡಲು ಆರಂಭಿಸಿದ್ದಾರೆ. ನಂತರ ಅನೇಕ ಸಲ ಸಂತ್ರಸ್ತೆ ಮೇಲೆ ಅತ್ಯಾಚಾರ ಎಸಗಿದ್ದಾನೆ. ಇದರಿಂದ ಸಂತ್ರಸ್ತೆ ಗರ್ಭಿಣಿಯಾಗಿದ್ದಾಳೆ. ಆಗ, ರವಿರಾಜ್ ಗರ್ಭಪಾತ ಮಾಡಿಸಿದ್ದಾನೆ. ಬಳಿಕ ಸಂತ್ರಸ್ತೆ ಮದುವೆ ಮಾಡಿಕೊ ಎಂದು ದುಂಬಾಲು ಬಿದ್ದಿದ್ದಾಳೆ.

ಆದರೆ, ರವಿವಾರ್ ಮದುವೆ ಮಾಡಿಕೊಳ್ಳಲು ಒಪ್ಪಲಿಲ್ಲ. ಆಗ, ಸಂತ್ರಸ್ತೆ ಈ ವಿಚಾರವನ್ನು ಸಂತ್ರಸ್ತೆ ತನ್ನ ಮನೆಯವರಿಗೆ ಮತ್ತು ರವಿರಾಜ್ ಮನೆಯವರಿಗೆ ತಿಳಿಸಿದ್ದಾಳೆ. ಆಗ, ಎರಡೂ ಮನೆಯವರು ಸೇರಿ ಪಂಚಾಯಿತಿ ಮಾಡಿ, ರವಿರಾಜ್ ಗೆ ಮದುವೆಯಾಗುವಂತೆ ಹೇಳಿದ್ದಾರೆ. ಆದರೂ ಕೂಡ ರವಿರಾಜ್ ಮದುವೆಯಾಗಲು ಒಪ್ಪಲಿಲ್ಲ. ಇದರಿಂದ ಸಂತ್ರಸ್ತೆ ಮಾನಸಿಕವಾಗಿ ನೊಂದು, ಎರಡು ಬಾರಿ ಆತ್ಮಹತ್ಯೆಗೆ ಯತ್ನಿಸಿದ್ದಾಳೆ.

ಪ್ರಕರಣ ಸಂಬಂಧ ಸಂತ್ರಸ್ತೆ ಮಾತನಾಡಿ '' ನಾವಿಬ್ಬರು ಕಳೆದ ಕೆಲ ವರ್ಷಗಳಿಂದ ಪ್ರೀತಿಸುತ್ತಿದ್ದೇವು. ನಮ್ಮ ಮನೆಗೆ ಬಂದು ಮದುವೆ ಆಗುತ್ತೇನೆ ಅಂತ ನಮ್ಮ ಹೆತ್ತವರಿಗೆ ಹೇಳಿ ಒಪ್ಪಿಸಿದ್ದನು. ಇಬ್ಬರ ಮದುವೆ ಕೂಡ ನಿಶ್ಚಯವಾಗಿತ್ತು. ಒಂದು ದಿನ ಮನೆಗೆ ಬಂದು ನನ್ನ ಮೇಲೆ ಅತ್ಯಾಚಾರ ಎಸಗಿದ್ದಾನೆ. ಮದುವೆ ಆಗುತ್ತೇನೆ ಅಂತ ನಂಬಿಸಿ ಸತತ ಎರಡು ವರ್ಷದಿಂದ ನನ್ನ ಅತ್ಯಾಚಾರವೆಸಗಿದ್ದಾನೆ. ಈ ಸಮಯದಲ್ಲಿ ವಿಡಿಯೋ ಮಾಡಿಕೊಂಡಿದ್ದಾನೆ. ನನ್ನ ವಿಡಿಯೋ ಇಟ್ಕೊಂಡು ನನ್ನನ್ನು ಲೈಂಗಿಕವಾಗಿ ಬಳಸಿಕೊಂಡಿದ್ದಾನೆ. ಕೊಪ್ಪಳ ನಗರದಲ್ಲಿ ಅವರ ಸಂಬಂಧಿಯ ಪೊಲೀಸ್ ಕ್ವಾಟರ್ಸ್ ನಲ್ಲಿ ಕೂಡಾ ಕರೆದುಕೊಂಡು ಹೋಗಿ ಅತ್ಯಾಚಾರ ಮಾಡಿದ್ದಾನೆ. ನಂತರ 3-4 ಸಲ ಗರ್ಭಪಾತ ಮಾಡಿಸಿದ್ದಾನೆ. ಇದೀಗ ದೂರು ದಾಖಲಿಸಿದರೂ ಆತನನ್ನು ಬಂಧಿಸಲು ಪೊಲೀಸರು ಹಿಂದೇಟು ಹಾಕುತ್ತಿದ್ದಾರೆ'' ಎಂದು ಸಂತ್ರಸ್ತೆ ಆರೋಪ ಮಾಡಿದ್ದಾಳೆ.

ಇದೀಗ, ಆರೋಪಿ ರವಿರಾಜ್ ನನ್ನು ಬಂಧಿಸಿ, ನನ್ನ ಜೊತೆ ಮದುವೆ ಮಾಡಿಸಿ ಎಂದು ಸಂತ್ರಸ್ತೆ ಮತ್ತು ಆಕೆಯ ಪೋಷಕರು ಪೊಲೀಸ್ ಠಾಣೆ ಎದುರು ಧರಣಿ ಕೂತಿದ್ದಾರೆ.

## ಪ್ರತ್ಯಕ್ಷ

ಅವರ ಮನೆಗೆ ನುಗ್ಗಿ ಎಲ್ಲವನ್ನು ಧ್ವಂಸ ಮಾಡಿದ್ದರು, ಭಾರಿ ಕೋಲಾಹಲ ಉಂಟಾಗಿತ್ತು, ಸಂತ್ ರಾಜ್ ಅನ್ನು ಅಪಹರಿಸಿ ನಾಲ್ಕು ದಿನಗಳ ನಂತರ ಗ್ರಾಮದ ಸಮೀಪದ ಚರಂಡಿಯಲ್ಲಿ ಕೊಳೆತ ಸ್ಥಿತಿಯಲ್ಲಿ ಶವವೊಂದು ಪತ್ತೆಯಾಗಿತ್ತು, ಅದು ಸಂತ್ ರಾಜ್ ನದ್ದೇ ದೇಹ ಎಂದು ಮನೆಯವರು ಭಾವಿಸಿ ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿತ್ತು, ಮರಣೋತ್ತರ ಪರೀಕ್ಷೆಯಲ್ಲಿ ಅದು ಮಹಿಳೆಯ ದೇಹ ಎಂದು ತಿಳಿದುಬಂದಿದ್ದು, ಅಷ್ಟೊರೊಳಗೆ ಪೊಲೀಸರು ಪತ್ತಿದಾರ್‌ನ್ನು ಬಂಧಿಸಿದ್ದರು.

ನಂತರ ಕೊಲೆಯ ಬದಲು ಅಪಹರಣ ಪ್ರಕರಣ ಮಾತ್ರ ದಾಖಲಾಗಿತ್ತು, ಈ ಪ್ರಕರಣದಲ್ಲಿ ಮಾರ್ಚ್ 27, 2003 ರಂದು ಆರೋಪಿ ರಾಮ್ ನಗೀನಾ ಮತ್ತು ಇತರರನ್ನು ಖುಲಾಸೆಗೊಳಿಸಲಾಯಿತು. ಆದರೂ ಪತ್ತಿದಾರ್ ನನ್ನು ಕೊಲೆಗಾರ ಎಂದೇ ಜನರು ಕರೆಯುತ್ತಿದ್ದರು.

ಆದರೆ 29 ದಿನಗಳ ಹಿಂದೆ ಸಂತ್ ರಾಜ್ ಏಕಾಏಕಿ ಪ್ರತ್ಯಕ್ಷನಾಗಿದ್ದು, ಗ್ರಾಮಸ್ಥರಲ್ಲಿ ಅಚ್ಚರಿಯುಂಟು ಮಾಡಿದೆ. ಸಂತ್ ರಾಜ್ ನೋಡುತ್ತಿದ್ದಂತೇ ಪತ್ತಿದಾರ್ ಗೆ ತಾನು ಕಳೆದುಕೊಂಡಿದ್ದ ಗೌರವ ಮರಳಿ ಸಿಕ್ಕಿರುವ ಖುಷಿ ಆಗಿತ್ತು. ಬಳಿಕ ಪತ್ತಿದಾರ್ ಸಂತ್ ರಾಜ್ ಫೋಟೊವನ್ನು ಕೈಯಲ್ಲಿ ಹಿಡಿದು ನಾನು ಕೊಲೆ ಮಾಡಿಲ್ಲ ನೋಡಿ ಸಂತ್ ರಾಜ್ ಇನ್ನೂ ಬದುಕೇ ಇದ್ದಾನೆ ಎಂದು ಹೇಳುತ್ತಾ ಊರೂರು ಸುತ್ತುತ್ತಿದ್ದಾರೆ.

ತಾನು ಕೊಲೆ ಮಾಡಿಲ್ಲ ಎಂದು ಹೇಳಿದ್ದರೂ ಯಾರೂ ಆತನ ಮಾತು ಕೇಳಿರಲಿಲ್ಲ, ಸುಮ್ಮನೆ 3 ವರ್ಷಗಳ ಕಾಲ ಜೈಲಿನಲ್ಲಿದ್ದುದಲ್ಲದೇ 24 ವರ್ಷಗಳಿಂದ ಕೊಲೆಗಾರನೆಂಬ ಹಣೆಪಟ್ಟಿಕಟ್ಟಿಕೊಂಡು ಬೇಸರದಲ್ಲೇ ಜೀವನ ಕಳೆಯುತ್ತಿದ್ದರು.

# ಸಂಚಾರಿ ಕ್ಷ-ಕಿರಣ ಯಂತ್ರದ ಸದುಪಯೋಗ ಆಗಲಿ



**ರಾಮನಗರ:** ಜಿಲ್ಲೆಯಲ್ಲಿ ಕ್ಷಯರೋಗ ನಿರ್ಮೂಲನೆ ಮಾಡಲು ಪ್ರತಿ ಮಂಗಳವಾರ ಹಾಗೂ ಗುರುವಾರ ಜಿಲ್ಲೆಯಾದ್ಯಂತ ಎಲ್ಲಾ ತಾಲ್ಲೂಕಿನಲ್ಲಿ ಸಂಚಾರಿ ಕ್ಷ-ಕಿರಣ ಯಂತ್ರ ಲಭ್ಯವಿದ್ದು ಸಾರ್ವಜನಿಕರು ಇದರ ಸದ್ಬಳಕೆ ಮಾಡಿಕೊಳ್ಳಬೇಕೆಂದು ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ. ಕುಮಾರ್ ಅವರು ತಿಳಿಸಿದರು.

ಅವರು ಇಂದು ಜಿಲ್ಲಾಡಳಿತ, ಜಿಲ್ಲಾಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿಗಳ ಕಚೇರಿ, ಟೊಯೋಟ ಕಿರ್ಲೋಸ್ಕರ್ ಆಟೋ ಪಾರ್ಟ್ಸ್ ರವರ ಸಹಯೋಗದಲ್ಲಿ ಹಾರೋಹಳ್ಳಿ ತಾಲ್ಲೂಕಿನ ದೊಂಬರದೊಡ್ಡಿ ಪ್ರಾಥಮಿಕ ಆರೋಗ್ಯ ಕೇಂದ್ರದ ಗ್ರಾಮಗಳ ವ್ಯಾಪ್ತಿಯಲ್ಲಿ ಆಸ್ಪತ್ರೆ ಸಭಾಂಗಣದಲ್ಲಿ ಕ್ಷ-ಕಿರಣ ಅಗತ್ಯವಿರುವ ರೋಗಿಗಳಿಗೆ ಸಂಚಾರಿ ಕ್ಷ-ಕಿರಣ ಯಂತ್ರದಿಂದ ಫಲಾನುಭವಿಗಳಿಗೆ ಉಚಿತ ಪರೀಕ್ಷೆ ನಡೆಸುವ ಕಾರ್ಯಕ್ರಮದಲ್ಲಿ ಮಾತನಾಡಿದರು.

ಕರ್ನಾಟಕ ರಾಜ್ಯದಲ್ಲಿಯೇ ಪ್ರಥಮ ಭಾರಿಗೆ ಶೀಘ್ರ ಪತ್ತೆ ಮತ್ತು ತ್ವರಿತ ಚಿಕಿತ್ಸೆ ಅನ್ವಯ ಟಯೋಟಾ ಕಿರ್ಲೋಸ್ಕರ್ ಆಟೋ ಪಾರ್ಟ್ಸ್ ಸಂಸ್ಥೆಯವರು ಸಂಚಾರಿ ಕ್ಷ-ಕಿರಣ ಯಂತ್ರವನ್ನು ಕ್ಷಯರೋಗ ನಿರ್ಮೂಲನಾ ಘಟಕಕ್ಕೆ ಒದಗಿಸಿದ್ದು ಜಿಲ್ಲೆಯಲ್ಲಿ ಪ್ರಥಮ ಭಾರಿಗೆ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗಿದ್ದು ರೋಗಿಗಳು ಇದರ ಸದುಪಯೋಗವನ್ನು ಪಡೆದುಕೊಂಡರು.

ಈ ಸಂದರ್ಭದಲ್ಲಿ ವೈದ್ಯಾಧಿಕಾರಿ ಡಾ. ಚರಿತ ಕುಲಕರ್ಣಿ, ಆರೋಗ್ಯ ಸಿಬ್ಬಂದಿಗಳು, ಆಶಾ ಕಾರ್ಯಕರ್ತೆಯರು ಮತ್ತು ಫಲಾನುಭವಿಗಳು ಹಾಗೂ ಸಾರ್ವಜನಿಕರು ಹಾಜರಿದ್ದರು.

# ಪ್ರತಿಷ್ಠಿತ ಶಾಲೆಗಳಿಗೆ 49 ಮಂದಿ ಆಯ್ಕೆ

**ಬೆಂಗಳೂರು ಗ್ರಾಮಾಂತರ:** ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯಿಂದ ಅರ್ಹತಾ ಪರೀಕ್ಷೆ ಮೂಲಕ ಪ್ರತಿಷ್ಠಿತ ಶಾಲೆಗಳ 6ನೇ ತರಗತಿ ಪ್ರವೇಶಕ್ಕಾಗಿ 49 ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗಿದ್ದು, ಆಯ್ಕೆಯಾದ ವಿದ್ಯಾರ್ಥಿಗಳು ಪ್ರತಿಷ್ಠಿತ ಶಾಲೆಗಳಲ್ಲಿ ಶಿಕ್ಷಣ ಪಡೆದು ತಮ್ಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಸಂಗಪ್ಪ ಶುಭ ಹಾರೈಸಿದರು.

ದೇವನಹಳ್ಳಿ ತಾಲ್ಲೂಕಿನ ಬೀರಸಂದ್ರ ಗ್ರಾಮದ ಜಿಲ್ಲಾಧಿಕಾರಿಗಳ ಕಚೇರಿ ನ್ಯಾಯಾಲಯ ಸಭಾಂಗಣದಲ್ಲಿಂದು ನಡೆದ ಪ್ರತಿಷ್ಠಿತ ಶಾಲೆಗೆ ಆಯ್ಕೆಯಾಗಿರುವ ಪ್ರತಿಭಾವಂತ ಮಕ್ಕಳು ಹಾಗೂ ಅವರ ಪೋಷಕರೊಂದಿಗೆ ಸಭೆ ನಡೆಸಿ ಅವರು ಮಾತನಾಡಿದರು. ಪ್ರತಿಷ್ಠಿತ ಶಾಲೆಗಳಿಗೆ ಪ್ರವೇಶ ಕಲ್ಪಿಸಲು ಶೇಕಡ 60 ಕ್ಕಿಂತ ಹೆಚ್ಚಿನ ಅಂಕ ಗಳಿಸಿ 5 ನೇ ತರಗತಿ ಉತ್ತೀರ್ಣರಾದ ಮಕ್ಕಳನ್ನು ಅರ್ಹತಾ ಪರೀಕ್ಷೆ ಮೂಲಕ ಆಯ್ಕೆ ಮಾಡಲಾಗಿದೆ. ಪರಿಶಿಷ್ಟ ಪಂಗಡದ 19 ವಿದ್ಯಾರ್ಥಿಗಳು ಹಾಗೂ ಪರಿಶಿಷ್ಟ ಜಾತಿಯ 30 ವಿದ್ಯಾರ್ಥಿಗಳು ಸೇರಿ ಒಟ್ಟು 49 ವಿದ್ಯಾರ್ಥಿಗಳು ಅರ್ಹತಾ ಪರೀಕ್ಷೆಯಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗಿದೆ ಎಂದರು.ಆಯ್ಕೆಯಾದ ವಿದ್ಯಾರ್ಥಿಗಳು ಕಠಿಣ ಪರಿಶ್ರಮದಿಂದ ಶಾಲಾ ಪಾಠಗಳನ್ನು ನಿರಂತರವಾಗಿ ಅಭ್ಯಾಸ ಮಾಡಿ ಉನ್ನತ ಸ್ಥಾನಗಳನ್ನು ತಲುಪಬೇಕು ಎಂದು ಅಪರ ಜಿಲ್ಲಾಧಿಕಾರಿ ಅವರು ಹೇಳಿದರು. ಸಭೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಟಿ.ಎಲ್. ಎಸ್ ಪ್ರೇಮಾ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಕಛೇರಿ ಅಧೀಕ್ಷಕರಾದ ಗಾಯಿತ್ರಿ ಆಯ್ಕೆಯಾದ ಮಕ್ಕಳ ಪೋಷಕರು ಇದ್ದರು.



ಮಕ್ಕಳಿಗೆ ಶುಭ ಹಾರೈಸಿದ ಅಪರ ಜಿಲ್ಲಾಧಿಕಾರಿ ಸಂಗಪ್ಪ

## ಉದ್ದಿಮೆ ಪರವಾನಗಿ ಆಂದೋಲನಾ

**ಮಂಡ್ಯ:** ಮಂಡ್ಯ ನಗರ ಸಭಾ ವ್ಯಾಪ್ತಿಯಲ್ಲಿರುವಂತಹ ಎಲ್ಲಾ ವ್ಯಾಪಾರಸ್ತರು/ಅಂಗಡಿ ಮಾಲೀಕರು, ಹೋಟೇಲ್ ಮಾಲೀಕರು ಹಾಗೂ ಇತರ ಎಲ್ಲಾ ಉದ್ದಿಮೆದಾರರು ಉದ್ದಿಮೆ ಪರವಾನಿಗೆ ಮತ್ತು ನವೀಕರಣ ಮಾಡಿಸಿಕೊಳ್ಳಲು ಅಥವಾ ಹೊಸ ಉದ್ದಿಮೆ ಪರವಾನಗೆ ಪಡೆದುಕೊಳ್ಳಲು ಜೂನ್ 10 ಮತ್ತು 12 ರಂದು 2 ದಿನ ನಗರಸಭಾ ಕಚೇರಿಯ ಸಭಾಂಗಣದಲ್ಲಿ ಉದ್ದಿಮೆ ಪರವಾನಗೆ ಆಂದೋಲನವನ್ನು ಹಮ್ಮಿಕೊಳ್ಳಲಾಗಿದೆ. ಮಂಡ್ಯ ನಗರ ಸಭಾ ವ್ಯಾಪ್ತಿಯ ಎಲ್ಲಾ ಉದ್ದಿಮೆದಾರರು ಕಚೇರಿಯಿಂದ ನೀಡುವ ಅರ್ಜಿಯನ್ನು ಪಡೆದು ಭರ್ತಿ ಮಾಡಿ ಅರ್ಜಿಯೊಂದಿಗೆ ಬಾಡಿಗೆ ಕರಾರು, ಪಾಸ್ ಪೋರ್ಟ್ ಸೈಜ್ ಪೋಟೋ, ಆಧಾರ್ ಕಾರ್ಡ್, ಅಂಗಡಿ ಫೋಟೋ, ಅಂಗಡಿ ಸ್ವಂತ ಕಟ್ಟಡವಿದ್ದಲ್ಲಿ ತೆರಿಗೆ ಪಾವತಿ ರಶೀದಿಯನ್ನು ನೀಡಬೇಕು ಎಂದು ಮಂಡ್ಯ ನಗರಸಭೆ ಪೌರಾಯುಕ್ತರು ತಿಳಿಸಿದ್ದಾರೆ.

## ನಾಳೆ ವಿದ್ಯುತ್ ವ್ಯತ್ಯಯ

**ಮಂಡ್ಯ:** ಮಂಡ್ಯ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ಕಾರ್ಯನಿರ್ವಾಹಣೆ ಹಮ್ಮಿಕೊಂಡಿರುವುದರಿಂದ ಜೂನ್ 8 ರಂದು ಬೆಳಿಗ್ಗೆ 09 ರಿಂದ ಸಂಜೆ 5 ಗಂಟೆಯವರೆಗೆ ವಿದ್ಯುತ್ನಲ್ಲಿ ಅಡಚಣೆ ಉಂಟಾಗಲಿದೆ. ನಗರ ಪ್ರದೇಶಗಳಾದ ಸುಭಾಷ್ನಗರ, ಆಶೋಕ ನಗರ, ವಿ.ವಿ. ರೋಡ್, ಹೊಸಹಳ್ಳಿ, ವಿನಾಯಕ ಬಡಾವಣೆ, ನೂರು ಅಡಿ ರೋಡ್, ನೆಹರು ನಗರ, ಹೊಸಹಳ್ಳಿ, ದ್ವಾರಕನಗರ, ಗಾಂಧಿನಗರ, ಓಉಔ'ಖ ಟಚಿಥಿಂಣಣ , ಶ್ರೀ ರಾಮ ನಗರ, ಕಾವೇರಿ ನಗರ 1 2 ನೇ ಹಂತ, ಚಂದ್ರ ದರ್ಶನ, ಚಾಮುಂಡೇಶ್ವರಿ ನಗರ, ಅನ್ನಪೂರ್ಣೇಶ್ವರಿ ನಗರ, ಶಂಕರನಗರ, ಇಂಡುವಾಳು, ಕಿರಗಂದೂರು, ಕಲ್ಲಹಳ್ಳಿ. ಕ್ಯಾತುಂಗೆರೆ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳು. ಗ್ರಾಮಾಂತರ ಪ್ರದೇಶಗಳಾದ ಕಾರಸವಾಡಿ, ಮಂಗಲ, ಹನಿಯಂಬಾಡಿ, ಚೀರನಹಳ್ಳಿ, ಹೆಬ್ಬಕವಾಡಿ, ಕೊತ್ತತ್ತಿ, ಮೊತ್ತಹಳ್ಳಿ, ಬೇವಿನಹಳ್ಳಿ, ಹುಲ್ಲುಕೆರೆ, ಎ. ಹುಲಿಕೆರೆ, ಬಿ.ಹುಲಿಕೆರೆ. ಮತ್ತು ಐ.ಪಿ ಮಾರ್ಗಗಳು ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗುವುದರಿಂದ ಕಂಪನಿಯೊಂದಿಗೆ ಸಹಕರಿಸಬೇಕೆಂದು ಮಂಡ್ಯ ಸೆಸ್ಕ್, ಕಾ ಮತ್ತು ಪಾ ಮಂಡ್ಯ ವಿಭಾಗದ ಕಾರ್ಯ ನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶೇ.40 ಅಂಧ ಗಂಡು ಮಕ್ಕಳ ದಾಖಲಾತಿಗೆ ಅವಕಾಶ

**ಮಂಡ್ಯ:** ಶೇ. 40% ಕ್ಕಿಂತ ಹೆಚ್ಚು ದೃಷ್ಟಿ ದೋಷವುಳ್ಳ (ಅಂಧರು) 6 ವರ್ಷದಿಂದ ಹತ್ತು ವರ್ಷ ವಯೋಮಿತಿಯ ಗಂಡು ಮಕ್ಕಳನ್ನು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಮೈಸೂರಿನ ಬಂಬು ಬಜಾರ್ನ ತಿಲಕ್ ನಗರದಲ್ಲಿರುವ ಸರ್ಕಾರಿ ಅಂಧ ಮಕ್ಕಳ ಪಾಠ ಶಾಲೆಯಲ್ಲಿ ದಾಖಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 0821-2297496/9481441453 ಅನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಜಿಲ್ಲಾ ಅಂಗವಿಕಲರ ಹಾಗೂ ಹಿರಿಯ ನಾಗರಿಕರ ಕಲ್ಯಾಣಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಾರಸುದಾರರು ಪತ್ತೆಗೆ ಮನವಿ

**ಮಂಡ್ಯ:** ಪಾಂಡವಪುರ ತಾಲ್ಲೂಕಿನ ಮೇಲುಕೋಟೆಯ ಶ್ರೀ ಯೋಗನರಸಿಂಹ ಸ್ವಾಮಿ ದೇವಸ್ಥಾನದ ಬಳಿ ಅಪರಿಚಿತ ವ್ಯಕ್ತಿಯ ಶವ ಪತ್ತೆಯಾಗಿದೆ ಎಂದು ಮೇಲುಕೋಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮೃತ ವ್ಯಕ್ತಿಗೆ ಸುಮಾರು 65 ರಿಂದ 70 ವರ್ಷ ವಯಸ್ಸಾಗಿದ್ದು 5.3 ಅಡಿ ಎತ್ತರವಿದ್ದು, ಧೃಢಕಾಯ ಶರೀರ, ಗೋಧಿ ಮೈ ಬಣ್ಣ, ತಲೆಯಲ್ಲಿ ಕಪ್ಪು ಮತ್ತು ಬಿಳಿ ಮಿಶ್ರಿತ ಕೂದಲಿದ್ದು, ಬಲಗೈ ಮೇಲೆ ಶಿವಮ್ಮ ಎಂದು ಹಸಿರು ಹಚ್ಚೆ ಇದ್ದು, ಮೈಮೇಲೆ ಹಳದಿ ಬಣ್ಣದ ತುಂಬು ತೋಳಿನ ಶರ್ಟ್ ಮತ್ತು ನೀಲಿ ಬಣ್ಣದ ಲಾಡಿ ನಿಕ್ಕರ್ ಧರಿಸಿರುತ್ತಾರೆ. ವಾರಸುದಾರರಿದ್ದಲ್ಲಿ ದೂ.ಸಂ: 08236-299800/252016 ನ್ನು ಸಂಪರ್ಕಿಸಬಹುದು ಎಂದು ಮೇಲುಕೋಟೆ ಪೊಲೀಸ್ ಠಾಣೆಯ ಪೊಲೀಸ್ ಸಬ್ ಇನ್ಸ್ ಪೆಕ್ಟರ್ ಅವರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ವಾರಸುದಾರರ ಪತ್ತೆಗೆ ಮನವಿ

**ಮಂಡ್ಯ:** ಶ್ರೀರಂಗಪಟ್ಟಣ ತಾಲ್ಲೂಕಿನ ಗಂಜಾಂ ಗ್ರಾಮ ಮಾರಿಗುಡಿ ಬೀದಿಯಲ್ಲಿ ಅಪರಿಚಿತ ವ್ಯಕ್ತಿಯ ಶವ ಪತ್ತೆಯಾಗಿದೆ ಎಂದು ಶ್ರೀರಂಗಪಟ್ಟಣ ಟೌನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮೃತ ವ್ಯಕ್ತಿಗೆ ಸುಮಾರು 60 ರಿಂದ 65 ವರ್ಷ ವಯಸ್ಸಾಗಿದ್ದು 5.3 ಅಡಿ ಎತ್ತರ ಎತ್ತರವಿದ್ದು, ಕೋಲುಮುಖ, ಕೃಷವಾದ ಶರೀರ, ಬಿಳಿ ತಲೆ ಕೂದಲು, ಗಡ್ಡ ಬಿಟ್ಟಿರುತ್ತಾರೆ, ಬಲ ಎದೆ ಮೇಲೆ ಕಪ್ಪು ಕಾರಳ್ಳಿದ್ದು, ನೀಲಿ ಬಣ್ಣದ ಪ್ಯಾಂಟ್, ನೀಲಿ ಬಣ್ಣದ ಶರ್ಟ್ ಧರಿಸಿರುತ್ತಾರೆ. ವಾರಸುದಾರರಿದ್ದಲ್ಲಿ ದೂ.ಸಂ: 08232-22488/9480804800 ನ್ನು ಸಂಪರ್ಕಿಸಬಹುದು ಎಂದು ಶ್ರೀರಂಗಪಟ್ಟಣ ಟೌನ್ ಪೊಲೀಸ್ ಠಾಣೆಯ ಪೊಲೀಸ್ ಸಬ್ ಇನ್ಸ್ ಪೆಕ್ಟರ್ ಅವರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಆದಾಯ ಸಲ್ಲಿಸುವ ಅವಧಿ ವಿಸ್ತರಣೆ

**ಬೆಂಗಳೂರು:** ಆಹಾರ ಸುರಕ್ಷತೆ ಮತ್ತು ಹುಣಮಟ್ಟ ಕಾಯ್ದೆ 2006, ನಿಯಮಗಳು 2011ರನ್ವಯ ಆಹಾರ ಪದಾರ್ಥಗಳ ತಯಾರಕರುಗಳು ಮತ್ತು ಆಮದುದಾರರು ಪ್ರತಿ ವರ್ಷ ಮೇ 31ರೊಳಗೆ ವಾರ್ಷಿಕ ಆದಾಯ ಸಲ್ಲಿಸಬೇಕಾಗಿದ್ದು, ಈಔಖಅಔಖ ಪೋರ್ಟಲ್ನಲ್ಲಿ ವಾರ್ಷಿಕ ಆದಾಯ ಸಲ್ಲಿಸುವ ಸಂದರ್ಭದಲ್ಲಿ ತಾಂತ್ರಿಕ ಸಮಸ್ಯೆಗಳಿಂದಾಗಿ ವಾರ್ಷಿಕ ಆದಾಯವನ್ನು ಸಲ್ಲಿಸಲು ಆಹಾರ ಉದ್ದಿಮೆದಾರರಿಗೆ ಸಾಧ್ಯವಾಗದಿರುವ ಹಿನ್ನೆಲೆಯಲ್ಲಿ ಮೇ 31 ರವರೆಗೆ ನಿಗದಿಪಡಿಸಲಾಗಿರುವ ಕೊನೆಯ ದಿನಾಂಕವನ್ನು ಜೂನ್ 30 ರವರೆಗೆ ವಿಸ್ತರಿಸಲಾಗಿದೆ. FoSCoS ಡ್ಯಾಶ್ ಬೋರ್ಡ್ https://foscos.fssai.gov.in ರಲ್ಲಿ ಆನ್ಲೈನ್ ಮೂಲಕ ಸಲ್ಲಿಸಲಾಗುವ ವಾರ್ಷಿಕ ಆದಾಯವನ್ನು ಮಾತ್ರ ಮಾನ್ಯ ಮಾಡಲಾಗುವುದೆಂದು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯ ಆಯುಕ್ತರು ತಿಳಿಸಿದ್ದಾರೆ.

# ಪಿಎಂಇಜಿಪಿ ಯೋಜನೆಯಡಿ ಸಾಲ-ಸೌಲಭ್ಯಕ್ಕೆ ಅರ್ಜಿ ಆಹ್ವಾನ

**ಬೆಂಗಳೂರು ಗ್ರಾಮಾಂತರ:** ಜಿಲ್ಲೆಯ 2024-25 ನೇ ಸಾಲಿಗೆ ಪ್ರಧಾನ ಮಂತ್ರಿಗಳ ಉದ್ಯೋಗ ಸೃಜನ ಯೋಜನೆ (ಪಿ.ಎಂ.ಇ.ಜಿ.ಪಿ)ಯಡಿ ನಿರುದ್ಯೋಗ ಯುವಕ-ಯುವತಿಯರಿಗೆ ಆರ್ಥಿಕ ಸಾಲ ಸೌಲಭ್ಯ ನೀಡುವ ಯೋಜನೆಗೆ ಅರ್ಹ ಫಲಾನುಭವಿಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಬೆಂಗಳೂರು ಗ್ರಾಮಾಂತರ ಜಿಲ್ಲಾ ಖಾದಿ ಗ್ರಾಮೋದ್ಯೋಗ ಅಧಿಕಾರಿ, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ, ಜಿಲ್ಲಾ ಕಛೇರಿ ಖಾದಿ ಭವನ ನಂ. 10 ಜಸ್ಮಾ ಭವನ ರಸ್ತೆ ಬೆಂಗಳೂರು ಇವರನ್ನು ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ. 94808 25612 ಮೂಲಕ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಖಾದಿ ಗ್ರಾಮೋದ್ಯೋಗ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




### ಯೋಜನೆಯ ವಿವರಗಳು

1 18 ವರ್ಷ ಮೇಲ್ಪಟ್ಟ ಯಾವುದೇ ವ್ಯಕ್ತಿ ಅರ್ಜಿ ಸಲ್ಲಿಸಬಹುದು(ಪುರುಷರು/ಮಹಿಳೆಯರು/ಪ.ಜಾ/ ಪ.ಪಂ/ಹಿಂದುಳಿದ ವರ್ಗ/ಅಲ್ಪಸಂಖ್ಯಾತರು/ಮಾಜಿ ಸೈನಿಕರು/ಅಂಗವಿಕಲರು).

2 ರೂ. 50.00 ಲಕ್ಷ ಮೇಲ್ಪಟ್ಟ ಯೋಜನಾ ವೆಚ್ಚದ ಉತ್ಪಾದನಾ ಚಟುವಟಿಕೆಗಳಿಗೆ ಹಾಗೂ ರೂ.20.00 ಲಕ್ಷಗಳ ವರೆಗೆ ಯೋಜನಾ ವೆಚ್ಚದ ಸೇವಾ ಚಟುವಟಿಕೆಗಳಿಗೆ. ಕನಿಷ್ಠ 8 ನೇ ತರಗತಿ ಉತ್ತೀರ್ಣರಾಗಿರಬೇಕು. ವಿವಿಧ ಹಣಕಾಸು ಸಂಸ್ಥೆಗಳು (ಬ್ಯಾಂಕ್ಗಳ) ಮೂಲಕ ಸಾಲ ಸೌಲಭ್ಯ ನೀಡಲಾಗುವುದು.

3 ಯಾವುದೇ ಆದಾಯದ ಮಿತಿ ಇರುವುದಿಲ್ಲ.

4 ಸಾಮಾನ್ಯ ವರ್ಗದ ಪುರುಷ ಉದ್ಯಮಶೀಲರಿಗೆ ಗ್ರಾಮೀಣ ಪ್ರದೇಶದಲ್ಲಿ ಯೋಜನಾ ವೆಚ್ಚದ ಶೇ.25 ರಷ್ಟು ಹಾಗೂ ವಿಶೇಷ ವರ್ಗದ ಉದ್ಯಮಶೀಲರಿಗೆ ಯೋಜನಾ ವೆಚ್ಚದ ಶೇ.35 ರಷ್ಟು ಸಹಾಯಧನ ಪಡೆಯಬಹುದಾಗಿದೆ.

5 ಅರ್ಜಿಯನ್ನು ಆನ್ಲೈನ್ನಲ್ಲಿ ಸಲ್ಲಿಸಿದ ನಂತರ ತಮ್ಮ ದಾಖಲಾತಿಗಳನ್ನು ಈ ಕಛೇರಿಗೆ ಸಲ್ಲಿಸುವುದು. ಈ ಯೋಜನೆಯ ಬಗ್ಗೆ ಆಸಕ್ತಿ ಹೊಂದಿರುವ ಉದ್ಯಮಶೀಲರು www.kviconline.gov.in ವೆಬ್ಸೈಟ್ ನಲ್ಲಿ kvib ಏಜೆನ್ಸಿ ಲಾಗಿನ್ಗೆ ಆನ್ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು.

## ಜಿಪಂ ಮುಖ್ಯಕಾರ್ಯ ನಿರ್ವಹಣಾಧಿಕಾರಿ ಶೇಕ್ ತನ್ವಿರ್ ಆಸೀಫ್ ಸಲಹೆ

# ಮಕ್ಕಳಲ್ಲಿ ಸಾಹಿತ್ಯದ ರುಚಿ ಬೆಳೆಸಿ

**ಮಂಡ್ಯ:** ಮಾನವನ ಜ್ಞಾನ, ಅರಿವು ಸುಖ-ದುಃಖಗಳನ್ನು ಒಂದು ಪೀಳಿಗೆಯಿಂದ ಮತ್ತೊಂದು ಪೀಳಿಗೆಗೆ ಸಾಗಿಸುವ ಅತ್ಯಂತ ಪ್ರಮುಖ ಮಾರ್ಗ ಸಾಹಿತ್ಯವಾಗಿದೆ. ಆದ್ದರಿಂದ ಸಾಹಿತ್ಯದ ರುಚಿಯನ್ನು ಮಕ್ಕಳಿಗೆ ಬೆಳೆಸುವ ಕೆಲಸವಾಗಬೇಕು ಎಂದು ಜಿಲ್ಲಾ ಪಂಚಾಯತ್ ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಶೇಕ್ ತನ್ವಿರ್ ಆಸೀಫ್ ತಿಳಿಸಿದರು.

ಮಂಡ್ಯ ಜಿಲ್ಲಾ ಪಂಚಾಯತ್ ನ ಕಾವೇರಿ ಸಭಾಂಗಣದಲ್ಲಿ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಇಲಾಖೆ ಹಾಗೂ ಭಾರತ ಜ್ಞಾನವಿಜ್ಞಾನ ಸಮಿತಿಯ ಸಹಯೋಗದಲ್ಲಿ ನಡೆದ ಮಕ್ಕಳ ಸಾಹಿತ್ಯ ಸಂಭ್ರಮ ಸಾಹಿತ್ಯ ಕ್ರೂಢೀಕರಣ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು.

ಮಕ್ಕಳು ತಮ್ಮ ಸಣ್ಣ ವಯಸ್ಸಿನಿಂದಲೇ ಅವರ ಅಭಿವ್ಯಕ್ತಿಯನ್ನು ಹೊರ ಹಾಕುವ ವಿವಿಧ ಪ್ರಕಾರಗಳನ್ನು ಪರಿಚಯ ಮಾಡಿಕೊಟ್ಟರೆ ಮುಂದಿನ ದಿನಗಳಲ್ಲಿ ಅವರು ಹೆಚ್ಚಿನ ಪ್ರಪಂಚ ಜ್ಞಾನವನ್ನು ಪಡೆಯಲು ಸಾಧ್ಯವಾಗುತ್ತದೆ. ಅಂತಹ ಒಂದು ಪ್ರಯತ್ನ ಈ ಕಾರ್ಯಕ್ರಮದಲ್ಲಿ ಅಡಗಿದೆ ಎಂದರು.

ಇಂದಿನ ಕಾರ್ಯಗಾರದಲ್ಲಿ ಮಕ್ಕಳು ಬರೆದ ಕಥೆ, ಕವನ, ನಾಟಕಗಳನ್ನು ಕ್ರೂಢೀಕರಣ ಮಾಡಿ ಅತ್ಯುತ್ತಮವಾದವುಗಳನ್ನು ರಾಜ್ಯ ಹಂತಕ್ಕೆ ಕಳಿಸುವ ಕಾರ್ಯ ನಡೆಯುತ್ತಿದೆ. ನಮ್ಮ ಜಿಲ್ಲೆಯ ಮಕ್ಕಳು ಬರೆದ ಸಾಹಿತ್ಯ ರಾಜ್ಯಮಟ್ಟದಲ್ಲಿ ಹೆಚ್ಚಾಗಿ ಆಯ್ಕೆಯಾಗಲೆಂದು ಹಾರೈಸುತ್ತಾ, ಕಾರ್ಯಗಾರ ಉದ್ಘಾಟನಾ ಸಂದರ್ಭದಲ್ಲಿ ಭಾರತ ಜ್ಞಾನ ವಿಜ್ಞಾನ ಸಮಿತಿ ಹಾಗೂ ಈ ಕಾರ್ಯದಲ್ಲಿ ತೊಡಗಿಸಿಕೊಂಡಿರುವ ಎಲ್ಲಾ ಸಂಪನ್ಮೂಲ ವ್ಯಕ್ತಿಗಳಿಗೆ ಶುಭ ಹಾರೈಸಿದರು.



ಕಾರ್ಯಕ್ರಮದ ರಾಜ್ಯ ಸಂಚಾಲಕರಾದ ಟಿ ಎ ಪ್ರಶಾಂತ್ ಬಾಬುರವರು ಪ್ರಾಸ್ತವಿಕ ಮಾತನಾಡಿ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಇಲಾಖೆಯಲ್ಲಿ ಮಕ್ಕಳಿಗೆ ಸ್ಪಂದಿಸುವ ಸ್ಥಳೀಯ ಆಡಳಿತ ಎಂಬ ಯೋಜನೆ ಅಡಿಯಲ್ಲಿ ಭಾರತ ಜ್ಞಾನವಿಜ್ಞಾನ ಸಮಿತಿಯ ಸಹಯೋಗದೊಂದಿಗೆ ಮಂಡ್ಯ ಜಿಲ್ಲೆಯ ಐದು ತಾಲೂಕುಗಳಲ್ಲಿ ಮಕ್ಕಳ ಸಾಹಿತ್ಯ ಸಂಭ್ರಮ ಹಬ್ಬವನ್ನು ನಡೆಸಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ 500 ಕ್ಕೂ ಹೆಚ್ಚು ಮಕ್ಕಳು ಭಾಗವಹಿಸಿದ್ದು, ಸುಮಾರು 2000 ಕ್ಕೂ ಹೆಚ್ಚು ಪುಟಗಳ ನವೀನ ಸಾಹಿತ್ಯವನ್ನು ಸೃಜನೆ ಮಾಡಿರುತ್ತಾರೆ. ಈ ಸಾಹಿತ್ಯದ ಕ್ರೂಢೀಕರಣ ಹಾಗೂ ರಾಜ್ಯಮಟ್ಟದ ಪುಸ್ತಕ ಪ್ರಕಟಣೆಗೆ ಸಾಹಿತ್ಯದ ಆಯ್ಕೆಗಾಗಿ ಈ ಒಂದು ಕ್ರೂಢೀಕರಣ ಕಾರ್ಯಾಗಾರ ನಡೆಸಲಾಗುತ್ತಿದೆ ಎಂದು ಹೇಳಿದರು. ಇದೇ ಸಂದರ್ಭದಲ್ಲಿ ಭಾರತ ಜ್ಞಾನ ವಿಜ್ಞಾನ ಸಮಿತಿಯ ಮಂಡ್ಯ ಜಿಲ್ಲಾ ಅಧ್ಯಕ್ಷರಾದ ಪ್ರೊ. ಎಸ್. ರೇವಣ್ಣ ಅವರು ಮಾತನಾಡಿ ಮಕ್ಕಳ ಸಾಹಿತ್ಯ ಸಂಭ್ರಮ ಮಕ್ಕಳಿಂದಲೇ ಲೇಖನಗಳನ್ನು ಬರೆಸುವ ಅತ್ಯಂತ ನವೀನ ಚಟುವಟಿಕೆಯಾಗಿದ್ದು, ಮಕ್ಕಳಲ್ಲಿ ಅಭಿವ್ಯಕ್ತಿ ಸಾಮರ್ಥ್ಯವನ್ನು ಹೆಚ್ಚಿಸಲು ಇದು ಸಹಕಾರಿಯಾಗಿದೆ. ಪ್ರಸ್ತುತ ಶೈಕ್ಷಣಿಕ ವರ್ಷದಲ್ಲಿ ಮಂಡ್ಯ ಜಿಲ್ಲೆಯ ಮಳವಳ್ಳಿ, ಶ್ರೀರಂಗಪಟ್ಟಣ, ಮದ್ದೂರು, ಮಂಡ್ಯ ಮತ್ತು ಪಾಂಡವಪುರ ತಾಲೂಕುಗಳಲ್ಲಿನ ಆಯ್ದ 15 ಪಂಚಾಯಿತಿಗಳಲ್ಲಿ ಈ ಕಾರ್ಯಕ್ರಮವನ್ನು ಆಯೋಜಿಸಲಾಗುವುದು ಎಂದರು.

ಕಾರ್ಯಕ್ರಮದಲಿ ಜಿಲ್ಲಾ ಪಂಚಾಯತ್ನ ಮುಖ್ಯ ಯೋಜನಾಧಿಕಾರಿ ಎಸ್ ಧನುಷ್, ಯೋಜನಾ ಅಂದಾಜು ಮೌಲ್ಯ ಮಾಪನಾಧಿಕಾರಿ ಎಂ ಶಿವಮ್ಮ, ಶಿಕ್ಷಣ ಇಲಾಖೆ ವಿಷಯ ಪರಿವೀಕ್ಷಕರಾದ ನಂಜರಾಜು ಹಾಗೂ ವಿವಿಧ ತಾಲೂಕುಗಳಿಂದ ಆಗಮಿಸಿದ್ದ 30 ಸಂಪನ್ಮೂಲ ವ್ಯಕ್ತಿಗಳು ಉಪಸ್ಥಿತರಿದ್ದರು.

## ಡೇ-ನಲ್ಮ್ ಯೋಜನೆಯಡಿ ಸಾಲ ಸೌಲಭ್ಯಕ್ಕೆ ಅರ್ಜಿ

**ಚಿಕ್ಕಬಳ್ಳಾಪುರ:** ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನ (ಡೇ-ಎನ್.ಯು.ಎಲ್.ಎಂ.) ಯೋಜನೆಯ ಉಪಘಟಕವಾದ ಸ್ವಯಂ ಉದ್ಯೋಗ ಕಾರ್ಯಕ್ರಮದಲ್ಲಿ ವೈಯಕ್ತಿಕ ಮತ್ತು ಗುಂಪು ಹಾಗೂ ಕ್ರೆಡಿಟ್ ಬ್ಯಾಂಕ್ ಲೀಂಕೇಜ್ (ಖಇಕ(ಖ) (ಉ) ಃಚಿಟಿಞ ಅಡಿಜಜಣ ಏಟಿಞಚಿರಜ) ನಡಿ ಸಾಲ ಪಡೆಯುವುದಕ್ಕೆ ಬಡತನ ರೇಖೆಗಿಂತ ಕೆಳಗಿರುವ (ಃಕಐ) 18 ರಿಂದ 45 ವರ್ಷದೊಳಗಿನ ನಗರ ಪ್ರದೇಶದ ಅರ್ಹ ವ್ಯಕ್ತಿಗಳು ಮತ್ತು ಡೇ-ನಲ್ಮ್ ಯೋಜನೆಯಡಿ ರಚಿಸಲಾದ ಸ್ವ-ಸಹಾಯ ಗುಂಪುಗಳ ಸದಸ್ಯರು ಗುಂಪು ಉದ್ದಿಮೆಗೆ ಹಾಗೂ ಬ್ಯಾಂಕ್ ಕ್ರೆಡಿಟ್ ಲಿಂಕೇಜ್ ನಡಿ ಬ್ಯಾಂಕ್ ಸಾಲ ಸೌಲಭ್ಯಕ್ಕೆ ಅರ್ಹರಾಗಿದ್ದು, ಚಿಕ್ಕಬಳ್ಳಾಪುರ ಜಿಲ್ಲೆಯ ಬಾಗೇಪಲ್ಲಿ ಪುರಸಭೆ ವ್ಯಾಪ್ತಿಯಲ್ಲಿ ಆಸಕ್ತ ಅರ್ಹ ವ್ಯಕ್ತಿಗಳು ಅಗತ್ಯ ದಾಖಲೆಗಳೊಂದಿಗೆ ಉಚಿತವಾಗಿ ಅರ್ಜಿಗಳನ್ನು ಪಡೆದು ಜೂನ್ 19 ರೊಳಗಾಗಿ ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಡೇ-ನಲ್ಮ್ ವಿಭಾಗಕ್ಕೆ ಸಲ್ಲಿಸಬಹುದಾಗಿರುತ್ತದೆ.

### ಅಗತ್ಯ ದಾಖಲೆಗಳು

**ಅರ್ಜಿಯನ್ನು ದ್ವಿ-ಪ್ರತಿಯಲ್ಲಿ ಭರ್ತಿ ಮಾಡಿ ಎಲ್ಲಾ ದಾಖಲೆಗಳೊಂದಿಗೆ (ಜೆರಾಕ್ಸ್ ಪ್ರತಿಗಳು) ಸಲ್ಲಿಸತಕ್ಕದ್ದು. ವಿದ್ಯಾರ್ಹತೆ (ಅಂಕಪಟ್ಟಿ) ಪಡಿತರಚೀಟಿ, ಆಧಾರ್ಕಾರ್ಡ್, ಚುನಾವಣಾ ಗುರುತಿನ ಚೀಟಿ, ಜಾತಿ/ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಉಳಿತಾಯ ಖಾತೆ ಪುಸ್ತಕ, ವ್ಯಾಪಾರ ಚಟುವಟಿಕೆ ಅಂದಾಜು ಪಟ್ಟಿ, ಅಂಗಡಿಯ ಬಾಡಿಗೆ ಪತ್ರ, ವ್ಯಾಪಾರ ಪರವಾನಗಿ ಪತ್ರ, ಬ್ಯಾಂಕ್ ಬಾಕಿ ಪ್ರಮಾಣ ಪತ್ರವನ್ನು (ಎನ್.ಒ.ಸಿ.) ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಬಾಗೇಪಲ್ಲಿ ಪುರಸಭೆಯ ವಿಷಯ ನಿರ್ವಾಹಕರ ದೂರವಾಣಿ ಸಂಖ್ಯೆ:8861050570,9986288180ಗೆ ಸಂಪರ್ಕಿಸಬಹುದೆಂದು ಬಾಗೇಪಲ್ಲಿ ಪುರಸಭೆಯ ಮುಖ್ಯ ಲೆಕ್ಕಾಧಿಕಾರಿಗಳು ತಿಳಿಸಿದ್ದಾರೆ.**

## ಕಾಣೆಯಾದವರ ಪತ್ತೆಗೆ ಮನವಿ

**ಮಂಡ್ಯ:** ಮಂಡ್ಯ ನಗರದ ಕೆಂಪೇಗೌಡರ ಬೀದಿಯ ಪ್ರಮೋದ (22) ಎಂಬುವವರು ಕಾಣೆಯಾಗಿದ್ದಾರೆ ಎಂದು ಮಂಡ್ಯ ಸೆಂಟ್ರಲ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾದ ವ್ಯಕ್ತಿಯು 5.2 ಅಡಿ ಎತ್ತರ, ದುಂಡು ಮುಖ ಸಾಧಾರಣ ಕಪ್ಪು ಮೈ ಬಣ್ಣ ಹೊಂದಿದ್ದು, ಎದೆಯ ಮೇಲೆ ಡಿ.ಬಾಸ್ ಎಂದು ಹಸಿರು ಹಚ್ಚೆ, ಬಲಗೈ ಮಣಿ ಕಟ್ಟಿನ ಮೇಲೆ ಸಿಂಹದ ಮುಖ ಇರುವ ಹಚ್ಚೆ ಇದ್ದು ಕಾಣೆಯಾದ ದಿನ ಕಪ್ಪು ಗೆರೆಗಳಿರುವ ಬಿಳಿ ಹಸಿರು ಬಣ್ಣದ ತುಂಬು ತೋಳಿನ ಶರ್ಟ್ ಮತ್ತು ಸಿಮೆಂಟ್ ಬಣ್ಣದ ಧರಿಸಿರುತ್ತಾರೆ. ವ್ಯಕ್ತಿಯ ಸುಳಿವು ಸಿಕ್ಕಲ್ಲಿ ದೂ.ಸಂ: 08232-224500/221345 ನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಸೆಂಟ್ರಲ್ ಪೊಲೀಸ್ ಠಾಣೆಯ ಸಬ್ ಇನ್ಸ್ ಪೆಕ್ಟರ್ ಆಫ್ ಪೊಲೀಸ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಧಾನಪರಿಷತ್ತಿಗೆ 11 ಅಭ್ಯರ್ಥಿಗಳು ಅವಿರೋಧ ಆಯ್ಕೆ

**ಬೆಂಗಳೂರು:** ಕರ್ನಾಟಕ ವಿಧಾನಸಭೆಯಿಂದ ವಿಧಾನಪರಿಷತ್ತಿಗೆ ನಡೆದ ದ್ವೈವಾರ್ಷಿಕ ಚುನಾವಣೆಯಲ್ಲಿ 11 ಅಭ್ಯರ್ಥಿಗಳು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಇಂಡಿಯನ್ ನ್ಯಾಷನಲ್ ಕಾಂಗ್ರೆಸ್ ಪಕ್ಷದಿಂದ ಐವಾನ್ ಡಿ'ಸೋಜ, ಕೆ.ಗೋವಿಂದರಾಜು, ಜಗದೇವ ಗುತ್ತೇದಾರ್, ಶ್ರೀಮತಿ ಬಲ್ಕೀಸ್ ಬಾನು, ಎನ್.ಎಸ್.ಬೋಸರಾಜು, ಡಾ.ಯತೀಂದ್ರ ಎಸ್ ಹಾಗೂ ಎ.ವಸಂತ್ಕುಮಾರ್, ಭಾರತೀಯ ಜನತಾ ಪಕ್ಷದಿಂದ ಮೂಳೆ ಮಾರುತಿರಾವ್, ಸಿ.ಟಿ.ರವಿ ಮತ್ತು ರವಿಕುಮಾರ್.ಎನ್ ಹಾಗೂ ಜಾತ್ಯಾತೀತ ಜನತಾದಳದಿಂದ ಟಿ.ಎನ್.ಜವರಾಯಿ ಗೌಡ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಕರ್ನಾಟಕ ವಿಧಾನಸಭೆಯ ಸದಸ್ಯರಿಂದ ವಿಧಾನಪರಿಷತ್ತಿಗೆ 11 ಸದಸ್ಯರನ್ನು ಆಯ್ಕೆ ಮಾಡಲು ದ್ವೈವಾರ್ಷಿಕ ಚುನಾವಣೆಯನ್ನು ಜೂನ್ 13 ರಂದು ನಿಗಧಿಪಡಿಸಲಾಗಿತ್ತು. ಮೇ 27 ರಿಂದ ಮೇ 3 ರವರೆಗೆ ನಾಮಪತ್ರವನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿತ್ತು. ಈ ಅವಧಿಯಲ್ಲಿ ಒಟ್ಟು 12 ಜನ ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದು, ಜೂನ್ 4 ರಂದು ನಾಮಪತ್ರಗಳನ್ನು ಪರಿಶೀಲನೆಗೆ ತೆಗೆದುಕೊಳ್ಳಲಾಗಿತ್ತು. ಪರಿಶೀಲನೆಯ ಸಂದರ್ಭದಲ್ಲಿ ಆಸಿಫ್ ಪಾಷ ಆರ್.ಎಂ. ಎಂಬವರ ನಾಮಪತ್ರವು ಸೂಚಕರಿಲ್ಲದ ಕಾರಣ ತಿರಸ್ಕೃತಗೊಂಡಿದ್ದು, ಉಳುದ 11 ಜನಗಳ ನಾಮಪತ್ರಗಳು ಅಂಗೀಕಾರಗೊಂಡಿದ್ದವು. ಜೂನ್ 6 ಮಧ್ಯಾಹ್ನ 3 ಗಂಟೆಯವರಗೆ ನಾಮಪತ್ರಗಳನ್ನು ಹಿಂತೆಗೆದುಕೊಳ್ಳಲು ಅಂತಿಮ ದಿನವಾಗಿದ್ದು, ಯಾರೂ ನಾಮಪತ್ರಗಳನ್ನು ಹಿಂಪಡೆದಿರುವುದಿಲ್ಲ, ಭರ್ತಿ ಮಾಡಬೇಕಾದ 11 ಸ್ಥಾನಗಳಿಗೆ 11 ಅಭ್ಯರ್ಥಿಗಳು ಮಾತ್ರ ಅಂತಿಮವಾಗಿ ಕಣದಲ್ಲಿರುತ್ತಾರೆ ಎಂದು ಕರ್ನಾಟಕ ವಿಧಾನಪರಿಷತ್ತಿನ ದ್ವೈವಾರ್ಷಿಕ ಚುನಾವಣೆ -2024ರ ಚುನಾವಣಾಧಿಕಾರಿಗಳು ಹಾಗೂ ಕರ್ನಾಟಕ ವಿಧಾನಸಭೆಯ ಕಾರ್ಯದರ್ಶಿ ಎಂ.ಕೆ.ವಿಶಾಲಾಕ್ಷಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಮನ್ವಯ ಶಿಕ್ಷಣ ಸಂಪನ್ಮೂಲ ಶಿಕ್ಷಕರ ಹುದ್ದೆಗಳಿಗೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** 2024-25ನೇ ಸಾಲಿಗೆ ಸಮಗ್ರ ಶಿಕ್ಷಣ-ಕರ್ನಾಟಕ, ಸಮನ್ವಯ ಶಿಕ್ಷಣ ಕಾರ್ಯಕ್ರಮದ ಅನುಷ್ಠಾನಕ್ಕಾಗಿ ಸಮನ್ವಯ ಶಿಕ್ಷಣ ಸಂಪನ್ಮೂಲ ಶಿಕ್ಷಕರನ್ನು ನೇಮಿಸಿಕೊಳ್ಳುವ ಸಂಬಂಧ Special D Ed and Special B Ed (ಸಮನ್ವಯ ಶಿಕ್ಷಣ) ವಿದ್ಯಾರ್ಹತೆ ಹೊಂದಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಶಿಕ್ಷಕರಿಂದ ಹಾಗೂ ನೇರಗುತ್ತಿಗೆ ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಜೂನ್ 12 ರೊಳಗೆ ಸಮಗ್ರ ಶಿಕ್ಷಣ-ಕರ್ನಾಟಕ, ಚಿಕ್ಕಬಳ್ಳಾಪುರ ಇಲ್ಲಿಗೆ ಸಲ್ಲಿಸುವುದು. ಖಾಲಿ ಇರುವ ಬಿ.ಐ.ಇ.ಆರ್.ಟಿ ಹುದ್ದೆಗಳ ವಿವರ: ಬಾಗೇಪಲ್ಲಿ ತಾಲ್ಲೂಕಿನಲ್ಲಿ ಪ್ರೌಢ ಶಾಲೆ- 2, ಚಿಕ್ಕಬಳ್ಳಾಪುರ ತಾಲ್ಲೂಕಿನಲ್ಲಿ ಪ್ರೌಢ ಶಾಲೆ-2, ಚಿಂತಾಮಣಿ ತಾಲ್ಲೂಕಿನಲ್ಲಿ ಪ್ರೌಢ ಶಾಲೆ -2, ಗೌರಿಬಿದನೂರು ತಾಲ್ಲೂಕಿನಲ್ಲಿ ಪ್ರೌಢ ಶಾಲೆ-2, ಗುಡಿಬಂಡೆ ತಾಲ್ಲೂಕಿನಲ್ಲಿ ಪ್ರಾಥಮಿಕ ಶಾಲೆ -1 ಮತ್ತು ಪ್ರೌಢ ಶಾಲೆ-2, ಶಿಡ್ಲಘಟ್ಟ ತಾಲ್ಲೂಕಿನಲ್ಲಿ ಪ್ರಾಥಮಿಕ ಶಾಲೆ-1, ಪ್ರೌಢ ಶಾಲೆ-1 ಜಿಲ್ಲೆಯಲ್ಲಿ ಪ್ರಾಥಮಿಕ ಶಾಲೆ-2, ಪ್ರೌಢ ಶಾಲೆ-11 ಒಟ್ಟು 14 ಹುದ್ದೆಗಳಿಗೆ ಸರ್ಕಾರಿ ಶಾಲೆಗಳ ಶಿಕ್ಷಕರನ್ನು ಆದ್ಯತೆಯ ಮೇರೆಗೆ ಭರ್ತಿ ಮಾಡಿದ ನಂತರ ನೇರ ಗುತ್ತಿಗೆ ಮುಖಾಂತರ ಸಲ್ಲಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಮೊ.ಸಂ: 9448999429, 9480695425 ಗೆ ಸಂಪರ್ಕಿಸಬಹುದೆಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉಂಡೆ ಕೊಬ್ಬರಿ ಖರೀದಿ ನೋಂದಣಿಗೆ ಅವಧಿ ವಿಸ್ತರಣೆ

**ಬೆಂಗಳೂರು:** 2024 ನೇ ಸಾಲಿನಲ್ಲಿ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಎಫ್.ಎ.ಕ್ಯೂ ಗುಣಮಟ್ಟದ ಉಂಡೆ ಕೊಬ್ಬರಿ ಖರೀದಿ ಪ್ರಕ್ರಿಯೆಯಲ್ಲಿ ಕೃಷಿ ಮಾರಾಟ ಮಂಡಳಿ ವತಿಯಿಂದ ತುಮಕೂರು, ಮೈಸೂರು ಹಾಗೂ ಚಾಮರಾಜನಗರ ಜಿಲ್ಲೆಗಳಲ್ಲಿ ಹಾಗೂ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ ವತಿಯಿಂದ ಹಾಸನ, ಮಂಡ್ಯ, ರಾಮನಗರ, ದಕ್ಷಿಣ ಕನ್ನಡ, ಚಿಕ್ಕಮಗಳೂರು ಹಾಗೂ ಚಿತ್ರದುರ್ಗ ಜಿಲ್ಲೆಗಳಲ್ಲಿ ನೋಂದಣಿ ಮಾಡಿದ ರೈತರು ಜೂನ್ 14 ರಂದು ಖರೀದಿ ಪ್ರಕ್ರಿಯೆ ಅಂತ್ಯಗೊಳ್ಳುವುದರಿಂದ, ಈಗಾಗಲೇ ನೋಂದಣಿ ಮಾಡಿಕೊಂಡಿರುವ ರೈತರು ಉಂಡೆ ಕೊಬ್ಬರಿಯನ್ನು ಮಾರಾಟ ಮಾಡದೇ ಇದ್ದಲ್ಲಿ ಜೂನ್ 14 ರೊಳಗಾಗಿ ಸಂಬಂಧಪಟ್ಟ ಖರೀದಿ ಕೇಂದ್ರಗಳಲ್ಲಿ ಮಾರಾಟ ಮಾಡಿ, ಯೋಜನೆಯ ಸದುಪಯೋಗ ಪಡೆದುಕೊಳ್ಳಬಹುದು.

# ಇಬ್ಬರು ಬಾಲಕಾರ್ಮಿಕರ ರಕ್ಷಣೆ

**ಬೆಂಗಳೂರು ಗ್ರಾಮಾಂತರ:** ಕಾರ್ಮಿಕ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಮತ್ತು ಮಕ್ಕಳ ಸಹಾಯವಾಣಿ ಜಂಟಿಯಾಗಿ ಬಾಲ/ಕಿಶೋರ ಕಾರ್ಮಿಕರನ್ನು ದುಡಿಸಿಕೊಳ್ಳುತ್ತಿರುವುದಾಗಿ ಬಂದ ದೂರಿನ ಮೇರೆಗೆ ತಪಾಸಣೆಯನ್ನು ಕೈಗೊಂಡು ಇಬ್ಬರು ಬಾಲ ಕಾರ್ಮಿಕ/ಕಿಶೋರ ಕಾರ್ಮಿಕ ರನ್ನು ದೊಡ್ಡಬಳ್ಳಾಪುರ ತಾಲ್ಲೂಕಿನ ಮೆಳೆಕೋಟೆ ಗ್ರಾಮದಲ್ಲಿ ರಕ್ಷಿಸಲಾಗಿದೆ. ಹಾಗೆಯೇ ಮೆಳೆಕೋಟೆ ಗ್ರಾಮದಲ್ಲಿ ವಿವಿಧ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳಿಗೆ ಸ್ಟಿಕರ್ ಮತ್ತು ಪಾಂಪ್ಲೆಟ್ಸ್ ಗಳನ್ನು ನೀಡಿ ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಳ್ಳದಂತೆ ಜಾಗೃತಿಯನ್ನು ಮೂಡಿಸಲಾಯಿತು. ರಕ್ಷಿಸಲಾದ ಮಕ್ಕಳನ್ನು ತಾತ್ಕಾಲಿಕ ಪುನರ್ವಸತಿ ಕೇಂದ್ರದಲ್ಲಿ ಇರಿಸಲಾಗಿದೆ. ತನಿಖಾ ಕಾರ್ಯಾಚರಣೆಯಲ್ಲಿ ಜಿಲ್ಲಾ ಕಾರ್ಮಿಕ ಅಧಿಕಾರಿ ನಾಗೇಂದ್ರ ಹೆಚ್.ಆರ್, ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕ ಸುಬ್ಬಾರಾವ್. ಎಸ್, ಕಾರ್ಮಿಕ ನಿರೀಕ್ಷಕ ದಯಾನಂದ ಸಾಗರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮೇಲ್ವಿಚಾರಕಿ ರಶ್ಮಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿ ಶ್ರೀಧರ್ ಹಾಗೂ ಮಕ್ಕಳ ಸಹಾಯವಾಣಿಯ ಸಿಬ್ಬಂದಿಗಳಾದ ಶ್ರೀನಿವಾಸ, ಸೌಮ್ಯ ಪಾಲ್ಗೊಂಡಿದ್ದರು.

# ಉತ್ತರಾಖಂಡದಲ್ಲಿ ಕರ್ನಾಟಕದ ಚಾರಣಿಗರ ಸಾವು: ರಾಜ್ಯಪಾಲರ ಸಂತಾಪ



**ಬೆಂಗಳೂರು:** ಉತ್ತರಾಖಂಡ್ನ ಸಹಸ್ರತಲ್ನಲ್ಲಿ ಚಾರಣಕ್ಕೆ ತೆರಳಿದ್ದ ಕೆಲವು ಕನ್ನಡಿಗರು ಮೃತ ಹೊಂದಿದ ಹಿನ್ನಲೆಯಲ್ಲಿ ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ಮೃತರ ಕುಟುಂಬಕ್ಕೆ ಸಂತಾಪ ಸೂಚಿಸಿದ್ದಾರೆ. ಉತ್ತರಾಖಂಡದ ಚಾರಣಕ್ಕೆ ತೆರಳಿ ಹವಾಮಾನ ವೈಪರಿತ್ಯದಿಂದ ಅಪಾಯಕ್ಕೆ ಸಿಲುಕಿ, ಕರ್ನಾಟಕದ ಕೆಲವರು ಮೃತಪಟ್ಟಿರುವ ಸುದ್ದಿ ತಿಳಿದು ದುಃಖವಾಗಿದೆ. ಮೃತರ ಕುಟುಂಬಕ್ಕೆ ನನ್ನ ಸಂತಾಪಗಳು. ಮೃತರ ಆತ್ಮಕ್ಕೆ ಶಾಂತಿ ಸಿಗಲಿ ಹಾಗೂ ಈ ಘಟನೆಯಲ್ಲಿ ಗಾಯಗೊಂಡವರು ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ಪ್ರಾರ್ಥಿಸುತ್ತೇನೆ ಎಂದು ಸಂತಾಪ ವ್ಯಕ್ತಪಡಿಸಿದ್ದಾರೆ.

# 12ರಂದು ಜಿಲ್ಲಾ ಕೇಂದ್ರದಲ್ಲಿ ಜಾಗೃತಿ ಜಾಥಾ

**ಚಿಕ್ಕಬಳ್ಳಾಪುರ:** ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆಯ ಪ್ರಯುಕ್ತ ಜೂನ್ 12 ರಂದು ಜಿಲ್ಲಾ ಕೇಂದ್ರದಲ್ಲಿ ಜಾಗೃತಿ ಜಾಥಾ ಹಾಗೂ ಜಿಲ್ಲೆಯಾದ್ಯಂತ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಆಯೋಜಿಸುವಂತೆ ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ನಡೆದ ''ಜಿಲ್ಲಾ ಬಾಲಕಾರ್ಮಿಕ ಯೋಜನಾ ಸಂಘದ ಜಿಲ್ಲಾ ಮಟ್ಟದ ಕಾರ್ಯಕಾರಿ ಸಮಿತಿ ಹಾಗೂ ಕಾರ್ಯಪಡೆ'' ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಬಾಲಕಾರ್ಮಿಕ ಪದ್ಧತಿಯನ್ನು ಸಂಪೂರ್ಣವಾಗಿ ಮುಕ್ತಗೊಳಿಸಲು ಪ್ಯಾನ್ ಇಂಡಿಯಾ ಕಾರ್ಯಕ್ರಮದಡಿ ಜೂನ್ 1 ರಿಂದಲೇ ವಿವಿಧ ಅರಿವು ಕಾರ್ಯಕ್ರಮಗಳನ್ನು ಜಿಲ್ಲಾಡಳಿತ ಕೈಗೊಳ್ಳುತ್ತಿದೆ. ಅದರ ಭಾಗವಾಗಿ ಜಿಲ್ಲೆಯಾದ್ಯಂತ ಸಾರ್ವಜನಿಕರಿಗೆ ಅರಿವು ಮೂಡಿಸಲು ಕರಪತ್ರ ಮತ್ತು ಬಿತ್ತಿಪತ್ರಗಳ ವಿತರಣೆ ಮಾಡುವುದು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ತಾಲ್ಲೂಕು ಕಾನೂನು ಸೇವಾ ಸಮಿತಿಗಳ ಸಹಕಾರವನ್ನು ಪಡೆದು ಕಾನೂನು ಅರಿವು ನೆರವು ಕಾರ್ಯಕ್ರಮವನ್ನು ಆಯೋಜಿಸುವುದು. ಕೆಲಸದ ಸ್ಥಳಗಳಲ್ಲಿ ಅನಿರೀಕ್ಷಿತ ದಾಳಿಗಳನ್ನು ಕೈಗೊಂಡು ಬಾಲಕಾರ್ಮಿಕತೆಗೆ ಸಿಲುಕಿರುವ ಮಕ್ಕಳನ್ನು ರಕ್ಷಿಸುವ ಮೂಲಕ ಈ ವರ್ಷದ ಬಾಲಕಾರ್ಮಿಕ ವಿರೋಧಿ ದಿನಾಚರಣೆಯನ್ನು ವಿಶೇಷವಾಗಿ ಹಾಗೂ ಪರಿಣಾಮಕಾರಿಯಾಗಿ ಆಯೋಜಿಸಬೇಕಾಗಿರುತ್ತದೆ. ಪ್ಯಾನ್ ಇಂಡಿಯಾ ಕಾರ್ಯಕ್ರಮವೂ ಈ ತಿಂಗಳ ಕೊನೆಯವರೆಗೆ ನಡೆಯಲಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು. ಜೂನ್ 12 ರಂದು ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆಯ ಜಾಗೃತಿ ಜಾಥಾವು ನಗರದ ಜೂನಿಯರ್ ಕಾಲೇಜು ಆವರಣದಿಂದ ಆರಂಭವಾಗಿ ನಗರದ ಪ್ರಮುಖ ರಸ್ತೆಗಳ ಮೂಲಕ ಡಾ. ಬಿ.ಆರ್. ಅಂಬೇಡ್ಕರ್ ಭವನವನ್ನು ತಲುಪಲಿದೆ. ನಂತರ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಜಿಲ್ಲಾ ಮಟ್ಟದ ವೇದಿಕೆ ಕಾರ್ಯಕ್ರಮ ನಡೆಯಲಿದೆ. ಈ ಕಾರ್ಯಕ್ರಮಗಳನ್ನು ಅರ್ಥಪೂರ್ಣವಾಗಿ ಹಾಗೂ ಪರಿಣಾಮಕಾರಿಯಾಗಿ ಆಯೋಜಿಸಲು ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ವಿವಿಧ ಇಲಾಖೆಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಲು ಸಲಹೆ ಸೂಚನೆಗಳನ್ನು ಅಧಿಕಾರಿಗಳಿಗೆ ನೀಡಿದರು. ಸಭೆಯಲ್ಲಿ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸಂಘವನ್ನು ನವೀಕರಿಸಲು ಅನುಮೋದನೆ ಪಡೆಯಲಾಯಿತು. 2024-25ನೇ ಸಾಲಿನ ಕಾರ್ಯ ಪ್ರಗತಿಯ ವಿವರವನ್ನು ಮಂಡಿಸಲಾಯಿತು. ಜಿಲ್ಲಾ ಬಾಲಕಾರ್ಮಿಕ ಯೋಜನಾ ಸಂಘದ ಜಿಲ್ಲಾ ಮಟ್ಟದ ಕಾರ್ಯಕಾರಿ ಸಮಿತಿ ಸದಸ್ಯರ ಹಾಗೂ ಕಾರ್ಯಪಡೆಯ ಪ್ರತಿನಿಧಿಗಳ ಸಲಹೆಗಳನ್ನು ಪಡೆಯಲಾಯಿತು. ಬಾಲಕಾರ್ಮಿಕ ಯೋಜನಾ ಸಂಘದ 2023-24ನೇ ಸಾಲಿನ ಆಡಿಟ್ ವರದಿಯ ಕುರಿತು ಚರ್ಚಿಸಲಾಯಿತು. ಈ ವೇಳೆ ಜಿಲ್ಲಾಧಿಕಾರಿಗಳು ಮತ್ತು ವಿವಿಧ ಜಿಲ್ಲಾ ಮಟ್ಟದ ಅಧಿಕಾರಿಗಳು, ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆಯ ಜಾಗೃತಿ ಕರಪತ್ರ, ಬಿತ್ತಿಪತ್ರಗಳನ್ನು ಬಿಡುಗಡೆಗೊಳಿಸಲಾಯಿತು.



ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಪ್ರಕಾಶ್ ಜಿ.ಟಿ. ನಿಟ್ಟಾಲಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಿ.ಎಲ್, ನಾಗೇಶ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಮಹೇಶ್ ಕುಮಾರ್, ಜಿಲ್ಲಾ ಕಾರ್ಮಿಕ ಅಧಿಕಾರಿ ಆರ್. ವರಲಕ್ಷ್ಮೀ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ವೆಂಕಟೇಶ್ ರೆಡ್ಡಿ, ಬಾಲಕಾರ್ಮಿಕ ಯೋಜನಾ ಸಂಘದ ಜಿಲ್ಲಾ ಮಟ್ಟದ ಕಾರ್ಯಕಾರಿ ಸಮಿತಿ ಸದಸ್ಯರು ಹಾಗೂ ಕಾರ್ಯಪಡೆಯ ಪ್ರತಿನಿಧಿಗಳು ಹಾಜರಿದ್ದರು.

# ಬಸವಣ್ಣ ಭಾವಚಿತ್ರಕ್ಕೆ ಪುಷ್ಪಾರ್ಚನೆ

**ಚಾಮರಾಜನಗರ:** ಚಾಮರಾಜನಗರದಲ್ಲಿ ಶ್ರೀಸಿದ್ದಮಲ್ಲೇಶ್ವರ ವಿರಕ್ತ ಮಠದ ವತಿಯಿಂದ ಆಯೋಜಿಸಿದ್ದ ಗ್ರಾಮಾಂತರ ಬಸವ ಜಯಂತೋತ್ಸವ ವಿಜೃಂಭಣೆಯಿಂದ ನಡೆಯಿತು. ನಗರದ ಶ್ರೀಸಿದ್ದಮಲ್ಲೇಶ್ವರ ವಿರಕ್ತ ಮಠದ ಮುಂಭಾಗ ಮಠದ ಶ್ರೀಚೆನ್ನಬಸವ ಸ್ವಾಮೀಜಿ, ಮರಿಯಾಲ ಮಠದ ಇಮ್ಮಡಿ ಮುರುಘರಾಜೇಂದ್ರಸ್ವಾಮೀಜಿ ಅವರು ವಿಶ್ವಗುರು ಬಸವಣ್ಣ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಮೆರವಣಿ ನೆಗೆಗೆ ಅಧಿಕೃತವಾಗಿ ಚಾಲನೆ ನೀಡಿದರು. ಮೆರವಣಿಗೆಯು ಬಿ.ರಾಚಯ್ಯ ಜೋಡಿರಸ್ತೆ, ಪಚ್ಚಪ್ಪ ವೃತ್ತ ಸೇರಿದಂತೆ ನಗರದ ಪ್ರಮುಖ ರಸ್ತೆಗಳಲ್ಲಿ ಸಾಗಿತು. ಮೆರವಣಿಗೆಯಲ್ಲಿ ವೀರಗಾಸೆ, ಮಂಗಳವಾದ್ಯ, ನಂದಿಧ್ವಜ, ಗೊರವರ ಕುಣಿತ, ಗೊಂಬೆ ಗಾರುಡಿಗ, ಡೊಳ್ಳು ಕುಣಿತ, ಕಂಸಾಳೆ, ತಮಟೆ ಸೇರಿದಂತೆ ಇತರೆ ಕಲಾಂತಂಡಗಳು ಮೆರಗು ನೀಡಿದವು. ತಾಲೂಕಿನ ವಿವಿಧ ಗ್ರಾಮಗಳಿಂದ ಸಾವಿರಾರು ಜನರು ಆಗಮಿಸಿ ಮೆರವಣಿಗೆಯಲ್ಲಿ ಪಾಲ್ಗೊಂಡರು. ಹಲವು ಗ್ರಾಮಗಳಿಂದ ಆಟೋ ಸೇರಿದಂತೆ ಇತರೆ ವಾಹನಗಳಲ್ಲಿ ಬಸವಣ್ಣ ಅವರ ಭಾವಚಿತ್ರ ಇರಿಸಿ ಮೆರವಣಿಗೆ ಮಾಡಲಾಯಿತು. ಅಲ್ಲದೇ ಮೂರು ಜೋಡಿ ಎತ್ತುಗಳನ್ನು ಸಹ ಮೆರವಣಿಗೆ ಮಾಡಲಾಯಿತು. ಮಠದಲ್ಲಿ ಗ್ರಾಮಾಂತರ ಭಜನಾ ಕಾರ್ಯಕ್ರಮ ನಡೆಯಿತು. ಜಯಂತೋತ್ಸವಕ್ಕೆ ಆಗಮಿಸಿದ ಸಾವಿರಾರು ಭಕ್ತರಿಗೆ ಮಠದಲ್ಲಿ ನಿರಂತರ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು. ಗ್ರಾಮಾಂತರ ಬಸವ ಜಯಂತೋತ್ಸವ ಹಿನ್ನೆಲೆಯಲ್ಲಿ ಬುಧವಾರ ಮಠದಲ್ಲಿ ಹಲವು ಧಾರ್ಮಿಕ ಕಾರ್ಯಕ್ರಮಗಳು ಜರುಗಿದವು.



# ಬಾಳೆ ಬೆಳೆಗಾರರ ರಕ್ಷಿಸಲು ವಿಶೇಷ ಪ್ಯಾಕೇಜ್ ಘೋಷಿಸಿ

**ಚಾಮರಾಜನಗರ:** ಜಿಲ್ಲೆಯ ರೈತರ ಸಮಸ್ಯೆಗಳನ್ನು ಬಗೆಹರಿಸುವ ನಿಟ್ಟಿನಲ್ಲಿ ಸಂಬಂಧಪಟ್ಟ ಜಿಲ್ಲಾ ಉಸ್ತುವಾರಿ ಸಚಿವರು, ಜಿಲ್ಲಾಡಳಿತ ಕ್ರಮವಹಿ ಸಬೇಕು. ಮುಂದಿನ 10 ದಿನಗಳೊಳಗಾಗಿ ಜಿಲ್ಲಾಧಿಕಾರಿಗಳು ರೈತರೊಂದಿಗೆ ಸಭೆ ನಡೆಸಿ ರೈತರ ಸಮಸ್ಯೆ ಬಗೆಹರಿಸದಿದ್ದರೆ ಹೋರಾಟ ಮಾಡಬೇಕಾಗುತ್ತದೆ ಎಂದು ರಾಜ್ಯ ಕಬ್ಬು ಬೆಳೆಗಾರರ ಸಂಘದ ಅಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜ್ ಎಚ್ಚರಿಸಿದರು.

ಚಾಮರಾಜನಗರದ ಪ್ರವಾಸಿಮಂದಿರದಲ್ಲಿ ರೈತರ ಕುಂದುಕೊರತೆ ಸಭೆಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ತೀವ್ರ ಬರಗಾಲ ಮತ್ತು ಪ್ರಕೃತಿ ವಿಕೋಪದ ದಾಳಿಗೆ ಸಿಲುಕಿರುವ ರೈತರಿಗೆ ಸರ್ಕಾರ ವಿಶೇಷ ಪ್ಯಾಕೇಜ್ ಘೋಷಿಸಬೇಕು. ಜಿಲ್ಲೆಯಲ್ಲಿ ಕಳೆದ ತಿಂಗಳಿನಿಂದ ಬಿರುಗಾಳಿ ಮಳೆಗೆ ಬಾಳೆ ಫಸಲು ನಾಶವಾಗಿ ರೈತರು ಸಂಕಷ್ಟದಲ್ಲಿ ಸಿಲುಕಿದ್ದಾರೆ. ಬಾಳೆ ಫಸಲು ಬೆಳೆಯಲು ಒಂದು ಎಕರೆಗೆ ಒಂದೂವರೆ ಲಕ್ಷಕ್ಕಿಂತ ಹೆಚ್ಚಿಗೆ ಹಣ ಖರ್ಚಾಗುತ್ತದೆ. ಎನ್ಡಿಆರ್‌ಎಫ್ ಹಾಗೂ ಎಸ್ಡಿಆರ್‌ಎಫ್ ಮಾನದಂಡದ ಪ್ರಕಾರ ತೋಟಗಾರಿಕ ಬೆಳೆಗಳಿಗೆ 23 ಸಾವಿರ ಬೆಳೆ ನಷ್ಟ ಪರಿಹಾರ ನೀಡುವ ಅವಕಾಶವಿರುತ್ತದೆ. ಆದ್ದರಿಂದ ಬಾಳೆ ಬೆಳೆಗಾರರ ರಕ್ಷಿಸಲು ಜಿಲ್ಲೆಗೆ ವಿಶೇಷ ಪ್ಯಾಕೇಜ್ ಘೋಷಣೆ ಮಾಡಬೇಕು ಎಂದು ಒತ್ತಾಯಿಸಿದರು.

ಬರಗಾಲದಿಂದ ಬೆಳೆ ನಷ್ಟ ಹೊಂದಿರುವ ಎಲ್ಲ ರೈತರಿಗೂ ಪ್ರತಿ ಎಕರೆಗೆ 25 ಸಾವಿರ ರೂ. ಬರ ಪರಿಹಾರವನ್ನು ರೈತರ ಖಾತೆಗೆ ಜಮಾ ಮಾಡಬೇಕು. ಜಿಲ್ಲೆಯಲ್ಲಿ ಬಣ್ಣಾರಿ ಸಕ್ಕರೆ

ಕಾರ್ಖಾನೆಯಿಂದ ಕಳೆದ ವರ್ಷ ಉಪ ಉತ್ಪನ್ನಗಳ ಲಾಭವನ್ನು ಕೊಡಿಸಲು ಕ್ರಮವಹಿಸಬೇಕು. ಅಕ್ರಮವಾಗಿ ರೈತರಿಂದ ಅಗ್ರಿಮೆಂಟ್ ನಾನ್ ಅಗ್ರಿಮೆಂಟ್ ಎಂದು ರೈತರಿಂದ ಹಣ ಕಟಾವು ಮಾಡಿರುವುದನ್ನು ವಾಪಸ್ ನೀಡಬೇಕು. ಕಾರ್ಖಾನೆಯ ಮುಂಭಾಗದಲ್ಲಿ ತೂಕದ ಯಂತ್ರ ಅಳವಡಿಸಬೇಕು. ಈ ಸಾಲಿಗೆ ಪ್ರತಿ ಟನ್ ಕಬ್ಬಿಗೆ 4 ಸಾವಿರ ಮುಂಗಡ ಪಾವತಿ ಮಾಡಬೇಕು ಎಂದು ಆಗ್ರಹಿಸಿದರು.

ಇಳುವರಿಯಲ್ಲಿ ಆಗುವ ಮೋಸವನ್ನು ತಪ್ಪಿಸಲು ಸ್ಥಳೀಯ ರೈತ ಮುಖಂಡರ ಜೊತೆ ತಜ್ಞರ ಸಮಿತಿ ರಚಿಸಬೇಕು. ಜಿಲ್ಲೆಯಲ್ಲಿಅಕ್ರಮ ಸಕ್ರಮ ಯೋಜನೆಯನ್ನು ಮರು ಜಾರಿ ಮಾಡಬೇಕು. ತಾಲೂಕಿನ ಗ್ರಾಮೀಣ ಭಾಗದಲ್ಲಿ ಸಮರ್ಪಕವಾಗಿ ಸಾರಿಗೆ ಬಸ್ ಓಡಿಸಬೇಕು. ರಾಜ್ಯದಲ್ಲಿದಲ್ಲಿರುವ 27 ಲಕ್ಷ ಹಾಲು ಉತ್ಪಾದಕರಿಗೆ 700 ಕೋಟಿ ಹೆಚ್ಚುವರಿ ಪ್ರೋತ್ಸಾಹಧನ ನೀಡಬೇಕು. ಕಾಡಂಚಿನ ಪ್ರದೇಶದ ರೈತರ ಬೆಳೆ ಮತ್ತು ಪ್ರಾಣ ರಕ್ಷಣೆಗೆ ಸರ್ಕಾರ ವಿಶೇಷ ಕ್ರಮಗಳನ್ನು ಕೈಗೊಳ್ಳಬೇಕು ಎಂದರು.

ಜಿಲ್ಲೆಯಲ್ಲಿ ರಸಗೊಬ್ಬರದ ಜೊತೆ ಯಾವುದೇ ವಸ್ತುಗಳನ್ನು ಲಿಂಕ್ ಮಾಡಬಾರದು. ರಸಗೊಬ್ಬರದ ಅಂಗಡಿಗಳಲ್ಲಿ ಹೆಚ್ಚಿನ ಬೆಲೆಗೆ ಮಾರಾಟವಾಗುತ್ತಿದ್ದು ದರ ಪಟ್ಟಿಯನ್ನು ಪ್ರಕಟಣೆ ಮಾಡುತ್ತಿಲ್ಲ. ರಾಜ್ಯ ಸರ್ಕಾರ ಬಿತ್ತನೆ ಬೀಜಗಳ ಬೆಲೆ ಏರಿಕೆ ಮಾಡಿರುವುದನ್ನು ಕೈ ಬಿಡಬೇಕು.

ವಿವಿಧ ಯೋಜನೆಯಡಿ ಸರ್ಕಾರದಿಂದ ಸಿಗುವ ಸಾಲ ಸೌಲಭ್ಯಗಳನ್ನು ಪಡೆಯಲು ಇರುವ ಮಾನದಂಡಗಳನ್ನು ಸರಳೀಕರಣಗೊಳಿಸಬೇಕು. ಜಿಲ್ಲೆಯ ಅಕ್ರಮ ಕೆರೆಕಟ್ಟೆಗಳ ಒತ್ತುವರಿಯನ್ನು ಶೀಘ್ರ ತೆರವುಗೊಳಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಸಂಘದ ಜಿಲ್ಲಾಧ್ಯಕ್ಷ ಹಾಲಿನ ನಾಗರಾಜ್, ರಾಜ್ಯ ಕಾರ್ಯದರ್ಶಿ ಮಲೆಯೂರು ಹರ್ಷ, ಚಾಮರಾಜನಗರ ತಾಲೂಕು ಅಧ್ಯಕ್ಷ ಅರಳೀಕಟ್ಟೆ ಕುಮಾರ್, ಪದಾಧಿಕಾರಿಗಳಾದ ಮಲೆಯೂರು ಬಸವರಾಜಪ್ಪ, ನಂಜುಂಡನಾಯಕ, ಸಿದ್ದರಾಜು, ಮಹೇಶ್, ಮಂಜುನಾಥ್, ಗುರುಮಲ್ಲಪ್ಪ, ಸಿದ್ದಲಿಂಗಪ್ಪ, ಸಿದ್ದಪ್ಪ, ಕನಕ, ಶ್ರೀಕಂಠ, ಮಹದೇವಸ್ವಾಮಿ, ಮೋಹನ್, ಚಂದ್ರಪ್ಪ, ಸುರೇಶ್ ಸೇರಿದಂತೆ ಇತರರು ಭಾಗವಹಿಸಿದ್ದರು.

# ಜಿಲ್ಲಾ ಮಟ್ಟದ ಮುಂಗಾರು ಪೂರ್ವ ತಾಂತ್ರಿಕ ಕಾರ್ಯಾಗಾರ

**ಮೈಸೂರು:** ನಾಗನಹಳ್ಳಿಯ ಸಾವಯವ ಕೃಷಿ ಸಂಶೋಧನಾ ಕೇಂದ್ರದಲ್ಲಿ ಜೂನ್.12 ರಂದು ಮೈಸೂರು ಜಿಲ್ಲಾ ಮಟ್ಟದ ಮುಂಗಾರು ಪೂರ್ವ ತಾಂತ್ರಿಕ ಕಾರ್ಯಗಾರ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಕಾರ್ಯಕ್ರಮದಲ್ಲಿ ಬೆಂಗಳೂರಿನ ಕೃಷಿ ವಿಶ್ವವಿದ್ಯಾನಿಲಯದಿಂದ ಮುಂಗಾರು ಹಂಗಾಮಿಗೆ ಸೂಕ್ತವಾದ ನೂತನ ತಂತ್ರಜ್ಞಾನ/ತಳಿ ಹಾಗೂ ಇತರೆ ಕೃಷಿ ಪರಿಕರಗಳ ಪ್ರದರ್ಶನ ಮತ್ತು ರಾಷ್ಟ್ರೀಯ ಬೀಜ ಯೋಜನೆಯಲ್ಲಿ ಲಭ್ಯವಿರುವ ಬೀಜಗಳ ಮಾರಾಟದ ವ್ಯವಸ್ಥೆಯನ್ನು ಮಾಡಲಾಗಿದ್ದು, ಆಸಕ್ತ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಬೇಕು ಎಂದು ನಾಗನಹಳ್ಳಿಯ ವಿಸ್ತರಣಾ ಶಿಕ್ಷಣ ಘಟಕದ ವಿಸ್ತರಣಾ ಮುಂದಾಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಔಷಧೀಯ ಗಿಡಗಳ ವಿತರಣೆ

**ವಿಜಯಪುರ:** ವಿಶ್ವ ಪರಿಸರ ದಿನಾಚರಣೆ ಪ್ರಯುಕ್ತ ಪಟ್ಟಣದ ನಗರ್ತ ಮಹಿಳಾ ಸಂಘದ ವತಿಯಿಂದ ಶ್ರೀ ನಗರೇಶ್ವರಸ್ವಾಮಿ ದೇವಾಲಯದ ಆವರಣದಲ್ಲಿ ಆಚರಿಸಲಾದ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮದಲ್ಲಿ ಸಂಘದ ಸದಸ್ಯರುಗಳಿಗೆ ಔಷಧೀಯ ಗುಣಗಳುಳ್ಳ ಸಸಿಗಳನ್ನು ವಿತರಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಸ0ಘದ ಕಾರ್ಯದರ್ಶಿ ಭಾರತಿ ಪ್ರಭುದೇವ್ ಮನೆಗೊ0ದು ಗಿಡ ನೆಡಿ ಪರಿಸರ ಉಳಿಸಿ ಶುದ್ದವಾದ ಗಾಳಿ ನೀರು ಬೆಳಕು ಇವೆಲ್ಲವು ಪ್ರಕೃತಿ ಮಾತೆಯ ಕೊಡುಗೆ. ಹೆಚ್ಚುತ್ತಿರುವ ಜಾಗತಿಕ ತಾಪ ಮಾನದಿ0ದ ಮನುಷ್ಯನ ಆರೋಗ್ಯ ಹದೆಗೆಡುತ್ತಿದ್ದು, ಪ್ರತಿ ಮನೆಗೊಂದು ಗಿಡ ನೆಡಿ ಎ0ದು ತಿಳಿಸಿದರು. ವಿಶ್ವ ಪರಿಸರ ದಿನಾಚರಣೆಯ ಅ0ಗವಾಗಿ ನಗತ9 ಮಹಿಳಾ ಸ0ಘದಿ0ದ ಔಷದೀಯ ಗಿಡ ಮೂಲಿಕ ಸಸ್ಯಗಳನ್ನು ಸದಸ್ಯರಿಗೆ ವಿತರಿಸಲಾಯಿತು. ಮನೆಯಲ್ಲೆ ಬೆಳೆಯ ಬಹುದಾದ ಒ0ದೆಲಗ, ಬ್ರಾಹ್ಮಿ, ತುಳಸಿ, ಮಲ್ಲಿಗೆ, ಜಾಜಿ, ನಾಗದಳ, ತು0ಬೆ, ಗುಲಾಬಿ ಸಸಿಗಳನ್ನು ನೀಡಲಾಯಿತು. ಅಧ್ಯಕ್ಷರಾದ ಲೀಲಾರುದ್ರಮೂತಿ9, ಉಪಾಧ್ಯಕ್ಷೆ ಭಾರತಿ ವಿಶ್ವನಾಥ್, ಸಹಕಾಯ9ದಶಿ9 ರಮಾನಟರಾಜ್, ಖಜಾ0ಚಿ ಶ್ವೇತಾಮ0ಜುನಾಥ್, ಸುಷ್ಮಾ ಅಶೋಕ್, ಮಾಣಿಕ್ಯ ನ0ಜಣ್ಣ, ಶಾಂತ ಬಸವರಾಜು, ವೀಣಾ ನಟಶೇಖರ್, ರಶ್ಮಿ ಶಿವರುದ್ರ, ಸವಿತಾ ಮುರಳೀಧರ್, ಮ0ಜುಳಾ ರವಿಕುಮಾರ್, ಮಾಲತಿ ಆನಂದ್ ಭಾಗವಹಿಸಿದ್ದರು.



# ತಂಬಾಕು ಬಳಕೆಯಿಂದ ದೂರವಿರಬೇಕು: ಶಿವನಂಜಪ್ಪ

**ಚಾಮರಾಜನಗರ:** ಮಾನಸಿಕ ಹಾಗೂ ದೈಹಿಕ ಆರೋಗ್ಯದ ಮೇಲೆ ತಂಬಾಕು ತುಂಬಾ ಪರಿಣಾಮ ಬೀರುವುದರಿಂದ ವಿದ್ಯಾರ್ಥಿಗಳು ಮತ್ತು ಯುವಕರು ತಂಬಾಕು ಬಳಕೆಯಿಂದ ದೂರವಿರಬೇಕೆಂದು ಪ್ರಾಂಶುಪಾಲರಾದ ಶಿವನಂಜಪ್ಪನವರು ತಿಳಿಸಿದರು.

ಅಮಚವಾಡಿ ಸರ್ಕಾರಿ ಪದವಿಪೂರ್ವ ಕಾಲೇಜು ಸಭಾಂಗಣದಲ್ಲಿ ನಡೆದ ತಂಬಾಕು ರಹಿತ ದಿನ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡುತ್ತಾ ಶಿಕ್ಷಣ ಪಡೆಯುವ ಸಂದರ್ಭದಲ್ಲಿ ವಿದ್ಯಾರ್ಥಿಗಳು ತಂಬಾಕು ಸೇವನೆಯ ಹವ್ಯಾಸಕ್ಕೆ ಬಲಿಯಾಗುವುದು ಸಾಮಾನ್ಯವಾಗಿದೆ. ಸಾವಿರಾರು ವಿದ್ಯಾರ್ಥಿಗಳು ಇದಕ್ಕೆ ವ್ಯಸನರಾಗಿ ದೈಹಿಕವಾಗಿ ಮತ್ತು ಮಾನಸಿಕವಾಗಿ ಆರೋಗ್ಯ ಕಳೆದುಕೊಂಡು ತಮ್ಮ ಅಮೂಲ್ಯ ಸಮಯವನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ. ತಂಬಾಕು ಸೇವನೆಯಿಂದ ಲಕ್ಷಾಂತರ ಜನರು ಮರಣ ಹೊಂದಿದ್ದಾರೆ. ದೇಹದ ಅಂಗಾಂಗಗಳ ಮೇಲೆ ತುಂಬಾ ಪರಿಣಾಮವನ್ನು ಬೀರುತ್ತಿದೆ . ಪ್ರತಿಯೊಬ್ಬರು ತಂಬಾಕು ಬಳಸುವುದಿಲ್ಲವೆಂದು ಪ್ರತಿಜ್ಞೆ ಮಾಡಬೇಕೆಂದರು.

ಉಪನ್ಯಾಸಕ ಸುರೇಶ್‌ಋಗ್ವೇದಿ ಮಾತನಾಡಿ ವ್ಯಾಸಂಗದ ದಿನಗಳಲ್ಲಿ ಉತ್ತಮ ಗೆಳೆತನವನ್ನು, ಸ್ನೇಹಿತರನ್ನು ಮಾಡಿಕೊಳ್ಳಬೇಕು.. ದುಶ್ಚಟಗಳಿಗೆ ಬಲಿಯಾದಾಗ ಇಡೀ ಜೀವನವೇ ವ್ಯರ್ಥವಾಗುತ್ತದೆ. ದುಶ್ಚಟಗಳಿಗೆ ಬಲಿಯಾದಾಗ ಶಿಕ್ಷಣ ಆಸಕ್ತಿ ಕುಂಠಿತಗೊಂಡು ಫಲಿತಾಂಶವಿಲ್ಲದೆ ಜೀವನದಲ್ಲಿ ಮಾನಸಿಕವಾಗಿ ದೈಹಿಕವಾಗಿ ಆರೋಗ್ಯ ಹೀನತೆ ಉಂಟಾಗಿ ನಾಶವಾಗುವ ಜೊತೆಗೆ ಕುಟುಂಬದ ಹಾಗೂ ಊರಿನ ಗೌರವ ನಾಶವಾಗುತ್ತದೆ. ಯುವಕರು ಯಾವುದೇ ದುಶ್ಚಟಗಳಿಗೆ ಬಲಿಯಾಗದೆ ಸಹವಾಸ ದೋಷದಿಂದ ಹಾಳಾಗದೆ ಉತ್ತಮ ಜೀವನವನ್ನು ನಡೆಸಬೇಕು. ಮಾನವ ಜನ್ಮ ಪವಿತ್ರವಾಗಿರುವುದು ಮಾನವ ಜನ್ಮದಲ್ಲಿ ಶ್ರೇಷ್ಠವಾಗಿ ಬದುಕಲು ಉತ್ತಮ ಮಾರ್ಗಗಳನ್ನು ಅನುಸರಿಸಿ ಎಂದು ತಿಳಿಸಿ ತಂಬಾಕು ರಹಿತ ದಿನದ ಪ್ರತಿಜ್ಞೆಯನ್ನು ಪ್ರತಿಯೊಬ್ಬರು ಸ್ವೀಕರಿಸಿ ಜೀವನಬಿಡಿ ತಂಬಾಕನ್ನು ಬಳಸುವುದಿಲ್ಲ ಹಾಗೂ ಕುಟುಂಬದವರು ಬಳಸದಂತೆ ಪ್ರಯತ್ನಿಸುವ ಕಾರ್ಯವನ್ನು ಮಾಡುತ್ತೇವೆ ಎಂದು ಪ್ರತಿಜ್ಞಾವಿಧಿಯನ್ನು ಬೋಧಿಸಿದರು.

ಹಿರಿಯ ಉಪನ್ಯಾಸಕರಾದ ಆರ್ ಮೂರ್ತಿರವರು ತಂಬಾಕು ರಹಿತ ದಿನದ ಮಹತ್ವವನ್ನು ತಿಳಿಸಿ ಶಾಲಾ-ಕಾಲೇಜುಗಳ ಸುತ್ತಮುತ್ತ ಯಾವುದೇ ತಂಬಾಕು ಮಾರಾಟವನ್ನು ನಿಷೇಧಿಸಲಾಗಿದೆ. ವಿದ್ಯಾರ್ಥಿಗಳು ತಂಬಾಕು ಬಳಕೆಯಿಂದ ಆಗುವ ಅನಾಹುತಗಳನ್ನು ತಿಳಿದುಕೊಳ್ಳಬೇಕು . ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು ಎಂದು ತಿಳಿಸಿದರು.ಅಉಪನ್ಯಾಸಕರಾದ ಶಿವಸ್ವಾಮಿ, ಬಸವಣ್ಣ ಉಪಸ್ಥಿತರಿದ್ದರು. ತಂಬಾಕು ರಹಿತ ದಿನದ ಅಂಗವಾಗಿ ವಿದ್ಯಾರ್ಥಿಗಳು ಜಾಥಾ ನಡೆಸಿ ಗಮನ ಸೆಳೆದರು.



# ಪರಿಸರ ಜಾಗೃತಿ ಅಭಿಯಾನ

**ಕೋಲಾರ:** ಚಿಗುರು ಸಂಸ್ಥೆ ಹಾಗೂ ಸಿಆರ್‌ವೈ ಚೈಲ್ಡ್ ರೈಟ್ಸ್ ಆಂಡ್ ಯು ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ (ಮಕ್ಕಳ ಹಕ್ಕುಗಳು ಮತ್ತು ನೀವು) ಕೋಲಾರ ಜಿಲ್ಲೆಯ ಕೆ.ಜಿ.ಎಫ್, ಟೇಕಲ್, ವಕ್ಕಲೇರಿಯಲ್ಲಿ ಪರಿಸರ ಜಾಗೃತಿ ಅಭಿಯಾನವನ್ನು ಆಯೋಜಿಸಲಾಗಿತ್ತು.

ವರ್ಣರಂಜಿತ ಪೋಸ್ಟರ್‌ಗಳಿಂದ ಹಿಡಿದು ತ್ಯಾಜ್ಯದಿಂದ ನವೀನಕಲಾ ಯೋಜನೆಗಳನ್ನು ಮಾಡುವವರೆಗೆ, ಮಕ್ಕಳು ತಮ್ಮ ಸೃಜನಶೀಲತೆ ಮತ್ತು ಪರಿಸರವನ್ನು ರಕ್ಷಿಸುವ ಉತ್ಸಾಹವನ್ನು ಪ್ರದರ್ಶಿಸುವ ನಿಟ್ಟಿನಲ್ಲಿ ಮಹತ್ವದ ಸ್ಥಾನ ಪಡೆದುಕೊಂಡಿದ್ದಾರೆ. ಪರಿಸರ ಸ್ನೇಹಿ ಅಭ್ಯಾಸಗಳನ್ನು ಪ್ರೇರೇಪಿಸುವ ಸೆಷನ್‌ಗಳನ್ನು ನಡೆಸಲಾಯಿತು. ಮರ ನೆಡುವ ಅಭಿಯಾನಗಳು ಮತ್ತು ಸಮುದಾಯದ ಸ್ವಚ್ಛತಾ ಕಾರ್ಯಕ್ರಮಗಳಿಂದ ಜಾಗೃತಿಗೆ ಹೊಸ ಕ್ರಿಯಾಶೀಲತೆ ಮೂಡಿತು.

ಹವಾಮಾನ ಬದಲಾವಣೆಯನ್ನು ತಡೆಯುವ ನಿಟ್ಟಿನಲ್ಲಿ ಮಕ್ಕಳು ಮತ್ತು ಸಮುದಾಯಗಳನ್ನು ಸುಶಿಕ್ಷಿತಗೊಳಿಸುವುದು ಮತ್ತು ಸಜ್ಜುಗೊಳಿಸುವ ಗುರಿಯನ್ನು ಈ ಅಭಿಯಾನ ಹೊಂದಿದೆ ಎಂದರು.

ಹವಾಮಾನ ಬದಲಾವಣೆಯು ಮಕ್ಕಳ ಆರೋಗ್ಯದ ಮೇಲೆ ಅಪಾರ ಅಪಾಯವನ್ನುಂಟುಮಾಡುತ್ತದೆ. ವಿಶೇಷವಾಗಿ ದುರ್ಬಲ ಸಮುದಾಯದವರಿಗೆ ಇದು ಹೆಚ್ಚು ಅಪಾಯಕಾರಿ ಎಂದು ಸಿಆರ್‌ವೈ ದಕ್ಷಿಣ ವಿಭಾಗದ ಪ್ರಾದೇಶಿಕ ನಿರ್ದೇಶಕ ಜಾನ್ ರಾಬರ್ಟ್ಸ್ ಹೇಳಿದ್ದಾರೆ. ಅಷ್ಟೇ ಅಲ್ಲ, ಮುಂದುವರಿದು ಮಾತನಾಡಿದ ಅವರು, ಭಾರತದ ಸುಮಾರು 51 ಪ್ರತಿಶತದಷ್ಟು ಮಕ್ಕಳು ಬಡತನ ಮತ್ತು ಹವಾಮಾನ ಬಿಕ್ಕಟ್ಟಿನ ಅಪಾಯವನ್ನು ಎದುರಿಸುತ್ತಿದ್ದಾರೆ. ದೇಶದಾದ್ಯಂತ ಸುಮಾರು 35.2 ಕೋಟಿ ಮಕ್ಕಳು ವಾರ್ಷಿಕವಾಗಿ ಕನಿಷ್ಠ ಒಂದು ಹವಾಮಾನಕ್ಕೆ ಸಂಬಂಧಿಸಿದ ಅಪಾಯವನ್ನು ಎದುರಿಸುತ್ತಾರೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯವು ಇತ್ತೀಚೆಗೆ ನಡೆಸಿದ ಅಧ್ಯಯನ ಭಾರತದಲ್ಲಿನ ಕೃಷಿ ಪರಿಸರ ವಲಯಗಳಾದ್ಯಂತ ಹವಾಮಾನ ಬದಲಾವಣೆಯು ಮಹಿಳೆಯರು ಮತ್ತು ಮಕ್ಕಳ ಮೇಲೆ ಹೇಗೆ ಪರಿಣಾಮ ಬೀರುತ್ತದೆ ಎಂಬುದರಲ್ಲಿ ತಿಳಿದುಬಂದಿದೆ.

ಎಂಎಸ್ ಸ್ವಾಮಿನಾಥನ್ ರಿಸರ್ಚ್ ಫೌಂಡೇಶನ್ ನಡೆಸಿದ ಅಧ್ಯಯನದ ಪ್ರಕಾರ, 1902 ಮತ್ತು 2018 ರ ನಡುವೆ ಸರಾಸರಿ ವಾರ್ಷಿಕ ತಾಪಮಾನವು ಸುಮಾರು 0.7 ಡಿಗ್ರಿ ಸೆಲ್ಸಿಯಸ್ ಹೆಚ್ಚಳವಾಗಿದ್ದು,



ಭಾರತದಲ್ಲಿ ಹವಾಮಾನ ವೈಪರೀತ್ಯ ಏರಿಕೆಯಾಗಿದೆ ಎಂದು ಉಲ್ಲೇಖಿಸಿದೆ. ಈ ಬದಲಾವಣೆಗಳಿಂದ ಆಗಾಗ್ಗೆ ಉಷ್ಣ ಹವೆ, ಚಂಡಮಾರುತಗಳು, ಪ್ರವಾಹಗಳು ಉಂಟಾಗಿವೆ. ಇವು ಮಕ್ಕಳ ಮೇಲೆಯೂ ಅಪಾರ ಪರಿಣಾಮ ಬೀರಿವೆ.

ಈ ಪರಿಸ್ಥಿತಿಗಳು ಜಾನುವಾರುಗಳಿಗೆ ತೊಂದರೆ ಮಾಡುತ್ತವೆ. ಕುಟುಂಬದ ಆದಾಯವನ್ನು ಕಡಿಮೆ ಮಾಡುತ್ತವೆ ಮತ್ತು ಆಹಾರದ ಕೊರತೆ ಮತ್ತು ಅಪೌಷ್ಟಿಕತೆಗೆ ಕಾರಣವಾಗುತ್ತವೆ. ಇದು ಮಕ್ಕಳ ಶಿಕ್ಷಣದ ಮೇಲೆ ಪರಿಣಾಮ ಬೀರುತ್ತದೆ. ಏಕೆಂದರೆ, ಹವಾಮಾನ ವೈಪರೀತ್ಯದಿಂದ ಶಾಲೆಗಳನ್ನು ಆಗಾಗ ಮುಚ್ಚಬೇಕಾಗುತ್ತದೆ. ಹವಾಮಾನ ಬದಲಾವಣೆಯ ಪರಿಣಾಮಗಳಿಂದ ತಪ್ಪಿಸಿಕೊಳ್ಳಲು ಕುಟುಂಬಗಳು ವಲಸೆ ಹೋಗಬೇಕಾಗುತ್ತದೆ. ಆಗ ಹೆಣ್ಣುಮಕ್ಕಳಿಗೆ ಶಾಲೆಗೆ ಹೋಗಲು ಸಾಧ್ಯವಾಗುವುದಿಲ್ಲ. ಇದರಿಂದ ಹೆಣ್ಣು ಮಕ್ಕಳ ಬಾಲ್ಯ ವಿವಾಹ ಪ್ರಕರಣ ಹೆಚ್ಚುತ್ತದೆ ಎಂದು ಜಾನ್ ರಾಬರ್ಟ್ಸ್ ಹೇಳಿದ್ದಾರೆ.

ದೀರ್ಘ ಸಮುದ್ರ ತೀರವನ್ನು ಹೊಂದಿರುವ ದಕ್ಷಿಣ ಭಾರತದಲ್ಲಿ ಹವಾಮಾನ ವೈಪರೀತ್ಯ ಸಮಸ್ಯೆ ವ್ಯಾಪಕವಾಗಿದೆ. ಇದರಿಂದ, ಲಕ್ಷಾಂತರ ಮಕ್ಕಳ ಜೀವನ ಮತ್ತು ಭವಿಷ್ಯದ ಮೇಲೆ ಪ್ರತಿಕೂಲ ಪರಿಣಾಮ ಬೀರಿದೆ ಎಂದು ಅವರು ಕಳವಳ ವ್ಯಕ್ತಪಡಿಸಿದರು.

ಪರಿಸರ ವ್ಯವಸ್ಥೆಯನ್ನು ರಕ್ಷಿಸಿ ಜಾಗೃತಿ ಅಭಿಯಾನವು ಪ್ರತಿ ಮಗುವಿಗೆ ಸುರಕ್ಷಿತ, ಪೋಷಣೆ ಮತ್ತು ಸ್ವಚ್ಛ ಪರಿಸರವನ್ನು ಖಚಿತಪಡಿಸಿಕೊಳ್ಳಲು ಸಿಆರ್‌ವೈ ಹೊಂದಿರುವ ನಿರಂತರ ಬದ್ಧತೆಗೆ ಇದು ಭಾಗವಾಗಿದೆ ಎಂದು ಅವರು ವಿವರಿಸಿದರು.

ಮಕ್ಕಳು ಮತ್ತು ಯುವಕರನ್ನು ಸಬಲೀಕರಣಗೊಳಿಸುವುದು ಅವರಿಗೆ ನ್ಯಾಯಯುತ ಮತ್ತು ಸಮಾನ ಹವಾಮಾನ ಕ್ರಮವನ್ನು ಅಭಿವೃದ್ಧಿಪಡಿಸುವಲ್ಲಿ ಅರ್ಥಪೂರ್ಣವಾಗಿ ಭಾಗವಹಿಸಲು ಅನುವು ಮಾಡಿಕೊಡುತ್ತದೆ. ನಾವು ವಿಶ್ವ ಪರಿಸರ ದಿನವನ್ನು ಆಚರಿಸುತ್ತಿರುವಾಗ, ಭವಿಷ್ಯದ ಪೀಳಿಗೆಗೆ ನಾವು ಬಿಟ್ಟು ಹೋಗುತ್ತಿರುವ ಪರಂಪರೆಯ ಬಗ್ಗೆ ಗಮನಹರಿಸೋಣ ಮತ್ತು ಸುಸ್ಥಿರ ಜಗತ್ತನ್ನು ರಚಿಸಲು ಒಟ್ಟಾಗಿ ಕೆಲಸ ಮಾಡೋಣ ಎಂದು ಅವರು ಸಮುದಾಯಗಳಿಗೆ ಕರೆ ನೀಡಿದರು.

## ಸುಸ್ಥಿರ ಬಳಕೆ ಸೆಷನ್‌ಗಳು

**ಪರಿಸರ ಸ್ನೇಹಿ ಹವ್ಯಾಸಗಳು ಮತ್ತು ಅಭ್ಯಾಸಗಳನ್ನು ಪ್ರೋತ್ಸಾಹಿಸುವುದಕ್ಕೆ ಮಕ್ಕಳು ಮತ್ತು ಹದಿಹರೆಯದವರಲ್ಲಿ ಸುಸ್ಥಿರ ಬಳಕೆಯ ವಿಶೇಷ ಸೆಷನ್‌ಗಳನ್ನು ನಡೆಸುವುದುಎಕೋ ಆರ್ಟ್ ಪೋಸ್ಟರ್ ರಚನೆ: ಪರಿಸರ ವ್ಯವಸ್ಥೆಯನ್ನು ರಕ್ಷಿಸುವುದು ಎಂಬ ಥೀಮ್‌ನ ಪೋಸ್ಟರ್ ಗಳನ್ನು ಮಕ್ಕಳು ರಚಿಸಿದ್ದು, ಕಲೆಯ ಮೂಲಕ ಪರಿಸರ ರಕ್ಷಣೆಯ ಬಗ್ಗೆ ತಮ್ಮ ಬದ್ಧತೆ ಮತ್ತು ತಿಳುವಳಿಕೆಯನ್ನು ವ್ಯಕ್ತಪಡಿಸಿದರು. ಕಸದಿಂದ ರಸ ಪ್ರಾಜೆಕ್ಟ್‌ಗಳು: ತ್ಯಾಜ್ಯ ಸಾಮಗ್ರಿಗಳನ್ನು ಉಪಯುಕ್ತ ಸಾಮಗ್ರಿಯನ್ನಾಗಿ ಅಥವಾ ಅಲಂಕಾರಿಕ ಸಾಮಗ್ರಿಯನ್ನಾಗಿ ಪರಿವರ್ತಿಸುವ ಯೋಜನೆಯನ್ನು ಮಕ್ಕಳು ಮತ್ತು ಹದಿಹರೆಯದವರು ರೂಪಿಸಿದ್ದು, ಮರುಬಳಕೆಯ ಪ್ರಾಮುಖ್ಯತೆಯನ್ನು ಇದು ಒತ್ತಿ ಹೇಳುತ್ತಿದೆ. ಸಮುದಾಯದ ತೊಡಗಿಸಿಕೊಳ್ಳುವಿಕೆ: ಶಾಲೆಯ ಸುತ್ತಮುತ್ತಲಿನ ಸ್ಥಳಗಳ ಸ್ವಚ್ಛತೆ ಮತ್ತು ಸಸ್ಯ ನೆಡುವ ಅಭಿಯಾನಗಳ ಮೂಲಕ ಪರಿಸರ ಸ್ವಚ್ಛತೆ ಮತ್ತು ಶುಚಿತ್ವವನ್ನು ಆಧರಿಸಿದ ಚಟುವಟಿಕೆಗಳಿಗೆ ಸಮುದಾಯಗಳನ್ನು ಪ್ರೋತ್ಸಾಹಿಸಲಾಗಿದೆ. ಮಕ್ಕಳು ಮತ್ತು ಸಮುದಾಯದ ಸದಸ್ಯರಲ್ಲಿ ದೀರ್ಘಕಾಲೀನ ಜಾಗೃತಿ ಮತ್ತು ವರ್ತನೆಯಲ್ಲಿನ ಬದಲಾವಣೆಯನ್ನು ಉಂಟು ಮಾಡುವ ಅಭಿಯಾನವು ಸಿಆರ್‌ವೈ ಪರಿಸರ ವ್ಯವಸ್ಥೆಯನ್ನು ರಕ್ಷಿಸಿ ಎಂಬುದಾಗಿದ್ದು, ಪರಿಸರ ರಕ್ಷಣೆ ಮತ್ತು ಸುಸ್ಥಿರತೆಗೆ ರಾಯಭಾರಿಯಾಗಲು ಮಕ್ಕಳನ್ನು ಪ್ರೋತ್ಸಾಹಿಸುತ್ತದೆ ಎಂದು ಜಾನ್ ರಾಬರ್ಟ್ಸ್ ಹೇಳುತ್ತಾರೆ. ಚಿಗುರು ಸಂಸ್ಥೆಯ ಅಧ್ಯಕ್ಷೆ ಪ್ರಭಾವತಿ, ತಾಲೂಕು ಸಂಯೋಜಕರುಗಳಾದ ಶಾಂತಕುಮಾರಿ, ದೃತಿ, ಏಂಜಲ್, ಶಿಕ್ಷಕಿಯರಾದ ರಾಮಲಕ್ಷ್ಮಿ, ವೆಂಕಟರತ್ನಮ್ಮ,ಕೆ.ಜಿ.ಎಫ್ ಅಂಬೇಡ್ಕರ್ ವಿದ್ಯಾರ್ಥಿನಿಲಯದ ಮುಖ್ಯೋಪಾಧ್ಯಾಯ ಸದಾಶಿವ ರೆಡ್ಡಿ, ಮೆನೇಜಮೆಂಟ್ ಶಾಂತ ಲಕ್ಷ್ಮಿ, ಹೇಮಾವತಿ, ತಿರುಮಲಪ್ಪ, ಮುಖ್ಯೋಪಾಧ್ಯಾಯಿನಿ ಜಯಂತಿ ಮೈಲಾಂಡಹಳ್ಳಿ ಉಪಸ್ಥಿತರಿದ್ದರು.**

# ಇಎಲ್ಸಿಐಎ ಟೆಕ್ ಸಮ್ಮೇಳನ ಉದ್ಘಾಟನೆ

**ಬೆಂಗಳೂರು:** ಜಗತ್ತಿನ ತಂತ್ರಜ್ಞಾನ ಕ್ಷೇತ್ರದಲ್ಲಿನ ನವೀನ ಮತ್ತು ಗಮನಾರ್ಹ ತಂತ್ರಜ್ಞಾನಗಳ ಅಭಿವೃದ್ಧಿ ಮತ್ತು ಬಳಕೆ ಕುರಿತು ವಿಚಾರ ವಿನಿಮಯದ ಜೊತೆಗೆ ನಮ್ಮ ಕಂಪನಿಗಳು ಕೂಡ ಆ ಧಿಕ್ಕಿನಲ್ಲಿ ಸಾಗಲು ಕೈಗೊಳ್ಳಬೇಕಾದ ಕ್ರಮಗಳ ಕುರಿತು ಚರ್ಚಿಸಲು ಎಲೆಕ್ಟ್ರಾನಿಕ್ ಸಿಟಿ ಇಂಡಸ್ಟ್ರೀಸ್ ಅಸೋಸಿಯೇಷನ್(ಇಎಲ್ಸಿಐಎ) ವತಿಯಿಂದ ನಗರದಲ್ಲಿ ಮೊಟ್ಟ ಮೊದಲ ಬಾರಿ 'ಇಎಲ್ಸಿಐಎ ಟೆಕ್ ಸಮ್ಮೇಳನ-2024' ಆಯೋಜಿಸಲಾಗಿದೆ.ಜೂನ್ 7ರಂದು ನಗರದ ಶಾಂಗ್ರಿ-ಲಾ ಹೋಟೆಲ್‌ನಲ್ಲಿ ನಡೆಯುವ ಉದ್ಘಾಟನಾ ಸಮಾರಂಭದಲ್ಲಿ ಜಗತ್ತನ್ನು ಅತಿ ವೇಗವಾಗಿ ಪ್ರವೇಶಿಸುತ್ತಿರುವ ನವೀನವಾದ ತಂತ್ರಜ್ಞಾನಗಳ ಕುರಿತು ವಿವಿಧ ಕ್ಷೇತ್ರಗಳ ನಾಯಕರ ಅಭಿಪ್ರಾಯಗಳು ಮತ್ತು ವಿಚಾರ ವಿನಿಮಯವನ್ನು ಕೇಳಿಸಿಕೊಳ್ಳುವ ಅವಕಾಶ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸುವವರಿಗೆ ದೊರೆಯಲಿದೆ. ಸಮ್ಮೇಳನಕ್ಕೆ ಬಂದವರು ವಿವಿಧ ಕ್ಷೇತ್ರಗಳ ಪ್ರಮುಖರೊಂದಿಗೆ ಸಕ್ರಿಯವಾಗಿ ತಮ್ಮ ವಿಚಾರ ವಿನಿಯಮ ಮಾಡಿಕೊಳ್ಳಬಹುದು. ತಂತ್ರಜ್ಞಾನ ಯಾವ ರೀತಿ ಬದಲಾಗುತ್ತಿದೆ, ಯಾವ ರೀತಿ ಕೆಲಸ ಮಾಡುತ್ತದೆ ಎನ್ನುವುದರ ಅನುಭವವನ್ನು ಕೂಡ ಪಡೆದುಕೊಳ್ಳಬಹುದಾಗಿದೆ. ಭಾರತದ ಸಿಲಿಕಾನ್ ವ್ಯಾಲಿ ಎಂದು ಕರೆಯಲಾಗುವ ಎಲೆಕ್ಟ್ರಾನಿಕ್ ಸಿಟಿಯಲ್ಲಿರುವ ಐಟಿ ಉದ್ಯಮಗಳ ದಿಗ್ಗಜರು ಕಾರ್ಯಕ್ರಮದಲ್ಲಿ ಭಾಗವಹಿಸುತ್ತಾರೆ. ಅದರ ಜೊತೆಗೆ ಪಾಲುದಾರ ಸಂಸ್ಥೆಗಳು ಮತ್ತು ತಜ್ಞರು ಭಾಷಣ ಮಾಡುತ್ತಾರೆ. ಸಮ್ಮೇಳನ ಕುರಿತು: ಇಎಲ್ಸಿಐಎ ತಂತ್ರಜ್ಞಾನ ಸಮ್ಮೇಳನ 2024 ವಿಭಿನ್ನವಾಗಿರಲಿದ್ದು, ತಂತ್ರಜ್ಞಾನ ವಲಯದಲ್ಲಿ ಅಲ್ಲೋಲ ಕಲ್ಲೋಲ ಸೃಷ್ಟಿಸುತ್ತಿರುವ ನವೀನ ತಂತ್ರಜ್ಞಾನಗಳು ಅದಕ್ಕೆ ಸಂಬಂಧಿಸಿದ ನೀತಿ ನಿರೂಪಣೆಗಳು ಮತ್ತು ಕ್ಷೇತ್ರದ ಬೆಳವಣಿಗೆಗೆ ಇರುವ ಅವಕಾಶಗಳು ಕುರಿತು ಪ್ರಮುಖವಾಗಿ ಬೆಳಕು ಚೆಲ್ಲಲಿದೆ. ಹೊಸ ಹೊಸ ಆಲೋಚನೆಗಳು ಮತ್ತು ನಾವಿನ್ಯತೆಗಳ ಮೂಲಕ ಮಹತ್ತರ ಬದಲಾವಣೆ ಉಂಟು ಮಾಡುವ ತಂತ್ರಜ್ಞಾನ ಬಳಕೆಗೆ ಕಿಡಿ ಹೊತ್ತಿಸುವ ವಿಚಾರಗಳು ಮಂಡನೆಯಾಗಲಿವೆ. ಸಮ್ಮೇಳನದಲ್ಲಿ ಐಟಿ ವಲಯದ ಪಾಲುದಾರರಾದ ಐಇಎಸ್ಎ (ಇಂಡಿಯಾ ಎಲೆಕ್ಟ್ರಾನಿಕ್ಸ್ ಆಂಡ್ ಸೆಮಿಕಂಡಕ್ಟರ್ ಅಸೋಸಿಯೇಷನ್), ಐಐಐಟಿಬಿ (ಇಂಟರ್ನ್ಯಾಷನಲ್ ಇನ್ಸ್ಟಿಟ್ಯೂಟ್ ಆಫ್ ಇನ್ಫರ್ಮೇಷನ್ ಟೆಕ್ನಾಲಜಿ ಬೆಂಗಳೂರು) ಎಆರ್ಟಿ-ಪಾರ್ಕ್, (ಎಐ ಮತ್ತು ರೊಬೋಟಿಕ್ಸ್ ಟೆಕ್ನಾಲಜಿ ಪಾರ್ಕ್ ಐಐಎಸ್ಸಿ, ಐವನ್ಕೆ ಟಾಕ್ಸ್ ಮತ್ತು ಇಎಲ್ಸಿಐಟಿಎ (ಎಲೆಕ್ಟ್ರಾನಿಕ್ಸ್ ಸಿಟಿ ಟೌನ್ಶಿಪ್ ಅಥಾರಿಟಿ) ಭಾಗವಹಿಸುತ್ತಿವೆ. ಇಎಲ್ಸಿಐಎ ತಂತ್ರಜ್ಞಾನ ಸಮ್ಮೇಳನವು ಜಾಗತಿಕ ತಂತ್ರಜ್ಞಾನ ಕ್ಷೇತ್ರದಲ್ಲಿ ಹೊಸ ಮೈಲುಗಲ್ಲು ನಿರ್ಮಿಸಲಿದೆ. ಇಎಲ್ಸಿಐಎ ಅಧ್ಯಕ್ಷರಾದ ಶ್ರೀರಾಮ್ ಕುಮಾರ್ ಅವರು ಸಮ್ಮೇಳನದ ಕುರಿತು ಮಾತನಾಡಿ, 'ನಾವೀನ್ಯತೆ, ಸಹಭಾಗಿತ್ವ ಮತ್ತು ಅಭಿವೃದ್ಧಿ ಆಗಬೇಕು ಎನ್ನುವ ನಮ್ಮ ಗುರಿ ಮತ್ತು ಉದ್ದೇಶಕ್ಕೆ ಈ ಸಮ್ಮೇಳನ ಬಹುದೊಡ್ಡ ಹೆಜ್ಜೆ ಆಗಲಿದೆ. ನಮ್ಮ ಪಾಲುದಾರರು ಮತ್ತು ಉದ್ಯಮ ನಾಯಕರುಗಳ ಸಕ್ರಿಯ ಪಾಲ್ಗೊಳ್ಳುವಿಕೆಯಿಂದ ಈ ಸಮ್ಮೇಳನವು ತಂತ್ರಜ್ಞಾನ ವಲಯದಲ್ಲಿ ಹೊಸ ಮೈಲುಗಲ್ಲು ನಿರ್ಮಿಸುವ ವಿಶ್ವಾಸವಿದೆ. ತಂತ್ರಜ್ಞಾನದ ಮೂಲಕ ಸಬಲವಾದ ಭವಿಷ್ಯವನ್ನು ಕಟ್ಟಲು ಎಲ್ಲರ ಸಕ್ರಿಯ ಪಾಲ್ಗೊಳ್ಳುವಿಕೆಗಾಗಿ ತಂತ್ರಜ್ಞಾನ ವಲಯದ ನಾಯಕರನ್ನು ಸಮ್ಮೇಳನಕ್ಕೆ ಹೃತ್ಪೂರ್ವಕವಾಗಿ ಸ್ವಾಗತಿಸುತ್ತೇನೆ' ಎಂದಿದ್ದಾರೆ.



# ಮಲೆಮಹದೇಶ್ವರಸ್ವಾಮಿ ಸನ್ನಿಧಿಯಲ್ಲಿ ಅಮಾವಾಸ್ಯೆ ವಿಶೇಷ ಪೂಜೆ

**ಚಾಮರಾಜನಗರ:** ಜಿಲ್ಲೆಯ ಪವಿತ್ರ ಯಾತ್ರಾಸ್ಥಳ ಮಲೆಮಹದೇಶ್ವರಸ್ವಾಮಿ ಸನ್ನಿಧಿಯಲ್ಲಿ ಅಮಾವಾಸ್ಯೆ ಪ್ರಯುಕ್ತ ಗುರುವಾರ ವಿಶೇಷ ಪೂಜೆ ನಡೆಯಿತು.

ಅಮಾವಾಸ್ಯೆ ಹಿನ್ನೆಲೆಯಲ್ಲಿ ರಾಜ್ಯ ಸೇರಿದಂತೆ ನೆರೆಯ ತಮಿಳುನಾಡು ರಾಜ್ಯದಿಂದಲೂ ಸಾವಿರಾರು ಭಕ್ತರು ಆಗಮಿಸಿ ಮಾದಪ್ಪನ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು. ಅಮಾವಾಸ್ಯೆ ಪ್ರಯುಕ್ತ ಬುಧವಾರ ಮಾದಪ್ಪನಿಗೆ ಎಣ್ಣೆ ಮಜ್ಜನ ಸೇವೆ ನಡೆಯಿತು. ಗುರುವಾರ ಬೆಳಗ್ಗೆ ಮಾದಪ್ಪನಿಗೆ ವಿವಿಧ ಅಭಿಷೇಕ, ವಿಶೇಷ ಪೂಜೆ ಮಾಡಲಾಯಿತು. ಬಳಿಕ ಭಕ್ತರು ಸರತಿ ಸಾಲಿನಲ್ಲಿ ನಿಂತು ದೇವರ ದರ್ಶನ ಪಡೆದು ಪುನೀತರಾದರು. ಹುಲಿವಾಹನ ಉತ್ಸವ, ಬಸವವಾಹನ ಉತ್ಸವ ಹಾಗೂ ಚಿನ್ನದ ರಥೋತ್ಸವ ನಡೆಯಿತು. ಬೆಟ್ಟಕ್ಕೆ ಆಗಮಿಸಿದ ಭಕ್ತರಿಗೆ ದಾಸೋಹ ಭವನದಲ್ಲಿ ದಾಸೋಹ ವ್ಯವಸ್ಥೆ ಕಲ್ಪಿಸಲಾಗಿತ್ತು. ಹರಕೆ ಹೊತ್ತ ಭಕ್ತರು ಪಂಜಿನ ಸೇವೆ, ಉರುಳು ಸೇವೆ, ಮುಡಿಸೇವೆ, ಧೂಪದ ಸೇವೆ ನೆರವೇರಿಸಿದರು. ದೇವರ ದರ್ಶನಕ್ಕೆ ವಿಶೇಷ ಕೌಂಟರ್‌ಗಳನ್ನು ತೆರೆಯಲಾಗಿತ್ತು. ಹೆಚ್ಚುವರಿ ಲಾಡು ತಯಾರಿಸಿ ಮಾರಾಟ ಮಾಡಲಾಯಿತು. ಪ್ರಾಧಿಕಾರದ ವತಿಯಿಂದ ಭಕ್ತರಿಗೆ ಕುಡಿಯುವ ನೀರು, ಶೌಚಾಲಯ ವ್ಯವಸ್ಥೆ ಕಲ್ಪಿಸಲಾಗಿತ್ತು. ಎಣ್ಣೆ ಮಜ್ಜನ ಸೇವೆಗೆ ಆಗಮಿಸಿದ್ದ ಭಕ್ತರು ಬೆಟ್ಟದಲ್ಲಿಯೇ ವಾಸ್ತವ್ಯ ಹೂಡಿದ್ದರು.

# ನಾಲ್ವಡಿ ಕೃಷ್ಣರಾಜ ಒಡೆಯರ್ ಜನ್ಮದಿನಾಚರಣೆ

**ಚಾಮರಾಜನಗರ :** ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ರಾಜಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಜನ್ಮದಿನವನ್ನು ಆಚರಿಸಲಾಯಿತು.

ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರು, ರಾಷ್ಟ್ರ ಯುವ ಪ್ರಶಸ್ತಿ ಪುರಸ್ಕೃತರಾದ ಸುರೇಶ್ ಎನ್ ಋಗ್ವೇದಿ ಮಾತನಾಡಿ ಚಾಮರಾಜನಗರಕ್ಕೆ ಮೈಸೂರು ಸಂಸ್ಥಾನಕ್ಕೂ ನಿಕಟ ಸಂಬಂಧವಿದ್ದು ಚಾಮರಾಜನಗರದಲ್ಲಿ ಚಾಮರಾಜೇಶ್ವರ ದೇವಾಲಯದ ನಿರ್ಮಾಣ ಹಾಗೂ ನಗರ ಸ್ಥಾಪನೆಗೆ ಅವರ ಕೊಡುಗೆ ಅಪಾರವಾಗಿದೆ. ನಗರದ ರೈತರಿಗೆ ಅಪಾರ ಪ್ರಮಾಣದ ಭೂಮಿಯನ್ನು ನೀಡಿ ಕೃಷಿ ಭೂಮಿಯನ್ನಾಗಿ ಪರಿವರ್ತಿಸಿ ಅವರ ಬದುಕಿಗೆ ಶಾಶ್ವತವಾದ ಶಕ್ತಿಯನ್ನು ನೀಡಿದವರು. ಚಾಮರಾಜನಗರದ ಜನತೆ ಸದಾಕಾಲ ಮೈಸೂರು ಸಂಸ್ಥಾನದ ಕೃಪೆಗೆ ಪಾತ್ರವಾಗಿತ್ತು. ಆಷಾಢ ಮಾಸದಲ್ಲಿ ನಡೆಯುವ ಚಾಮರಾಜೇಶ್ವರ ರಥೋತ್ಸವದ ಸಂದರ್ಭದಲ್ಲಿ ಮಹಾರಾಜರಿಗೆ ಗೌರವ ಸಲ್ಲಿಸುವ ಸಂಪ್ರದಾಯ ಇಂದಿಗೂ ಕೂಡ ರೂಢಿಯಲ್ಲಿದೆ . ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಆಡಳಿತದ ಮಾರ್ಗದರ್ಶನದ ಅಧ್ಯಯನದ ಮೂಲಕ ಆಡಳಿತಗಾರರು ಕಾರ್ಯನಿರ್ವಹಿಸಿದರೆ ಪ್ರತಿ ನಗರವು ಮೈಸೂರು ನಗರದಂತೆ ನಿರ್ಮಾಣ ಮಾಡಬಹುದು ಎಂದು ಅಭಿಪ್ರಾಯ ಪಟ್ಟರು.

ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಜ್ಞಾನ ಚಿಂತನೆ, ದೂರದೃಷ್ಟಿ ,ಕರ್ತೃತ್ವದೃಷ್ಟಿ ಇಂದಿನ ಆಡಳಿತಗಾರರಿಗೆ ಬಹಳ ಮಾರ್ಗದರ್ಶನವಾಗಿದೆ. ಇವರ ಆಡಳಿತದ ಅವಧಿಯಲ್ಲಿ ಕೃಷಿ, ಕೈಗಾರಿಕೆ, ವಿಜ್ಞಾನ, ತಂತ್ರಜ್ಞಾನ, ನೀರಾವರಿ ,ಮಹಿಳಾ ಶಿಕ್ಷಣ,



**ಚಾಮರಾಜನಗರ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ರಾಜಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಜನ್ಮದಿನವನ್ನು ಆಚರಿಸಲಾಯಿತು. ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರು, ರಾಷ್ಟ್ರ ಯುವ ಪ್ರಶಸ್ತಿ ಪುರಸ್ಕೃತರಾದ ಸುರೇಶ್ ಎನ್ ಋಗ್ವೇದಿ, ಕೊಳ್ಳೇಗಾಲ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಕೊಂಗರಹಳ್ಳಿ ನಾಗರಾಜು ಇತರರು ಇದ್ದರು.**

ಕಾಲೇಜುಗಳ ಸ್ಥಾಪನೆ, ವಸತಿ ನಿಲಯಗಳ ಸ್ಥಾಪನೆ, ಕೈಗಾರಿಕೆಗಳ ಸ್ಥಾಪನೆ ,ಅಣೆಕಟ್ಟುಗಳ ನಿರ್ಮಾಣ, ರಸ್ತೆಗಳ ಅಭಿವೃದ್ಧಿ, ಕಟ್ಟಡಗಳ ನಿರ್ಮಾಣ, ಕಲೆ ,ಸಾಹಿತ್ಯ ,ಸಂಸ್ಕೃತಿ ನಾಟ್ಯ, ಸಂಗೀತ ,ಕರಕುಶಲತೆ ಜನಪದ ಸಾಹಿತ್ಯ ಎಲ್ಲ ಕ್ಷೇತ್ರಗಳಲ್ಲೂ ಅಮೂಲ್ಯ ಕೊಡುಗೆ ನೀಡಿದ್ದಾರೆ . ಸಾಮಾಜಿಕವಾಗಿ ಶೈಕ್ಷಣಿಕವಾಗಿ ಆರ್ಥಿಕವಾಗಿ, ಧಾರ್ಮಿಕ ಸಮಾನತೆಯನ್ನು ತರಲು ಸರ್ವರಿಗೂ ಮೀಸಲಾತಿಯನ್ನು ನೀಡಿ ರಾಷ್ಟ್ರದ ಅಭ್ಯುದಯಕ್ಕೆ, ಭಾರತದ ಅಭಿವೃದ್ಧಿಗೆ ಸಹಕಾರಿಯಾದ ಮೊದಲಿಗರು . ನಾಲ್ವಡಿ ಕೃಷ್ಣರಾಜ ಒಡೆಯರ್ ಎಂದೆಂದಿಗೂ ಅಮರರು ಎಂದರು.

ಕೊಳ್ಳೇಗಾಲ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಕೊಂಗರಹಳ್ಳಿ ನಾಗರಾಜುರವರು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತ ಚಾಮರಾಜನಗರ ಸಾಹಿತ್ಯ ಪರಿಷತ್ತಿನ ಆಶ್ರಯದಲ್ಲಿ ನಡೆಯುತ್ತಿರುವ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಜಯಂತಿ ಕಾರ್ಯಕ್ರಮ ಉತ್ತಮ ಕಾರ್ಯಕ್ರಮವಾಗಿದೆ. ಕನ್ನಡ ಸಾಹಿತ್ಯ ಪರಿಷತ್ತನ್ನು ಸ್ಥಾಪನೆ ಮಾಡಿದ ಕೀರ್ತಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರಿಗೆ ಸಲ್ಲುತ್ತದೆ ಕನ್ನಡ ನಾಡು ನುಡಿ ಸಂಸ್ಕೃತಿ ಅಭಿವೃದ್ಧಿಗೆ ಪೂರ್ಣ ಸಹಕಾರ ನೀಡಿದ ನಾಲ್ವಡಿ ಕೃಷ್ಣರಾಜ ಒಡೆಯರ್ ಆಡಳಿತ ಅವರ ಪ್ರೋತ್ಸಾಹ ಸರ್ವರಿಗೂ ಮಾದರಿಯಾಗಿದೆ.

ಅಣೆಕಟ್ಟನ್ನು ನಿರ್ಮಾಣ ಮಾಡಿ ನೀರಾವರಿಯ ಮೂಲಕ ಲಕ್ಷಾಂತರ ರೈತರಿಗೆ ಅನುಕೂಲ ಮಾಡಿಕೊಟ್ಟ ಶ್ರೇಷ್ಠ ವ್ಯಕ್ತಿ. ಮೈಸೂರು ಪ್ರಾಂತ್ಯದ ಆರ್ಥಿಕ ಅಭಿವೃದ್ಧಿಗೆ ಮೈಸೂರು ಸಂಸ್ಥಾನದ ಕೊಡುಗೆ ಅಪಾರ ಎಂದರು.

ಕಾರ್ಯಕ್ರಮದಲ್ಲಿ ರವಿಚಂದ್ರಪ್ರಸಾದ್, ಬಿಕೆ ಆರಾಧ್ಯ, ನಾಗರಾಜು ಕೆಂಪನಪುರ ,ಸರಸ್ವತಿ, ಲಕ್ಷ್ಮೀ ನರಸಿಂಹ ,ಶಿವಲಿಂಗ ಮೂರ್ತಿ, ರವಿಚಂದ್ರ, ಜಯಪ್ರಕಾಶ್, ಮೋಹನ್ ಗೌಡರು, ಬಂಡಿಗೆರೆ ಸಿದ್ದೇಶ್, ಸುಮುಖ್ ಮುಂತಾದವರು ಇದ್ದರು.

# ಧರ್ಮಸ್ಥಳ ಯೋಜನೆಯಿಂದ ಪರಿಸರ ದಿನಾಚರಣೆ

**ಹುಳಿಯಾರು:** ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಹುಳಿಯಾರು ಹೋಬಳಿಯ ಕೆಂಕೆರೆ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆಯಲ್ಲಿ ಪರಿಸರ ಮಾಹಿತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಯೋಜನಾಧಿಕಾರಿ ರಾಮಚಂದ್ರ ಮಾತನಾಡಿ ತಂತ್ರಜ್ಞಾನದ ಪ್ರಭಾವದಿಂದಾಗಿ ಪೃಕೃತಿಯೊಂದಿಗಿನ ಮಕ್ಕಳ ಒಡನಾಟ ಇತ್ತೀಚೆಗೆ ಕಡಿಮೆಯಾಗುತ್ತಿದೆ. ಇಂದಿನ ಮಕ್ಕಳು ನಮ್ಮ ಸುತ್ತಮುತ್ತಲಿನ ಯಾವುದಾದರೂ ಕನಿಷ್ಟ ಐದು ಸಸ್ಯಗಳ ಹೆಸರು ಹೇಳದ ಸ್ಥಿತಿಯಲ್ಲಿದ್ದಾರೆ. ಪರಿಸರದೊದಿಗೆ ಪರಿಸರ ಸ್ನೇಹಿಯಾಗಿ ಬೆಳೆದು ದೊಡ್ಡವರಾಗಬೇಕಿದ್ದ ಮಕ್ಕಳು ತಂತ್ರಜ್ಞಾನದೊಂದಿಗೆ ಬೆಳೆಯುತ್ತಿದ್ದಾರೆ. ಹೀಗಾಗಿ, ಮಕ್ಕಳಲ್ಲಿ ಪರಿಸರ ಕಾಳಜಿ ಕ್ಷೀಣಿಸುತ್ತಿದೆ. ಪ್ರಕೃತಿ ರಕ್ಷಣೆ ದೃಷ್ಟಿಯಿಂದ ಮಕ್ಕಳಲ್ಲಿ ಪರಿಸರ ಪ್ರಜ್ಞೆ ಬೆಳೆಸಬೇಕಿದೆ ಎಂದರು.

ರಾಜ್ಯ ರೈತ ಸಂಘದ ಉಪಾಧ್ಯಕ್ಷ ಕೆಂಕೆರೆ ಸತೀಶ್ ಮಾತನಾಡಿ ವರ್ಷದಿಂದ ವರ್ಷಕ್ಕೆ ಅರಣ್ಯದ ವ್ಯಾಪ್ತಿ ಕಡಿಮೆಯಾಗುತ್ತಿರುವುದು ಮತ್ತು ಪರಿಸರದ ಮೇಲೆ ಉಂಟಾಗುತ್ತಿರುವ ಅನಾನುಕೂಲಗಳ ಬಗ್ಗೆ ಜಾಗೃತಿ ಮೂಡಿಸುವ ಕೆಲಸ ನಿರಂತರವಾಗಿ ಆಗಬೇಕಿದೆ. ತಾಪಮಾನದ ಏರಿಕೆಯ ಪರಿಣಾಮಗಳನ್ನು ತಡೆಯುವುದಕ್ಕಾಗಿ ಹಸಿರೀಕರಣ ಹೆಚ್ಚಿಸಬೇಕಿದೆ ಎಂದು ತಿಳಿಸಿದರು.

ಗ್ರಾಮ ಪಂಚಾಯತಿಯ ಪಿಡಿಓ ತಿಪ್ಪೇಸ್ವಾಮಿ ರವರು ಮಾತನ್ನಾಡಿ ಪ್ಲಾಸ್ಟಿಕ್ ಮುಕ್ತ ಪರಿಸರ ನಿರ್ಮಾಣ ನಮ್ಮೆಲ್ಲರ ಹೊಣೆ ಎಂದು ತಿಳಿಸಿದರು. ಕಾರ್ಯಕ್ರಮವನ್ನು ಗ್ರಾಮ ಪಂಚಾಯತಿ ಅಧ್ಯಕ್ಷೆ ಗಂಗಮ್ಮ ಉದ್ಘಾಟಿಸಿದರು. ಉಪನ್ಯಾಸಕ ಹೊನ್ನಪ್ಪ, ವಲಯದ ಮೇಲ್ವಿಚಾರಕ ಪರಮೇಶ್, ಕೃಷಿ ಮೇಲ್ವಿಚಾರಕ ಸಿದ್ದರಾಜು, ಸೇವಾ ಪ್ರತಿನಿಧಿ ಲೋಕೇಶ್, ಒಕ್ಕೂಟದ ಪದಾಧಿಕಾರಿಗಳು, ಶಾಲಾ ಶಿಕ್ಷಕರು, ಶಾಲಾ ಮಕ್ಕಳು ಉಪಸ್ಥಿತರಿದ್ದರು.



ಸಂಜೆ ಟಿಪ್ಸ್



## ನವಿ ಮುಂಬಯಿಯಲ್ಲಿ ಮ್ಯಾರಿಯಟ್ ಹೋಟೆಲ್ ಲೋಕಾರ್ಪಣೆ

ಎಂಆರ್ಜಿ ಗ್ರೂಪ್, ತನ್ನ ಗೋಲ್ಡ್‌ಫಿಂಚ್ ಹೋಟೆಲ್ಸ್ ಮತ್ತು ರೆಸಾರ್ಟ್ ಬ್ರಾಂಡ್‌ನಿಂದ ಹೆಸರುವಾಸಿಯಾಗಿರುವ- ಬೆಂಗಳೂರು ಮೂಲದ ಆತಿಥ್ಯ ಮತ್ತು ರಿಯಲ್ ಎಸ್ಟೇಟ್ ವಲಯದ ಪ್ರಭಾವಿ ಸಂಸ್ಥೆಯು ನವಿ ಮುಂಬಯಿಯ ಹೃದಯ ಭಾಗದಲ್ಲಿ ನಿರ್ಮಿಸಿರುವ ನವಿಮುಂಬಯಿ ಮ್ಯಾರಿಯಟ್ ಹೋಟೆಲ್ ಲೋಕಾರ್ಪಣೆಯನ್ನು ಹೆಮ್ಮೆಯಿಂದ ಘೋಷಿಸುತ್ತಿದೆ. ನಮ್ಮ ಹೊಸ ಯೋಜನೆಯಾದ ನವಿ ಮುಂಬಯಿ ಮ್ಯಾರಿಯಟ್ ಹೋಟೆಲ್ ಆರಂಭವನ್ನು ಘೋಷಿಸುತ್ತಿರುವುದು ಎಂಆರ್ಜಿ ಸಮೂಹದ ಅತ್ಯಂತ ಹೆಮ್ಮೆಯ ಕ್ಷಣವಾಗಿದೆ. ಮ್ಯಾರಿಯಟ್ ಹೋಟೆಲ್ಗಳ ಜೊತೆಗೆ ನಮ್ಮ ಗೌರವದ ಸಹಭಾಗಿತ್ವಕ್ಕೆ ಮತ್ತೊಂದು ಅಮೂಲ್ಯ ಸೇರ್ಪಡೆಯಾಗಿದೆ ಎಂದು ಕೆ.ಪ್ರಕಾಶ್ ಶೆಟ್ಟಿ, ಅಧ್ಯಕ್ಷರು, ಎಂಆರ್ಜಿ ಗ್ರೂಪ್ ಅವರು ಹೇಳಿದ್ದಾರೆ. ಮ್ಯಾರಿಯಟ್ ಇಂಟರ್ನ್ಯಾಶನಲ್ ಜತೆಗಿನ ಈ ಸಹಭಾಗಿತ್ವವು ಆತಿಥ್ಯ ಕ್ಷೇತ್ರದಲ್ಲಿ ಶ್ರೇಷ್ಠವಾದುದನ್ನು ನೀಡಬೇಕೆಂಬ ಪರಸ್ಪರರ ಬದ್ಧತೆಯನ್ನು ಪುನರುಚ್ಚರಿಸುವುದರ ಜತೆಗೆ, ಐಷಾರಾಮಿ ಮತ್ತು ನಾವೀನ್ಯತೆಯಲ್ಲಿ ಎಂಆರ್ಜಿ ಸಮೂಹದ ಸ್ಥಳೀಯ ಪರಿಣತಿಯನ್ನು ಮ್ಯಾರಿಯಟ್ನ ಜಾಗತಿಕ ಪ್ರತಿಷ್ಠೆ ಜತೆ ವಿಲೀನಗೊಳಿಸುತ್ತದೆ. ನಾವು ಒಟ್ಟಾಗಿ ಸೌಲಭ್ಯಗಳ ಸಮ್ಮಿಲನ, ಆರಾಮದಾಯಕ ಅನುಭವ, ಅನುಕೂಲತೆಗಳ ಮೂಲಕ ನವಿ ಮುಂಬಯಿಯಲ್ಲಿ ಆತಿಥ್ಯ ಕ್ಷೇತ್ರದ ಮರುವ್ಯಾಖ್ಯಾನಕ್ಕೆ ಸನ್ನದ್ಧರಾಗಿದ್ದೇವೆ. ನಮ್ಮ ಅತಿಥಿಗಳು ಬ್ಯುಸಿನೆಸ್ ಉದ್ದೇಶಕ್ಕೇ ಬಂದಿರಲಿ ಅಥವಾ ವಿಹಾರಕ್ಕಾಗಿ ಬಂದಿರಲಿ, ಅವರಿಗೆ ಅವಿಸ್ಮರಣೀಯ ಅನುಭವ ನೀಡಲು ನಾವು ಬದ್ಧರಾಗಿದ್ದೇವೆ. ಜಗತ್ತಿನ ವಿವಿಧೆಡೆಗಳಿಂದ ಆಗಮಿಸುವ ಪ್ರಯಾಣಿಕರನ್ನು ಸ್ವಾಗತಿಸಲು ಸಜ್ಜಾಗಿದ್ದೇವೆ ಎಂದರು.

## ವೆಜ್ ಬಿರಿಯಾನಿ

ಪಾಕ ಶಾಲೆ



### ಮಾಡುವ ವಿಧಾನ

ಒಂದು ಚಮಚ ತುಪ್ಪ, 1 ಲವಂಗದ ಎಲೆ, ಕಾಲು ಚಮಚ ಜೀರಿಗೆ, ಒಂದು ಇಂಚಿನಷ್ಟು ದಾಲ್ಚಿನ್ನಿ, 1 ನಕ್ಷತ್ರ ಸೋಂಪು, ಅರ್ಧ ಚಮಚ ಶುಂಠಿ-ಬೆಳ್ಳುಳ್ಳಿ ಪೇಸ್ಟ್, ಸಣ್ಣಗೆ ಹೆಚ್ಚಿದ ಒಂದು ಈರುಳ್ಳಿ, ಹೆಚ್ಚಿದ ಅರ್ಧ ಕ್ಯಾರೆಟ್, ಒಂದು ಕಪ್ ನಷ್ಟು ಹೆಚ್ಚಿದ ಗೋಬಿ, ಹೆಚ್ಚಿದ ಕಾಲು ಭಾಗ ಆಲೂಗಡ್ಡೆ, ಹೆಚ್ಚಿದ ಅರ್ಧ ಕ್ಯಾಪ್ಸಿಕಂ, ಹೆಚ್ಚಿದ 3 ಬೀನ್ಸ್, ಕಾಲು ಕಪ್ ಮೊಸರು, ಅರ್ಧ ಚಮಚ ಅಚ್ಚಖಾರದ ಪುಡಿ, 1 ಚಮಚ ಬಿರಿಯಾನಿ ಮಸಾಲಾ ಪುಡಿ, ಹೆಚ್ಚಿದ ಪುದೀನಾ, ಕೊತ್ತಂಬರಿ ಸೊಪ್ಪು, ರುಚಿಗೆ ತಕ್ಕಷ್ಟು ಉಪ್ಪು ಮತ್ತು ಬೇಯಿಸಿಟ್ಟ 2 ಕಪ್ ಬಾಸುಮತಿ ಅನ್ನ.

### ಬೇಕಾಗಿರುವ ಪದಾರ್ಥ

**ಒಂದು ಚಮಚ ತುಪ್ಪ, 1 ಲವಂಗದ ಎಲೆ, ಕಾಲು ಚಮಚ ಜೀರಿಗೆ, ಒಂದು ಇಂಚಿನಷ್ಟು ದಾಲ್ಚಿನ್ನಿ, 1 ನಕ್ಷತ್ರ ಸೋಂಪು, ಅರ್ಧ ಚಮಚ ಶುಂಠಿ-ಬೆಳ್ಳುಳ್ಳಿ ಪೇಸ್ಟ್, ಸಣ್ಣಗೆ ಹೆಚ್ಚಿದ ಒಂದು ಈರುಳ್ಳಿ, ಹೆಚ್ಚಿದ ಅರ್ಧ ಕ್ಯಾರೆಟ್, ಒಂದು ಕಪ್ ನಷ್ಟು ಹೆಚ್ಚಿದ ಗೋಬಿ, ಹೆಚ್ಚಿದ ಕಾಲು ಭಾಗ ಆಲೂಗಡ್ಡೆ, ಹೆಚ್ಚಿದ ಅರ್ಧ ಕ್ಯಾಪ್ಸಿಕಂ, ಹೆಚ್ಚಿದ 3 ಬೀನ್ಸ್, ಕಾಲು ಕಪ್ ಮೊಸರು, ಅರ್ಧ ಚಮಚ ಅಚ್ಚಖಾರದ ಪುಡಿ, 1 ಚಮಚ ಬಿರಿಯಾನಿ ಮಸಾಲಾ ಪುಡಿ, ಹೆಚ್ಚಿದ ಪುದೀನಾ, ಕೊತ್ತಂಬರಿ ಸೊಪ್ಪು, ರುಚಿಗೆ ತಕ್ಕಷ್ಟು ಉಪ್ಪು ಮತ್ತು ಬೇಯಿಸಿಟ್ಟ 2 ಕಪ್ ಬಾಸುಮತಿ ಅನ್ನ.**

## ಅಯೋಧ್ಯೆಯ ಜನರಿಗೆ ನಾಚಿಕೆಯಾಗ್ಬೇಕು



ಲೋಕಸಭೆ ಚುನಾವಣೆಗಳ ಫಲಿತಾಂಶ ಹೊರಬಿದ್ದು ದಿನಗಳಾಗುತ್ತಾ ಬಂದರೂ ಬಿಜೆಪಿ ಜಸ್ಟ್ ಪಾಸ್ ಆಗಿರುವುದು ಬಿಜೆಪಿ ವಲಯಕ್ಕೆ ದೊಡ್ಡ ಆಘಾತತಂದಿದೆ. ಅದರಲ್ಲೂ ಬಿಜೆಪಿ ಪಕ್ಷ ಅಯೋಧ್ಯೆ ಮತ್ತು ಹೊಸದಾಗಿ ನಿರ್ಮಿಸಲಾದ ರಾಮಮಂದಿರವನ್ನು ಹೊಂದಿರುವ ಫೈಜಾಬಾದ್ನಲ್ಲಿ ಹೀನಾಯ ಸೋಲು ಕಂಡಿರುವುದು ಬಿಜೆಪಿಗೆ ನುಂಗಲಾರದ ತುತ್ತಾಗಿದೆ.ಇನ್ನೂ ಅಯೋಧ್ಯೆಯಲ್ಲಿ ಸೋಲು ಕಂಡಿರುವುದಕ್ಕೆ ಖ್ಯಾತ ಗಾಯಕ ಸೋನು ನಿಗಮ್ ಅವರ ಆಕ್ರೋಶ ಹೊರಹಾಕಿರುವ ಪೋಸ್ಟ್ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. ಸೋನು ನಿಗಮ್ ಪೋಸ್ಟ್ನಲ್ಲಿ ಹೀಗಿದೆ.

ಅಯೋಧ್ಯೆ ಮತದಾರರು ತಮ್ಮ ಶ್ರಮದ ಹೊರತಾಗಿಯೂ ಬಿಜೆಪಿಯನ್ನು ಆಯ್ಕೆ ಮಾಡಲಿಲ್ಲ ಎಂದು ಸೋನು ನಿಗಮ್ ಅವರು ಎಕ್ಸ್‌ನಲ್ಲಿ ಬರೆದಿದ್ದಾರೆ, ಇಡೀ ಅಯೋಧ್ಯೆಯನ್ನು ಸುಂದರಗೊಳಿಸಿದ ಸರ್ಕಾರ, ಹೊಸ ವಿಮಾನ ನಿಲ್ದಾಣ, ರೈಲು ನಿಲ್ದಾಣವನ್ನು ನೀಡಿತು, 500 ವರ್ಷಗಳ ನಂತರ ರಾಮ ಮಂದಿರವನ್ನು ನಿರ್ಮಿಸಿತು, ಸಂಪೂರ್ಣ ದೇವಾಲಯದ ಆರ್ಥಿಕತೆಯನ್ನು ಸೃಷ್ಟಿಸಿತು, ಆ ಪಕ್ಷವು ಅಯೋಧ್ಯೆ ಸ್ಥಾನಕ್ಕಾಗಿ ಹೋರಾಟ ನಡೆಸಬೇಕಾಗಿದೆ. ಅಯೋಧ್ಯೆಯ ಜನರು ನಾಚಿಕೆಪಡಬೇಕು ಎಂದು ಬರೆದುಕೊಂಡಿರುವ ಪೋಸ್ಟ್ ವೈರಲ್ ಆಗಿದೆ. ನಿಜವಾದ ಸತ್ಯ: ಆದಾಗ್ಯೂ, ನಿಜವಾದ ಸತ್ಯ ಏನೆಂದರೆ ಈ ಪೋಸ್ಟ್ ಮಾಡಿರುವುದು ಸೋನು ನಿಗಮ್ ಅವರಲ್ಲ ಎಂದು ತಿಳಿದುಬಂದಿದೆ. ಇದನ್ನು ಸ್ಪಷ್ಟಪಡಿಸಿದ ಸೋನು ಸೂದು ಅವರು, ಈ ರಿತಿಯ ಘಟನಾವಳಿಗಳಿಂದಲೇ ನಾನು ಏಳು ವರ್ಷಗಳ ಹಿಂದೆ ಟ್ವಿಟರ್ ಖಾತೆಯಿಂದ ಹೊರ ಬಂದಿರುವುದು. ಸಂವೇದನಾಶೀಲ ರಾಜಕೀಯ ಟೀಕೆಗಳನ್ನು ಮಾಡುವುದರಲ್ಲಿ ನನಗೆ ನಂಬಿಕೆಯಿಲ್ಲ ಮತ್ತು ನಾನು ನನ್ನ ಕೆಲಸದ ಮೇಲೆ ಮಾತ್ರ ಗಮನಹರಿಸುತ್ತೇನೆ. ಆದರೆ ಈ ಘಟನೆಯು ನನಗೆ ಮಾತ್ರವಲ್ಲ, ನನ್ನ ಕುಟುಂಬದ ಸುರಕ್ಷತೆಗೂ ಆತಂಕಕಾರಿಯಾಗಿದೆ, ಎಂದು ಅವರು ಹೇಳಿದರು.



## ದೇಹದಲ್ಲಿ ಸೆಲೆನಿಯಂನ ಕೊರತೆಯೇ



ಹೆಲ್ತ್ ಟಿಪ್ಸ್

ದೇಹ ಸರಿಯಾಗಿ ಕಾರ್ಯ ನಿರ್ವಹಿಸಲು ಅನೇಕ ಪೋಷಕಾಂಶಗಳು ಬೇಕಾಗುತ್ತದೆ. ಅದರಲ್ಲಿ ಸೆಲೆನಿಯಂ ಕೂಡ ಒಂದು. ಇದು ದೇಹವನ್ನು ಕ್ಯಾನ್ಸರ್, ಸೋಂಕು ಮತ್ತು ಫ್ರೀ ರಾಡಿಕಲ್ಸ್ ಗಳಿಂದ ರಕ್ಷಿಸುತ್ತದೆ. ಇದು ಡಿಎನ್ ಎಯನ್ನು ಸರಿಪಡಿಸುತ್ತದೆ. ಹಾಗಾಗಿ ಸೆಲೆನಿಯಂ ಸಮೃದ್ಧವಾಗಿರುವ ಆಹಾರಗಳ ಬಗ್ಗೆ ತಿಳಿದುಕೊಳ್ಳಿ.

**ಚಿಕನ್:** ಇದರಲ್ಲಿ ಸಾಕಷ್ಟು ಪ್ರಮಾಣದಲ್ಲಿ ಸೆಲೆನಿಯಂ ಕಂಡುಬರುತ್ತದೆ. ಹಾಗಾಗಿ ನಿಮ್ಮ ಅಡುಗೆಯಲ್ಲಿ ಚಿಕನ್ ಅನ್ನು ಸೇರಿಸಿಕೊಳ್ಳಿ. ಇದು ದೈನಂದಿನ ಅಗತ್ಯವನ್ನು ಪೂರೈಸಲು ಸಹಾಯ ಮಾಡುತ್ತದೆ.

**ಮೊಟ್ಟೆ:** ಮೊಟ್ಟೆಗಳನ್ನು ಸೇವಿಸುವುದರಿಂದ ಕೂಡ ದೇಹಕ್ಕೆ ಸೆಲೆನಿಯಂ ಸಿಗುತ್ತದೆ. ಹಾಗಾಗಿ ದಿನಕ್ಕೆ 2 ಮೊಟ್ಟೆಗಳನ್ನು ಸೇವಿಸಿ.

**ಚೀಸ್:** ಇದರಲ್ಲಿ ಸೆಲೆನಿಯಂ ಸಮೃದ್ಧವಾಗಿದೆ. ಇದು ನಿಮ್ಮನ್ನು ಹೃದಯ ಸಂಬಂಧಿ ಕಾಯಿಲೆಗಳಿಂದ ಕಾಪಾಡುತ್ತದೆ. ಇದನ್ನು ಸೇವಿಸುವುದರಿಂದ ಕೂಡ ಸೆಲೆನಿಯಂ ಕೊರತೆಯನ್ನು ತಪ್ಪಿಸಬಹುದು.

**ಸೊಪ್ಪು:** ಹಸಿರು ಸೊಪ್ಪುಗಳನ್ನು ತಿನ್ನುವ ಮೂಲಕ ದೇಹದಲ್ಲಿ ಸೆಲೆನಿಯಂ ಅಗತ್ಯವನ್ನು ಪೂರೈಸಬಹುದು. ಹಸಿರು ಸೊಪ್ಪಿನಲ್ಲಿ ಸೆಲೆನಿಯಂ ಪ್ರಮಾಣ ಹೆಚ್ಚಾಗಿರುತ್ತದೆ. ಹಾಗಾಗಿ ನಿಮ್ಮ ಆಹಾರದಲ್ಲಿ ಪ್ರತಿದಿನ ಹಸಿರು ಸೊಪ್ಪನ್ನು ಸೇರಿಸಿಕೊಳ್ಳಿ. ಒಟ್ಟಾರೆ ನಿಮ್ಮ ದೇಹ ಆರೋಗ್ಯವಾಗಿರಲು ಸೆಲೆನಿಯಂನ ಕೊರತೆಯನ್ನು ನೀಗಿಸಿಕೊಳ್ಳಿ. ಅದಕ್ಕಾಗಿ ತಪ್ಪದೇ ಈ ಆಹಾರಗಳನ್ನು ಸೇವಿಸಿ.

## ಬೆಂಗಳೂರಿನಲ್ಲಿ ಯು.ಎಸ್. ಪೋಲೋ ಅಸೋಸಿಯೇಷನ್ ಕಿಡ್ಸ್ ಜೂನಿಯರ್ಸ್ ಫ್ಯಾಷನ್ ವೀಕ್ ಎಸ್.ಎಸ್ 24 ಪ್ರಸ್ತುತ





ಯು.ಎಸ್. ಪೋಲೋ ಅಸೋಸಿಯೇಷನ್ ಕಿಡ್ಸ್ ಪ್ರಸ್ತುತಪಡಿಸುವ ಜೂನಿಯರ್ಸ್ ಫ್ಯಾಷನ್ ವೀಕ್(ಜೆ.ಎಫ್.ಡಬ್ಲ್ಯೂ) ಬೆಂಗಳೂರಿನಲ್ಲಿ ಉಜ್ವಲ ಜೀವನಶೈಲಿ ತಂದಿತ್ತು. ಎರಡು ದಿನಗಳ ಈ ಕಾರ್ಯಕ್ರಮ ತನ್ನ 85ನೇ ಆವೃತ್ತಿಯಾಗಿತ್ತು. ಮಾರಿಯಟ್ ಹೋಟೆಲ್ ವೈಟ್ ಫೀಲ್ಡ್ ಯುವ ಫ್ಯಾಷನ್ ಉತ್ಸಾಹಿಗಳಿಗೆ ಅವರ ಪ್ರತಿಭೆ ಮತ್ತು ಸ್ಟೈಲ್ ಪ್ರದರ್ಶಿಸಲು ವೇದಿಕೆ ಒದಗಿಸಿತು. ಝೂಪ್ ಬೈ ಟೈಟಾನ್ ಅಕ್ಸೆಸರಿ ಪಾಲುದಾರರಾಗಿದ್ದು ಈ ಕಾರ್ಯಕ್ರಮವು ಹಿಂದೆಂದೂ ಕಾಣದ ಸ್ಟೈಲ್ ಮತ್ತು ಸೊಗಸು ಹೊಂದಿತ್ತು.

''ನಾವು ಯು.ಎಸ್. ಪೋಲೋ ಅಸೋಸಿಯೇಷನ್ ಕಿಡ್ಸ್ ಜೂನಿಯರ್ಸ್ ಫ್ಯಾಷನ್ ವೀಕ್ ಪ್ರಸ್ತುತಪಡಿಸುವ ಪಾಲುದಾರರಾಗಲು ಬಹಳ ಉತ್ಸುಕರಾಗಿದ್ದೇವೆ. ಈ ಕಾರ್ಯಕ್ರಮವು ಯುವ ಫ್ಯಾಷನಿಸ್ತಾಗಳಿಗೆ ಅವರ ಸ್ಟೈಲ್ ಮತ್ತು ವಿಶ್ವಾಸವನ್ನು ಪ್ರದರ್ಶಿಸಲು ಅದ್ಭುತ ವೇದಿಕೆಯಾಗಿದೆ. ನಾವು ಈ ಪ್ರಯಾಣದ ಭಾಗವಾಗಲು, ಉಜ್ವಲ ಶಕ್ತಿ ಮತ್ತು ನಮ್ಮ ಹೊಚ್ಚಹೊಸ ಸಂಗ್ರಹಗಳಿಗೆ ಸ್ಫೂರ್ತಿ ತುಂಬುವ ಪೋಲೋ ಕ್ರೀಡೆಯನ್ನು ಸಂಭ್ರಮಿಸಲು ಹೆಮ್ಮೆ ಪಡುತ್ತೇವೆ'' ಎಂದು ಯು.ಎಸ್. ಪೋಲೋ ಅಸೋಸಿಯೇಷನ್ ಸಿಇಒ ಶ್ರೀ ಅಮಿತಾಭ್ ಸುರಿ ಹೇಳಿದರು.

ಯು.ಎಸ್. ಪೋಲೋ ಅಸೋಸಿಯೇಷನ್ ಕಿಡ್ಸ್ ಕ್ರೀಡಾ ಪರಂಪರೆ, ಝೂಪ್ ಬೈ ಟೈಟಾನ್ ಮೋಡಿ ಮತ್ತು ಎಂಪೋರಿಯೊ ಅರ್ಮಾನಿ ರನ್ವೇ ಸಂಚಲನ ಸೃಷ್ಟಿಸಿತು. ಗೆಸ್ ಕಿಡ್ಸ್, ಸ್ಟೆಲ್ಲಾ ಮೆಕ್ ಕರ್ಟ್ನೀ ಮತ್ತು ಸೋನಿಯಾ ರೈಕೀಲ್ ಸಂಭ್ರಮಕ್ಕೆ ಮೆರುಗು ತಂದರು. ಜೂನಿಯರ್ಸ್ ಮಾಡೆಲ್ ಮ್ಯಾನೇಜ್ಮೆಂಟ್ ಜೊತೆಯಲ್ಲಿ ಸಹಯೋಗ ಹೊಂದಿದ ಜೆ.ಎಫ್.ಡಬ್ಲ್ಯೂ ಫ್ಯಾಷನ್ ಸಂಭ್ರಮಿಸಿತು ಮತ್ತು ಎಜುಟೈನ್ಮೆಂಟ್ ಪ್ಲಾಟ್ ಫಾರಂ ಒದಗಿಸಿತು. ಕಾರ್ಯಾಗಾರಗಳು ಮತ್ತು ಗ್ರೂಮಿಂಗ್ ಕಾರ್ಯಕ್ರಮಗಳು ಕಿರಿಯರಲ್ಲಿ ವಿಶ್ವಾಸ ಹಾಗೂ ಭವಿಷ್ಯದ ಮಾಡೆಲಿಂಗ್ ಅವಕಾಶಗಳಿಗೆ ಕೌಶಲ್ಯಗಳನ್ನು ತಂದುಕೊಟ್ಟವು. ''ಬೆಂಗಳೂರಿನಲ್ಲಿ ಜೂನಿಯರ್ಸ್ ಫ್ಯಾಷನ್ ವೀಕ್ ಯಶಸ್ಸು ನಮಗೆ ಬಹಳ ಸಂತೋಷ ತಂದಿದೆ. ಈ ಯುವ ಪ್ರತಿಭೆಗಳು ವಿಶ್ವಾಸ ಮತ್ತು ಸ್ಟೈಲ್ ನಿಂದ ಬೆಳಗುತ್ತಿರುವುದನ್ನು ಕಾಣುವುದು ನಿಜಕ್ಕೂ ಅದ್ಭುತವಾಗಿದೆ. ಈ ಕಾರ್ಯಕ್ರಮವು ಫ್ಯಾಷನ್ ಅನ್ನು ಸಂಭ್ರಮಿಸುವುದೇ ಅಲ್ಲದೆ ನಮ್ಮ ಕಿರಿಯರಿಗೆ ಮುಂದಿನ ವರ್ಷಗಳಲ್ಲಿ ಅನುಕೂಲ ಕಲ್ಪಿಸುವ ಕೌಶಲ್ಯಗಳು ಮತ್ತು ಅನುಭವಗಳೊಂದಿಗೆ ಸನ್ನದ್ಧಗೊಳಿಸುತ್ತಿವೆ'' ಎಂದು ಜೂನಿಯರ್ಸ್ ಫ್ಯಾಷನ್ ವೀಕ್ ಸಂಸ್ಥಾಪಕ ವಿನ್ ಶರ್ಮಾ ಹೇಳಿದರು. ಮೊದಲ ದಿನವು ಸಂವಹನ ಆಧರಿತ ಕಾರ್ಯಾಗಾರದೊಂದಿಗೆ ಪ್ರಾರಂಭವಾಗಿದ್ದು ಜೂನಿಯರ್ ಮಾಡೆಲ್ ಗಳು ಮತ್ತು ಅವರ ಪೋಷಕರ ಫೋಟೋ ಶೂಟ್ ಸೆಷನ್ ಇತ್ತು. ನಂತೆ ಮಾಡೆಲಿಂಗ್ ಇದ್ದು ಮಕ್ಕಳು ವಿಶ್ವಾಸದಿಂದ ಪ್ರದರ್ಶನ ಮಾಡಿದರು. ರುಚಿಕರ ಭೋಜನ ಎಲ್ಲರ ಹಸಿವು ತಣಿಸಿತು.

ಎರಡನೆಯ ದಿನ ಪ್ರೊಫೆಷನಲ್ ಸ್ಟೈಲಿಂಗ್ ಮತ್ತು ಮೇಕಪ್ ಹಾಗೂ ಅಂತಿಮ ರಿಹರ್ಸಲ್ ಗಳಿದ್ದವು. ಈ ಅದ್ದೂರಿ ಕಾರ್ಯಕ್ರಮದಲ್ಲಿ ಕಿರಿಯರು ಕೊರಿಯೋಗ್ರಫಿಯಲ್ಲಿ ಪ್ರಭುತ್ವ ಸಾಧಿಸಿ ರನ್ವೇಯಲ್ಲಿ ವಿಶ್ವಾಸದಿಂದ ನಡೆದು ಎಲ್ಲರ ಪ್ರಶಂಸೆ ಪಡೆದರು. ಮತ್ತೆ ರುಚಿಕರ ಭೋಜನ ಎಲ್ಲರನ್ನೂ ಖುಷಿಪಡಿಸಿತು.

## ಆಯಿಲ್ ಸ್ಕಿನ್‌ಗೆ ಬೆಸ್ಟ್ ಮನೆಮದ್ದು

ಬ್ಯೂಟಿ ಟಿಪ್ಸ್



ಎಣ್ಣೆಯುಕ್ತ ಚರ್ಮ ಹೊಂದಿರುವವರಿಗೆ ಯಾವುದೇ ರೀತಿಯ ಕ್ರೀಮ್ ಬಳಸಿದರೂ ಅದರಿಂದಾಗುವ ಕಿರಿಕಿರಿ ಮಾತ್ರ ತಪ್ಪಿದ್ದಲ್ಲ. ಎಣ್ಣೆಯುಕ್ತ ಚರ್ಮದವರಿಗೆ ಮೊಡವೆಗಳು ಬೆಂಬಿಡದಂತೆ ಕಾಡುತ್ತವೆ. ಆದರೆ ನೈಸರ್ಗಿಕವಾಗಿ ದೊರೆಯುವ ಮನೆಮದ್ದುಗಳನ್ನು ಅನುಸರಿಸಿದರೆ ಅದರಿಂದ ಪರಿಹಾರವನ್ನು ಪಡೆದುಕೊಳ್ಳಬಹುದು.

**ಆಲೊವೆರಾ:** ಪ್ರತಿ ದಿನ ರಾತ್ರಿ ಆಲೂವೆರಾ ಜೆಲ್ ಅನ್ನು ಮುಖಕ್ಕೆ ಹಚ್ಚಿ ಬೆಳಿಗ್ಗೆ ಬೆಚ್ಚಗಿನ ನೀರಿನಲ್ಲಿ ತೊಳೆದುಕೊಳ್ಳುವುದರಿಂದ ತ್ವಚೆಯಲ್ಲಿನ ಜಿಡ್ಡಿನ ಅಂಶವನ್ನು ಹೀರಿಕೊಂಡು ತ್ವಚೆಗೆ ಹೊಳಪನ್ನು ನೀಡುತ್ತದೆ.

**ಟೊಮ್ಯಾಟೊ:** ಚೆನ್ನಾಗಿ ಹಣ್ಣಾದ ಟೊಮ್ಯಾಟೊದ ರಸ ತೆಗೆದು ಮುಖಕ್ಕೆ ಲೇಪಿಸುವುದರಿಂದ ಜಿಡ್ಡಿನಂಶವನ್ನು ಹೀರಿಕೊಂಡು, ತ್ವಚೆಯ ಮೇಲಾಗುವ ಸುಕ್ಕುಗಳನ್ನು ಕಡಿಮೆ ಮಾಡುತ್ತದೆ. **ನಿಂಬೆ ಹಣ್ಣಿನ ರಸ :** ಇದರಲ್ಲಿ ಸಿಟ್ರಿಕ್ ಆಯಸಿಡ್ ಹೇರಳವಾಗಿರುವುದರಿಂದ ತ್ವಚೆಯ ಆಳಕ್ಕಿಳಿದು, ಡೆಡ್ ಸೆಲ್ ಗಳನ್ನು ಹೊರಹಾಕಿ, ತ್ವಚೆಗೆ ಹೊಸ ಮೆರುಗನ್ನು ನೀಡುತ್ತದೆ.



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ರಾಜಕೀಯ ವ್ಯಕ್ತಿಗಳಿಂದ ಅನುಕೂಲ, ಅವಮಾನ, ನಿಂದನೆ, ಆತ್ಮಗೌರವಕ್ಕೆ ಧಕ್ಕೆ, ಸ್ನೆಹಿತರಿಂದ ದೂರ

**ವೃಷಭ:** ಕುಟುಂಬದವರೊಂದಿಗೆ ಮನಸ್ತಾಪ, ಮಾನಸಿಕ ವೇದನೆ, ಆರೋಗ್ಯದಲ್ಲಿ ವ್ಯತ್ಯಾಸ, ಸ್ಥಿರಾಸ್ತಿ ನಷ್ಟವಾಗುವ ಆತಂಕ

**ಮಿಥುನ:** ಅನಿರೀಕ್ಷಿತ ಪ್ರಯಾಣ, ಪ್ರೀತಿ ಪ್ರೇಮದ ವಿಷಯಗಳ ಪ್ರಸ್ತಾಪ, ಪ್ರಯಾಣದಲ್ಲಿ ಅನಾನುಕೂಲ, ಮಕ್ಕಳ ಆರೋಗ್ಯದಲ್ಲಿ ವ್ಯತ್ಯಾಸ

**ಕಟಕ:** ಆರ್ಥಿಕವಾಗಿ ಮೋಸ, ಭೂಮಿ ವಾಹನ ಖರೀದಿಯಲ್ಲಿ ಸಮಸ್ಯೆ, ಸಹೋದರಿಯ ಜೀವನದಲ್ಲಿ ಏರುಪೇರು, ಸ್ನೇಹಿತರ ನಡುವೆ ಸಮಸ್ಯೆ

**ಸಿಂಹ:** ಉದ್ಯೋಗದಲ್ಲಿ ಸಮಸ್ಯೆ, ಗೌರವಕ್ಕೆ ದಕ್ಕೆ, ಮಕ್ಕಳ ನಡವಳಿಕೆಯಿಂದ ಬೇಸರ, ಪ್ರೀತಿ ಪ್ರೇಮದ ವಿಷಯಗಳಿಂದ ಚಿಂತೆ

**ಕನ್ಯಾ:** ಸರ್ಕಾರಿ ಅಧಿಕಾರಿಗಳಿಂದ ಅನುಕೂಲ, ಸಂಗಾತಿ ಆರೋಗ್ಯದಲ್ಲಿ ವ್ಯತ್ಯಾಸ, ನಿದ್ರಾಭಂಗ, ಕೆಟ್ಟ ಕನಸುಗಳು, ಪತ್ರ ವ್ಯವಹಾರದಲ್ಲಿ ನಷ್ಟ ಮತ್ತು ಸಂಕಷ್ಟ

**ತುಲಾ:** ಮಿತ್ರರು ಶತ್ರುಗಳಾಗಿ ಪರಿವರ್ತನೆ, ಆತ್ಮಗೌರವಕ್ಕೆ ಚ್ಯುತಿ, ಉತ್ತಮ ಅವಕಾಶಗಳು ಪ್ರಾಪ್ತಿ

**ವೃಶ್ಚಿಕ:** ದುರಾಲೋಚನೆಗಳು ಹೆಚ್ಚು, ಮೋಸ ಮತ್ತು ನಷ್ಟ ಅನುಭವಿಸುವಿರಿ, ಉದ್ಯೋಗ ಸ್ಥಳದಲ್ಲಿ ಸಮಸ್ಯೆ

**ಧನಸ್ಸು:** ಸಾಲದ ಸಹಾಯ, ಮಾನಸಿಕ ವೇದನೆ, ದೇವತಾ ಕಾರ್ಯಗಳಲ್ಲಿ ನಿರಾಸಕ್ತಿ, ಕುಲದೇವತಾ ನಿಂದನೆ

**ಮಕರ:** ಮಕ್ಕಳ ಆರೋಗ್ಯದಲ್ಲಿ ವ್ಯತ್ಯಾಸ, ಆರ್ಥಿಕ ಸಮಸ್ಯೆಗಳು ಹೆಚ್ಚು, ಆತ್ಮೀಯರು ಪ್ರೀತಿಪಾತ್ರರು ದೂರ, ಭಾವನೆಗಳಿಗೆ ಕಲ್ಪನೆಗಳಿಗೆ ಪೆಟ್ಟು

**ಕುಂಭ:** ಕುಟುಂಬದ ಗೌರವಕ್ಕೆ ಧಕ್ಕೆ, ದಾಂಪತ್ಯದಲ್ಲಿ ಸಮಸ್ಯೆ, ಭವಿಷ್ಯದ ಚಿಂತೆಗಳು ಮತ್ತು ಆತಂಕ,

**ಮೀನ:** ಸಂಕಷ್ಟಕ್ಕೆ ಸಿಲುಕುವ ಸನ್ನಿವೇಶ, ಮಕ್ಕಳು ಪೆಟ್ಟು ಮಾಡಿಕೊಳ್ಳುವರು, ಆರೋಗ್ಯದಲ್ಲಿ ಏರುಪೇರು

## ವಿಶ್ವ ಆಹಾರ ಸುರಕ್ಷತಾ ದಿನ

ವಿಶ್ವ ಆಹಾರ ಸುರಕ್ಷತಾ ದಿನದಂದು ವಾರ್ಷಿಕವಾಗಿ ಜೂನ್ 7 ರಂದು ಆಚರಿಸಲಾಗುತ್ತದೆ, ನಾವು ನಮ್ಮ ಆಹಾರವನ್ನು ಎಲ್ಲಾ ವೆಚ್ಚದಲ್ಲಿಯೂ ರಕ್ಷಿಸುತ್ತಿದ್ದೇವೆ. ಆಹಾರ ಸರಪಳಿಯ ಎಲ್ಲಾ ಹಂತಗಳಲ್ಲಿ ಆಹಾರ ಶಿಷ್ಟಾಚಾರ ಮತ್ತು ಸುರಕ್ಷತೆಯ ಮಹತ್ವದ ಬಗ್ಗೆ ಜಾಗೃತಿ ಮೂಡಿಸಲು ವಿಶ್ವಸಂಸ್ಥೆಯು ಈ ದಿನವನ್ನು ಸ್ಥಾಪಿಸಿದೆ. ನಮ್ಮ ಆಹಾರವು ನಮ್ಮ ಅಂಗಡಿಗಳು, ರೆಸ್ಟೋರೆಂಟ್ಗಳು ಮತ್ತು ನಮ್ಮ ಬಾಯಿಗೆ ತಲುಪುವ ಮೊದಲು, ಅವರು ಕೊಯ್ಲು, ಸಂಸ್ಕರಣೆ, ಸಂಗ್ರಹಣೆ, ವಿತರಣೆ ಮತ್ತು ತಯಾರಿಕೆಯಂತಹ ಪ್ರಕ್ರಿಯೆಗಳನ್ನು ನಿರ್ವಹಿಸುವ ಜನರಿಂದ ನಿರ್ವಹಿಸಲ್ಪಡುವ ವಿತರಣೆಯ ದೀರ್ಘ ಸರಪಳಿಯ ಮೂಲಕ ಹೋಗುತ್ತಾರೆ. ಅದಕ್ಕಾಗಿಯೇ ಈ ರಜಾದಿನವು ಮುಖ್ಯವಾಗಿದೆ ಏಕೆಂದರೆ ಆಹಾರ ಸೇವನೆಯ ದೀರ್ಘ ಸರಪಳಿಯಲ್ಲಿ ಆಹಾರ ಮಾಲಿನ್ಯದ ಹಲವಾರು ಸಾಧ್ಯತೆಗಳಿವೆ. ಆಹಾರ ವಿಷವು ನೀವು ಊಹಿಸುವುದಕ್ಕಿಂತ ಹೆಚ್ಚು ಸಾಮಾನ್ಯವಾದ ಸ್ಥಿತಿಯಾಗಿದೆ, ಅಂದಾಜು 600 ಮಿಲಿಯನ್ ಆಹಾರದಿಂದ ಹರಡುವ ರೋಗಗಳು ವಾರ್ಷಿಕವಾಗಿ ದಾಖಲಾಗುತ್ತವೆ. ಆದ್ದರಿಂದ, ಆಹಾರ ಸುರಕ್ಷತೆಯು ಬಹಳ ಮುಖ್ಯವಾದ ಪರಿಕಲ್ಪನೆಯಾಗಿದೆ, ಏಕೆಂದರೆ ಅದು ನಮ್ಮ ಆಹಾರವನ್ನು ನಮಗೆ ತಲುಪುವ ಮೊದಲು ಅತ್ಯಂತ ಎಚ್ಚರಿಕೆಯಿಂದ ನಿರ್ವಹಿಸಲಾಗಿದೆ ಎಂದು ಖಚಿತಪಡಿಸಿಕೊಳ್ಳಲು ಪ್ರಯತ್ನಿಸುತ್ತದೆ. ಸುರಕ್ಷಿತ ಆಹಾರವು ನಮ್ಮ ಒಟ್ಟಾರೆ ಆರೋಗ್ಯವನ್ನು ನಿರ್ಧರಿಸುವಲ್ಲಿ ಪ್ರಮುಖ ಅಂಶವಾಗಿದೆ ಏಕೆಂದರೆ ನಾವು ಸೇವಿಸುವ ಯಾವುದಾದರೂ ಜೀರ್ಣವಾಗುತ್ತದೆ ಮತ್ತು ನಮ್ಮ ರಕ್ತದ ಮೂಲಕ ನಮ್ಮ ದೇಹದ ಇತರ ಭಾಗಗಳಿಗೆ ಸುಲಭವಾಗಿ ಹರಡುತ್ತದೆ. ಆಹಾರ ವಿಷವು ಆಹಾರದಿಂದ ಹರಡುವ ರೋಗಕಾರಕಗಳಿಂದ ಉಂಟಾಗುವ ಸಾಮಾನ್ಯ ಸ್ಥಿತಿಗಳಲ್ಲಿ ಒಂದಾಗಿದೆ, ಮತ್ತು ರೋಗಲಕ್ಷಣಗಳು ವಾಂತಿ, ನೋವು ಮತ್ತು ಅತಿಸಾರವನ್ನು ಒಳಗೊಂಡಿರಬಹುದು.ಒಳ್ಳೆಯ ಸುದ್ದಿ ಏನೆಂದರೆ, ಆಹಾರ ಸುರಕ್ಷತಾ ಕಾರ್ಯವಿಧಾನಗಳ ಬಳಕೆಯ ಮೂಲಕ ಆಹಾರ ವಿಷವನ್ನು 100% ತಡೆಗಟ್ಟಬಹುದು. ಇವುಗಳನ್ನು ನಾವು ಸೇವಿಸುವವರೆಗೆ ನಮ್ಮ ಆಹಾರವು ಅತ್ಯುತ್ತಮ, ಆರೋಗ್ಯಕರ ಆಕಾರದಲ್ಲಿ ಉಳಿಯುತ್ತದೆ ಮತ್ತು ಲೇಬಲಿಂಗ್, ನೈರ್ಮಲ್ಯ, ಸೇರ್ಪಡೆಗಳು ಮತ್ತು ಸಂರಕ್ಷಕಗಳನ್ನು ಒಳಗೊಂಡಿರುತ್ತದೆ ಎಂದು ಖಚಿತಪಡಿಸಿಕೊಳ್ಳಲು ಬಳಸುವ ತಂತ್ರಗಳಾಗಿವೆ.ಆಹಾರ ನಿಯಂತ್ರಣ ಸಂಸ್ಥೆಗಳು ಮತ್ತು ಏಜೆನ್ಸಿಗಳು ಕಾನೂನುಗಳನ್ನು ಸ್ಥಾಪಿಸುವ ಮೂಲಕ ಆಹಾರ ಸುರಕ್ಷತಾ ಕ್ರಮಗಳ ಹರಿವನ್ನು ನಿರ್ವಹಿಸಲು ಮತ್ತು ನಿಯಂತ್ರಿಸಲು ಸುಲಭಗೊಳಿಸುತ್ತವೆ. ವಿಶ್ವ ಆರೋಗ್ಯ ಸಂಸ್ಥೆ, ವಿಶ್ವಸಂಸ್ಥೆಯ ಆಹಾರ ಮತ್ತು ಕೃಷಿ ಸಂಸ್ಥೆ, ಮತ್ತು ಆಹಾರ ಮತ್ತು ಔಷಧ ಆಡಳಿತ ನಂತಹ ಸಂಸ್ಥೆಗಳು ಆಹಾರ ಸುರಕ್ಷತೆ ಪ್ರಕ್ರಿಯೆಗಳು ಮತ್ತು ಕಾನೂನುಗಳನ್ನು ನಿಯಂತ್ರಿಸಲು ಸ್ಥಾಪಿಸಲಾಗಿದೆ. ನಮ್ಮ ಆಹಾರವು ಸುರಕ್ಷಿತವಾಗಿರುವುದನ್ನು ಖಚಿತಪಡಿಸಿಕೊಳ್ಳಲು ಈ ಸಂಸ್ಥೆಗಳು ತಮ್ಮ ಕೈಲಾದಷ್ಟು ಪ್ರಯತ್ನ ಮಾಡುತ್ತಿದ್ದರೂ, ಈ ಬೃಹತ್ ಕಾರ್ಯಕ್ಕೆ ನಮ್ಮೆಲ್ಲರ ಗಮನ ಅಗತ್ಯ.

# ದೇಶ–ವಿದೇಶ

## ಹಕ್ಕಿ ಜ್ವರಕ್ಕೆ ಬಲಿಯಾದ ಮಾನವ



**ನವದೆಹಲಿ:** ವಿಶ್ವ ಆರೋಗ್ಯ ಸಂಸ್ಥೆ (ಡಬ್ಲ್ಯುಎಚ್‌ಒ) ಹಕ್ಕಿ ಜ್ವರದಿಂದ ಮೊದಲ ಮಾನವ ಸಾವು ಎಂದು ದೃಢಪಡಿಸಿದೆ. ಸಂತ್ರಸ್ತೆ ಮೆಕ್ಸಿಕೊ ನಿವಾಸಿಯಾಗಿದ್ದು, ಏವಿಯನ್ ಇನ್ಫ್ಲುಯೆನ್ಸ ಎ (ಎಚ್ 5 ಎನ್ 2) ರೋಗಲಕ್ಷಣಗಳಿಂದ ಬಳಲುತ್ತಿದ್ದರು ಮತ್ತು ರೋಗಕ್ಕೆ ಬಲಿಯಾಗಿದ್ದಾರೆ.

ಮೆಕ್ಸಿಕನ್ ಆರೋಗ್ಯ ಅಧಿಕಾರಿಗಳ ಹೇಳಿಕೆಯ ಪ್ರಕಾರ, 59 ವರ್ಷದ ವ್ಯಕ್ತಿಯೊಬ್ಬರು ಜ್ವರ, ಉಸಿರಾಟದ ತೊಂದರೆ, ಅತಿಸಾರ, ವಾಕರಿಕೆ ಮತ್ತು ಸಾಮಾನ್ಯ ಅಸ್ವಸ್ಥತೆ ನಂತಹ ರೋಗಲಕ್ಷಣಗಳನ್ನು ತೋರಿಸಿದ ನಂತರ ಏಪ್ರಿಲ್ 24 ರಂದು ನಿಧನರಾದರು ಎಂದು ವರದಿಯಾಗಿದೆ.

ಡಬ್ಲ್ಯುಎಚ್‌ಒ ಪ್ರಕಾರ, ಇದು ಜಾಗತಿಕವಾಗಿ ವರದಿಯಾದ ಇನ್ಫ್ಲುಯೆನ್ಸ ಎ (ಎಚ್ 5 ಎನ್ 2) ವೈರಸ್ ಸೋಂಕಿನ ಮೊದಲ ಪ್ರಯೋಗಾಲಯದಿಂದ ದೃಢಪಡಿಸಿದ ಮಾನವ ಪ್ರಕರಣವಾಗಿದೆ ಮತ್ತು ಮೆಕ್ಸಿಕೊದ ವ್ಯಕ್ತಿಯಲ್ಲಿ ಏವಿಯನ್ ಎಚ್ 5 ವೈರಸ್ ಸೋಂಕಿನ ಮೊದಲ ಪ್ರಕರಣವಾಗಿದೆ.

ವಿಶ್ವ ಆರೋಗ್ಯ ಸಂಸ್ಥೆ ಮೇ 23 ರಂದು ಈ ಪ್ರಕರಣದ ಬಗ್ಗೆ ಮೊದಲು ಮಾಹಿತಿ ಪಡೆದಿದ್ದು, ಇದರಲ್ಲಿ ಮೆಕ್ಸಿಕೊದಲ್ಲಿ ಹಕ್ಕಿ ಜ್ವರದಿಂದಾಗಿ ವ್ಯಕ್ತಿಯೊಬ್ಬರು ಸಾವನ್ನಪ್ಪಿದ್ದಾರೆ ಎಂದು ವರದಿಯಾಗಿದೆ.

## ಪಾಶ್ಚಾತ್ಯ ರಾಷ್ಟ್ರಗಳ ಮೇಲೆ ದಾಳಿ ನಡೆಸಲು ಶಸ್ತ್ರಾಸ್ತ್ರ ಪೂರೈಕೆಗೆ ರಷ್ಯಾ ಸಿದ್ಧ : ಪುಟಿನ್ ಎಚ್ಚರಿಕೆ



**ಮಾಸ್ಕೊ:** ಒಂದು ವೇಳೆ ಉಕ್ರೇನ್ ಯುದ್ಧವನ್ನು ಪಾಶ್ಚಾತ್ಯ ರಾಷ್ಟ್ರಗಳು ಉಲ್ಬಣಗೊಳಿಸುವುದನ್ನು ಮುಂದುವರೆಸಿದರೆ, ಅದರಿಂದಾಗಿ ಅಂತರರಾಷ್ಟ್ರೀಯ ಬಾಂಧವ್ಯಗಳು ಸಂಪೂರ್ಣವಾಗಿ ನಾಶವಾಗಲಿದೆ. ಅಂತರರಾಷ್ಟ್ರೀಯ ಭದ್ರತೆಯನ್ನು ದುರ್ಬಲಗೊಳಿಸಲಿದೆ ಎಂದು ರಶ್ಯದ ಅಧ್ಯಕ್ಷ ವ್ಲಾದಿ ಮಿರ್ ಪುಟಿನ್ ಹೇಳಿದ್ದಾರೆ.

ರಶ್ಯದ ಭೂಪ್ರದೇಶದ ಮೇಲೆ ಉಕ್ರೇನ್ ಸೇನೆ ಪಾಶ್ಚಾತ್ಯ ರಾಷ್ಟ್ರಗಳು ಪೂರೈಕೆ ಮಾಡಿದ ಶಸ್ತ್ರಾಸ್ತ್ರಗಳನ್ನು ಬಳಸುತ್ತಿರುವ ಹಿನ್ನೆಲೆಯಲ್ಲಿ ರಶ್ಯವು ಪಾಶ್ಚಾತ್ಯ ರಾಷ್ಟ್ರಗಳ ವಿರೋಧಿಗಳಿಗೆ ಶಸ್ತ್ರಾಸ್ತ್ರ ಪೂರೈಕೆ ಸೇರಿದಂತೆ ಅಸಾಮಾನ್ಯವಾದ ಕ್ರಮಗಳನ್ನು ಕೈಗೊಳ್ಳುವ ಬಗ್ಗೆ ಮಾಸ್ಕೊ ಪರಿಶೀಲಿಸುತ್ತಿದೆಯೆಂದು ಅವರು ಹೇಳಿದರು.

ಸೈಂಟ್ಪೀಟ್‌ಬರ್ಸ್‌ರ್ಗ್‌ನಲ್ಲಿ ಬುಧವಾರ ನಡೆದ ಅಂತರರಾಷ್ಟ್ರೀಯ ಆರ್ಥಿಕ ವೇದಿಕೆ (ಎಸ್ಪಿಐಇಎಫ್)ನ ನೇಪಥ್ಯದಲ್ಲಿ ನಡೆದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು. ರಶ್ಯದೊಳಗೆ ಉಕ್ರೇನ್ ಇತ್ತೀಚೆಗೆ ನಡೆಸಿದ ದಾಳಿಯಲ್ಲಿ ಅಮೆರಿಕದ ಶಸ್ತ್ರಾಸ್ತ್ರಗಳನ್ನು ಬಸಿರುವುದನ್ನು ಅಮೆರಿಕದ ಸೆನೆಟರ್ ಹಾಗೂ ಪಾಶ್ಚಾತ್ಯ ಅಧಿಕಾರಿಯೊಬ್ಬರು ದೃಢಪಡಿಸಿದ ಬೆನ್ನಲ್ಲೆ ಪುಟಿನ್ ಈ ಪ್ರತಿಕ್ರಿಯೆ ನೀಡಿದ್ದಾರೆ.

'' ಒಂದು ವೇಳೆ ಯಾವುದೇ ದೇಶವಾದರೂ ನಮ್ಮ ಪ್ರಾಂತದ ಮೇಲೆ ದಾಳಿ ನಡೆಸಲು ಯುದ್ಧವಲಯಕ್ಕೆ ಶಸ್ತ್ರಾಸ್ತ್ರಗಳನ್ನು ಪೂರೈಕೆ ಮಾಡಿದ್ದೇ ಆದರೆ, ಅಂತಹ ದೇಶಗಳ ಸೂಕ್ಷ್ಮ ಸಂವೇದಿ ನೆಲೆಗಳ ವಿರುದ್ಧ ದಾಳಿಗಳನ್ನು ನಡೆಸಲು ಜಗತ್ತಿನ ಆ ಪ್ರದೇಶಗಳಿಗೆ ಅಂತಹದೇ ಶಸ್ತ್ರಾಸ್ತ್ರಗಳನ್ನು ನಾವು ಯಾಕೆ ಪೂರೈಕೆ ಮಾಡಬಾರದು ಎಂದು ರಶ್ಯ ಅಧ್ಯಕ್ಷರು ಪ್ರಶ್ನಿಸಿದರು.

ನಮ್ಮ ವಿರುದ್ಧದ ಸಮರದಲ್ಲಿ ಈ ದೇಶಗಳನ್ನು ಎಳೆದುತಂದಲ್ಲಿ, ರಶ್ಯದ ವಿರುದ್ಧದ ಯುದ್ಧದಲ್ಲಿ ಅವು ನೇರವಾಗಿ ಪಾಲ್ಗೊಂಡಂತಾಗುತ್ತದೆ. ಈಗ ನಾವು ಅದೇ ರೀತಿಯಾಗಿ ವರ್ತಿಸುವ ಹಕ್ಕನ್ನು ಕಾಯ್ದುಕೊಳ್ಳುತ್ತೇವೆ. ಅತ್ಯಂತ ಗಂಭೀರ ಸಮಸ್ಯೆಗಳಿಗೆ ಇದೇ ಮದ್ದಾಗಿರುತ್ತದೆ'' ಎಂದು ಪುಟಿನ್ ಎಚ್ಚರಿಕೆ ನೀಡಿದರು.

## ದಕ್ಷಿಣ ಆಫ್ರಿಕಾದ ಸಚಿವ ಝಿಝಿ ಕೊಡ್ವಾ ಅರೆಸ್ಟ್



**ದಕ್ಷಿಣ ಆಫ್ರಿಕಾ:** ಲಂಚ ಪಡೆದ ಆರೋಪದ ಮೇಲೆ ದಕ್ಷಿಣ ಆಫ್ರಿಕಾದ ಸಚಿವ ಝಿಝಿ ಕೊಡ್ವಾ ಅವರನ್ನು ಪೊಲೀಸರು ಬಂಧಿಸಲಾಗಿದೆ. ಕ್ರೀಡಾ, ಕಲೆ ಮತ್ತು ಸಂಸ್ಕೃತಿ ಖಾತೆಗಳನ್ನು ಹೊಂದಿರುವ ಕೊಡ್ವಾ, ಉದ್ಯಮಿಯೊಬ್ಬರಿಂದ 90 ಸಾವಿರ ಡಾಲರ್ ( 75ಲಕ್ಷ) ಲಂಚ ಪಡೆದ ಆರೋಪ ಎದುರಿಸುತ್ತಿದ್ದಾರೆ. ಲಂಚ ಪಡೆದ ಹಣವನ್ನು ಐಷಾರಾಮಿ ಎಸ್ಯುವಿ ವಾಹನಗಳನ್ನು ಖರೀದಿಸಲು ಇವರು ಬಳಸಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ಕೊಡ್ವಾ ಅವರನ್ನು ನ್ಯಾಯಾಲಯದ ಮುಂದೆ ಹಾಜರುಪಡಿಸಿ ಬಳಿಕ ಹೆಚ್ಚಿನ ವಿಚಾರಣೆಗಾಗಿ ಪೊಲೀಸರ ವಶಕ್ಕೆ ನೀಡಲಾಗಿದೆ.

## ಶಾಶತ ಕದನ ವಿರಾಮಕ್ಕೆ ಹಮಾಸ್ ಆಗ್ರಹ



**ಗಾಝಾ:** ಗಾಝಾದಲ್ಲಿ ಶಾಶ್ವತ ಕದನ ವಿರಾಮ ಮತ್ತು ಗಾಝಾ ಪಟ್ಟಿಯಿಂದ ತನ್ನ ಪಡೆಗಳನ್ನು ಸಂಪೂರ್ಣ ಹಿಂಪಡೆಯುವುದಾಗಿ ಇಸ್ರೇಲ್ ಸ್ಪಷ್ಟವಾಗಿ ಒಪ್ಪಿದರೆ ಮಾತ್ರ ಯಾವುದೇ ಕದನವಿರಾಮಕ್ಕೆ ತಾನು ಸಮ್ಮತಿಸುವುದಾಗಿ ಹಮಾಸ್ನ ಉನ್ನತ ಮುಖಂಡರನ್ನು ಉಲ್ಲೇಖಿಸಿ ರಾಯ್ಟರ್ಸ್ ವರದಿ ಮಾಡಿದೆ. ಇಸ್ರೇಲ್–ಹಮಾಸ್ ನಡುವೆ ಮೂರು ಹಂತದ ಕದನ ವಿರಾಮ ಪ್ರಸ್ತಾಪವನ್ನು ಅಮೆರಿಕ ಅಧ್ಯಕ್ಷ ಬೈಡನ್ ಮುಂದಿರಿಸಿದ್ದರು. ಇದರಲ್ಲಿ ಪ್ರಥಮ ಹಂತದಲ್ಲಿ ಹಮಾಸ್ ಎಲ್ಲಾ ಒತ್ತೆಯಾಳುಗಳನ್ನು ಬಿಡುಗಡೆಗೊಳಿಸಬೇಕು ಮತ್ತು ಪ್ರತಿಯಾಗಿ ಇಸ್ರೇಲ್ ಫೆಲೆಸ್ತೀನ್ ಕೈದಿಗಳನ್ನು ಬಿಡುಗಡೆಗೊಳಿಸಬೇಕು ಎಂಬ ಅಂಶವಿದೆ. ಇಸ್ರೇಲ್ ಕೇವಲ ಪ್ರಥಮ ಹಂತವನ್ನು ಮಾತ್ರ ಬಯಸಿದೆ. ಎಲ್ಲಾ ಒತ್ತೆಯಾಳುಗಳೂ ಬಿಡುಗಡೆಗೊಂಡರೆ ತಕ್ಷಣ ನಮ್ಮ ಜನರ ಮೇಲಿನ ಆಕ್ರಮಣವನ್ನು ಪುನರಾರಂಭಿಸಲಿದೆ. ಆದ್ದರಿಂದ ಇಸ್ರೇಲ್ನಿಂದ ಸ್ಪಷ್ಟ ಬದ್ಧತೆಯನ್ನು ಪಡೆಯುವಂತೆ ಮಧ್ಯಸ್ಥಿಕೆ ವಹಿಸಿದ ದೇಶಗಳನ್ನು ಆಗ್ರಹಿಸಿದ್ದೇವೆ ಎಂದು ಹಮಾಸ್ನ ಉನ್ನತ ಮುಖಂಡ ಒಸಾಮಾ ಹಮ್ದನ್ ಹೇಳಿದ್ದಾರೆ.

## ಗಾಝಾ ಶಾಲೆಯ ಮೇಲೆ ಇಸ್ರೇಲ್ ಬಾಂಬ್ ದಾಳಿ

**ಗಾಝಾ:** ಕೇಂದ್ರ ಗಾಝಾ ಪಟ್ಟಿಯ ನುಸೆರಾತ್ ಶಿಬಿರದಲ್ಲಿರುವ ನಿರಾಶ್ರಿತರ ಶಾಲೆಯನ್ನು ಗುರಿಯಾಗಿಸಿಕೊಂಡು ಇಸ್ರೇಲ್ ನಡೆಸಿದ ವೈಮಾನಿಕ ದಾಳಿಯಲ್ಲಿ ಕನಿಷ್ಠ 35 ಫೆಲೆಸ್ತೀನೀಯರು ಮೃತಪಟ್ಟಿದ್ದು, ಹಲವಾರು ಮಂದಿ ಗಾಯಗೊಂಡಿದ್ದಾರೆ ಎಂದು ಮಾಧ್ಯಮಗಳು ಗುರುವಾರ ವರದಿ ಮಾಡಿವೆ. ಇಸ್ರೇಲಿ ಫೈಟರ್ ಜೆಟ್ ಹಲವಾರು ಕ್ಷಿಪಣಿಗಳಿಂದ ಕನಿಷ್ಠ ಮೂರು ತರಗತಿ ಕೊಠಡಿಗಳ ಮೇಲೆ ಬಾಂಬ್ ದಾಳಿ ನಡೆಸಿದೆ ಎಂದು ವೈದ್ಯಕೀಯ ಮೂಲಗಳು ಕ್ಸಿನ್ಹುವಾ ಸುದ್ದಿ ಸಂಸ್ಥೆಗೆ ತಿಳಿಸಿವೆ. ಗಾಝಾದಲ್ಲಿನ ಹಮಾಸ್ ನಡೆಸುತ್ತಿರುವ ಮಾಧ್ಯಮ ಕಚೇರಿ ಹೇಳಿಕೆಯಲ್ಲಿ, ಶಾಲೆಯ ಮೇಲಿನ ಇಸ್ರೇಲ್ ದಾಳಿಯನ್ನು ''ಭಯಾನಕ ಹತ್ಯಾಕಾಂಡ'' ಎಂದು ಖಂಡಿಸಿದೆ, ಇದು ''ನಾಗರಿಕರ ವಿರುದ್ಧ ನಡೆದ ನರಮೇಧದ ಅಪರಾಧದ ಸ್ಪಷ್ಟ ಪುರಾವೆಯಾಗಿದೆ'' ಎಂದು ಹೇಳಿದೆ.





## ಜೆಕ್ ಗಣರಾಜ್ಯದಲ್ಲಿ ರೈಲುಗಳ ನಡುವೆ ಮುಖಾಮುಖಿ ಡಿಕ್ಕಿ

**ಜೆಕ್ ಗಣರಾಜ್ಯ:** ಜೆಕ್ ನಗರ ಪಾರ್ಡುಬಿಸ್ನಲ್ಲಿ ಬುಧವಾರ (ಜೂನ್ 5) ಸಂಜೆ ಪ್ರಯಾಣಿಕರ ರೈಲು ಸರಕು ರೈಲಿಗೆ ಡಿಕ್ಕಿ ಹೊಡೆದ ಪರಿಣಾಮ ಕನಿಷ್ಠ ನಾಲ್ವರು ಸಾವನ್ನಪ್ಪಿದ್ದಾರೆ ಮತ್ತು 27 ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ ಎಂದು ಪ್ರಾದೇಶಿಕ ಗವರ್ನರ್ ತಿಳಿಸಿದ್ದಾರೆ. ರಕ್ಷಣಾ ಸೇವೆಗಳು ಘಟನಾ ಸ್ಥಳದಲ್ಲಿವೆ ಮತ್ತು ಪೊಲೀಸರು ಪ್ರಯಾಣಿಕರನ್ನು ಸ್ಥಳಾಂತರಿಸುತ್ತಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಪ್ರೇಗ್ ನಿಂದ ಪೂರ್ವಕ್ಕೆ ದೇಶದ ಮುಖ್ಯ ರೈಲು ಕಾರಿಡಾರ್ ನ ಭಾಗವಾದ ಪಾರ್ಡುಬಿಸ್ ನಲ್ಲಿ ಈ ಅಪಘಾತ ಸಂಭವಿಸಿದೆ. ಪ್ಯಾಸೆಂಜರ್ ರೈಲನ್ನು ರೈಲು ಕಂಪನಿ ರೆಜಿಯೊ ಜೆಟ್ ನಿರ್ವಹಿಸುತ್ತಿದೆ ಎಂದು ಪಾರ್ಡುಬಿಸ್ ಪ್ರದೇಶದ ಗವರ್ನರ್ ಮಾರ್ಟಿನ್ ನೆಟೊಲಿಕಿ ಫೇಸ್ಬುಕ್ನಲ್ಲಿ ತಿಳಿಸಿದ್ದಾರೆ.ರೆಜಿಯೋಜೆಟ್ ರೈಲು ಮತ್ತು ಸರಕು ರೈಲು ನಡುವೆ ಮುಖಾಮುಖಿ ಡಿಕ್ಕಿಯಾಗಿ ಹಲವಾರು ಜನರು ಸಾವನ್ನಪ್ಪಿದ್ದಾರೆ. ಡಜನ್ಗಟ್ಟಲೆ ಜನರು ಗಾಯಗೊಂಡಿದ್ದಾರೆ ಎಂದು ಅವರು ಹೇಳಿದರು. ಸುದ್ದಿ ವೆಬ್ಸೈಟ್ dnes.cz ಅಪಘಾತದ ನಂತರದ ತುಣುಕುಗಳು ಹಳಿಯಿಂದ ಕನಿಷ್ಠ ಒಂದು ಗಾಡಿಯನ್ನು ತೋರಿಸಿದರೆ, ಪೊಲೀಸರು ತಮ್ಮ ಎಕ್ಸ್ ಸಾಮಾಜಿಕ ಮಾಧ್ಯಮ ಖಾತೆಯಲ್ಲಿ ತುರ್ತು ಸೇವಾ ವಾಹನಗಳು ಮತ್ತು ಹೆಲಿಕಾಪ್ಟರ್ ಅನ್ನು ತೋರಿಸಿದ್ದಾರೆ.

ಹಲವರು ಗಂಭೀರವಾಗಿ ಗಾಯಗೊಂಡಿದ್ದಾರೆ ಎಂದು ರೈಲ್ವೆ ಆಡಳಿತದ ಅಗ್ನಿಶಾಮಕ ದಳದ ವಕ್ತಾರರು ಜೆಕ್ ಟಿವಿಗೆ ತಿಳಿಸಿದ್ದಾರೆ. ದೇಶದ ಆಂತರಿಕ ಮತ್ತು ಸಾರಿಗೆ ಸಚಿವರು ಅಪಘಾತದ ಸ್ಥಳಕ್ಕೆ ತೆರಳುತ್ತಿದ್ದಾರೆ ಎಂದು ಹೇಳಿದರೆ, ಪ್ರಧಾನಿ ಪೀಟರ್ ಫಿಯಾಲಾ ಎಕ್ಸ್ ನಲ್ಲಿ ಸಂತ್ರಸ್ತರಿಗೆ ಸಂತಾಪ ಸೂಚಿಸಿದ್ದಾರೆ.

## ಕಂಗನಾ ಕಪಾಳಕ್ಕೆ ಹೊಡೆದ ಮಹಿಳಾ ಪೇದೆ





**ಚಂಡೀಗಢ:** ಹರಿಯಾಣದ ಮಂಡಿ ಲೋಕಸಭಾ ಕ್ಷೇತ್ರದಿಂದ ಇತ್ತೀಚೆಗಷ್ಟೇ ಲೋಕಸಭೆಗೆ ಚುನಾಯಿತರಾಗಿರುವ ನಟಿ–ರಾಜಕಾರಣಿ ಕಂಗನಾ ರನೌತ್ ಅವರಿಗೆ ಚಂಡೀಗಢ ವಿಮಾನ ನಿಲ್ದಾಣದಲ್ಲಿ ಸಿಐಎಸ್‌ಎಫ್ ಮಹಿಳಾ ಕಾನ್ಸ್‌ಟೆಬಲ್ ಒಬ್ಬರು ಗುರುವಾರ ಕಪಾಳಕ್ಕೆ ಹೊಡೆದರು ಎಂದು ವರದಿಯಾಗಿದೆ.

ಈ ಕುರಿತು ದೂರು ದಾಖಲಾಗಿದ್ದು, ಪೊಲೀಸರು ಎಫ್‌ಐಆರ್ ದಾಖಲಿಸಿದ್ದಾರೆ. ಈ ನಡುವೆ, ಮಹಿಳಾ ಕಾನ್ಸ್ಟೆಬಲ್ ಅನ್ನು ಅಮಾನತುಗೊಳಿಸಲಾಗಿದೆ ಎಂದು ಪಿಟಿಐ ಸುದ್ದಿ ಸಂಸ್ಥೆ ಅಧಿಕಾರಿಗಳನ್ನು ಉಲ್ಲೇಖಿಸಿ ವರದಿ ಮಾಡಿದೆ.

ಘಟನೆ ನಡೆದ ಕೂಡಲೇ ಸಿಐಎಸ್‌ಎಫ್ ಅಧಿಕಾರಿಗಳಿಗೆ ಸ್ಥಳದಲ್ಲೇ ಕಂಗನಾ ದೂರು ನೀಡಿದ್ದಾರೆ. ಹೆಚ್ಚಿನ ತನಿಖೆಗಾಗಿ ಹಿರಿಯ ಸಿಐಎಸ್ಎಫ್ ಅಧಿಕಾರಿಗಳನ್ನು ಒಳಗೊಂಡ ತನಿಖಾ ಸಮಿತಿಯನ್ನು ರಚಿಸಲಾಗಿದೆ. ಕಂಗನಾ ಅವರು ವಿಸ್ತಾರಾ ವಿಮಾನದಲ್ಲಿ ಮಧ್ಯಾಹ್ನ 3 ಗಂಟೆಗೆ ದೆಹಲಿಗೆ ತೆರಳಿದರು. ದೆಹಲಿಗೆ ಆಗಮಿಸಿದ ನಂತರ ಕಂಗನಾ ಸಿಐಎಸ್‌ಎಫ್ ಮಹಾನಿರ್ದೇಶಕ ನೀನಾ ಸಿಂಗ್ ಮತ್ತು ಇತರ ಹಿರಿಯ ಅಧಿಕಾರಿಗಳನ್ನು ಭೇಟಿ ಮಾಡಿ ವಿವರಿಸಿದರು. ಅವರಿಗೆ ಘಟನೆ, ಇಂಡಿಯಾ ಟುಡೇ ವರದಿ ಮಾಡಿದೆ. ಹಲ್ಲೆನಡೆಸಿದ ಸಿಐಎಸ್ಎಫ್ ಮಹಿಳಾ ಕಾನ್ಸ್ಟೆಬಲ್ ಅನ್ನು ಕುಲ್ವಿಂದರ್ ಕೌರ್ ಎಂದು ಗುರುತಿಸಲಾಗಿದೆ. ಚಂಡೀಗಢ ವಿಮಾನ ನಿಲ್ದಾಣದಲ್ಲಿ ಭದ್ರತಾ ತಪಾಸಣೆಯ ಸಂದರ್ಭದಲ್ಲಿ ಮಹಿಳಾ ಕಾನ್ಸ್‌ಟೆಬಲ್ ಕುಲ್ವಿಂದರ್ ಮತ್ತು ನಟಿ ಕಂಗನಾ ನಡುವೆ ಬಿರುಸಿನ ವಾಕ್ಸಮರ ನಡೆಯಿತು. ಫೋನ್ ಅನ್ನು ಟ್ರೇನಲ್ಲಿ ಇರಿಸಲು ನಿರಾಕರಿಸಿದ್ದರಿಂದಾಗಿ ಈ ವಾಕ್ಸಮರ ನಡೆಯಿತು. ಇದರಿಂದ ಕೋಪಗೊಂಡ ಕಾನ್ಸ್‌ಟೆಬಲ್ ಕಂಗನಾ ಕಪಾಳಕ್ಕೆ ಹೊಡೆದರು ಎಂದು ಮೂಲಗಳನ್ನು ಉಲ್ಲೇಖಿಸಿ ಎಎನ್‌ಐ ವರದಿ ಮಾಡಿದೆ.

## ಸಂಸದ ವಿಶಾಲ್ ಕಾಂಗ್ರೆಸ್‌ಗೆ ಬೆಂಬಲ 'ಕೈ' ಸ್ಥಾನಗಳ ಸಂಖ್ಯೆ 100ಕ್ಕೆ ಏರಿಕೆ



**ಹೈದರಾಬಾದ್:** ಸಾಂಗ್ಲಿ ಕ್ಷೇತ್ರದಿಂದ ಪಕ್ಷೇತರರಾಗಿ ಸ್ಪರ್ಧಿಸಿ ಗೆದ್ದಿದ್ದ ಸಂಸದ ವಿಶಾಲ್ ಪಾಟೀಲ್ ಅವರು ಗುರುವಾರ ಕಾಂಗ್ರೆಸ್‌ಗೆ ತಮ್ಮ ಬೆಂಬಲ ವ್ಯಕ್ತಪಡಿಸಿದ್ದಾರೆ. ಇದರೊಂದಿಗೆ 'ಇಂಡಿಯಾ' ಮೈತ್ರಿಕೂಟದ ಸಂಖ್ಯೆ 233 ಕ್ಕೆ ಏರಿಕೆಯಾಗಿದೆ.

ಪಾಟೀಲ ಅವರ ಬೆಂಬಲವನ್ನು ಸ್ವಾಗತಿಸಿದ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮಹಾರಾಷ್ಟ್ರದ ಜನರು ವಿಶ್ವಾಸಘಾತುಕತನ, ದುರಹಂಕಾರ ಮತ್ತು ವಿಭಜನೆಯ ರಾಜಕಾರಣವನ್ನು ಸೋಲಿಸಿದರು. ಇದು ನಮ್ಮ ಸ್ಫೂರ್ತಿದಾಯಕ ಧೀಮಂತರಾದ ಛತ್ರಪತಿ ಶಿವಾಜಿ ಮಹಾರಾಜರು, ಮಹಾತ್ಮ ಜ್ಯೋತಿಬಾ ಫುಲೆ ಮತ್ತು ಬಾಬಾಸಾಹೇಬ್ ಡಾ. ಅಂಬೇಡ್ಕರ್ ಅವರಿಗೆ ಸಲ್ಲಿಸುವ ಗೌರವವಾಗಿದೆ ಎಂದು ತಿಳಿಸಿದ್ದಾರೆ. ಸಾಮಾಜಿಕ ನ್ಯಾಯ, ಸಮಾನತೆ ಮತ್ತು ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಸಾಂಗ್ಲಿಯಿಂದ ಚುನಾಯಿತ ಸಂಸದ ವಿಶಾಲ್ ಪಾಟೀಲ್ ಅವರು ಕಾಂಗ್ರೆಸ್ ಪಕ್ಷಕ್ಕೆ ಬೆಂಬಲ ಸೂಚಿಸಿರುವುದನ್ನು ಸ್ವಾಗತಿಸುತ್ತೇವೆ ಎಂದು ಖರ್ಗೆ ತಿಳಿಸಿದ್ದಾರೆ. ಮಹಾರಾಷ್ಟ್ರದಲ್ಲಿ ಉದ್ಧವ್ ಠಾಕ್ರೆ, ಅವರ ಶಿವಸೇನೆ, ಕಾಂಗ್ರೆಸ್, ಎನ್‌ಸಿಪಿ ಮೈತ್ರಿ ಮಾಡಿಕೊಂಡು ಅಭ್ಯರ್ಥಿಗಳನ್ನು ಕಣಕ್ಕೆ ಇಳಿಸಿದ್ದವು. ಸಾಂಗ್ಲಿಯಲ್ಲಿ ಉದ್ಧವ್ ಠಾಕ್ರೆ, ಅವರ ಪಕ್ಷದಿಂದ ಚಂದ್ರಹರ ಸುಭಾಶ್ ಪಾಟೀಲ್ ಕಣಕ್ಕೆ ಇಳಿದಿದ್ದರು. ಆದರೆ ಫಲಿತಾಂಶ ಪ್ರಕಟವಾದಾಗ ಪಕ್ಷೇತರ ಅಭ್ಯರ್ಥಿಯಾಗಿ ಕಣಕ್ಕೆ ಇಳಿದಿದ್ದ ವಿಶಾಲ್ ಪ್ರಕಾಶ್‌ಬಾಪು ಪಟೀಲ್ 1,00,053 ಮತಗಳ ಅಂತರದಿಂದ ಜಯಗಳಿಸಿದ್ದರು.

ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದ ವಿಶಾಲ್ ಪ್ರಕಾಶ್ ಪಾಟೀಲ್ ಅವರು ಕಾಂಗ್ರೆಸ್‌ನಿಂದ ಟಿಕೆಟ್ ಕೇಳಿದ್ದರು. ಆದರೆ ಮೈತ್ರಿ ಭಾಗವಾಗಿರುವ ಕಾರಣ ಕಾಂಗ್ರೆಸ್ ಟಿಕೆಟ್ ನೀಡಿರಲಿಲ್ಲ. ಆದರೆ ಚುನಾವಣೆಯ ಸಮಯದಲ್ಲಿ ಕಾಂಗ್ರೆಸ್ ಮತ್ತು ಎನ್ ಸಿಪಿ ಹಿಂದುಗಡೆಯಿಂದ ಪಕ್ಷೇತರ ಅಭ್ಯರ್ಥಿಗೆ ಬೆಂಬಲ ನೀಡಿದ್ದಕ್ಕೆ ಉದ್ಧವ್ ಠಾಕ್ರೆ ಅಸಮಾಧಾನಗೊಂಡಿದ್ದಾರೆ ಎನ್ನಲಾಗುತ್ತಿದೆ. ಹೀಗಾಗಿ ಬುಧವಾರ ನಡೆದ ಇಂಡಿಯಾ ಒಕ್ಕೂಟದ ಸಭೆಯಲ್ಲಿ ಠಾಕ್ರೆ ಗೈರಾಗಿದ್ದರು.

## ಮೋದಿ ಪ್ರಧಾನಿಯಾಗಿ ಪ್ರಮಾಣ ವಚನ ಮಾಲ್ಡೀವ್ಸ್ ಅಧ್ಯಕ್ಷರಿಗೆ ಆಹ್ವಾನ



**ನವದೆಹಲಿ:** ನರೇಂದ್ರ ಮೋದಿ ಪ್ರಧಾನಿಯಾಗಿ ಪ್ರಮಾಣ ವಚನ ಸ್ವೀಕಾರ ಸಮಾರಂಭಕ್ಕೆ ಮಾಲ್ಡೀವ್ಸ್ ಅಧ್ಯಕ್ಷ ಮೊಹಮ್ಮದ್ ಮುಯಿಝು ಅವರನ್ನು ಆಹ್ವಾನಿಸಲಾಗಿದೆ.

ಜೂನ್ 9 ರಂದು ನಡೆಯಲಿರುವ ಪ್ರಮಾಣ ವಚನ ಸ್ವೀಕಾರ ಸಮಾರಂಭಕ್ಕೆ ಬಾಂಗ್ಲಾದೇಶದ ಪ್ರಧಾನಿ ಶೇಖ್ ಹಸೀನಾ ಮತ್ತು ಶ್ರೀಲಂಕಾ ಅಧ್ಯಕ್ಷ ರನಿಲ್ ವಿಕ್ರಮಸಿಂಘೆ ಸೇರಿದಂತೆ ವಿದೇಶಿ ನಾಯಕರು ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

ನೇಪಾಳ ಪ್ರಧಾನಿ ಪುಷ್ಪ ಕಮಲ್ ದಹಲ್ ಮತ್ತು ಭೂತಾನ್ ರಾಜ ಜಿಗ್ಮೆ ಖೇಸರ್ ನಾಮ್ಗ್ಯೆಲ್ ವಾಂಗ್ಚುಕ್ ಅವರು ಪ್ರಮಾಣ ವಚನ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

ಇತ್ತೀಚೆಗೆ ಪ್ರಕಟವಾದ ಲೋಕಸಭಾ ಚುನಾವಣಾ ಫಲಿತಾಂಶದಲ್ಲಿ ಎನ್ಡಿಎ 293 ಸ್ಥಾನಗಳನ್ನು ಗೆದ್ದಿದೆ. ಅದೇ ರೀತಿ ನರೇಂದ್ರ ಮೋದಿಯವರ ಮೂರನೇ ಬಾರಿ ಪ್ರಧಾನಿಯಾಗಿ ಅಧಿಕಾರ ಸ್ವೀಕರಸಲಿದ್ದಾರೆ.

## ಜರ್ಮನಿಯಲ್ಲಿ ಕ್ರಿಮಿನಲ್ ಹಿನ್ನೆಲೆಯ ವಲಸಿಗರ ಗಡಿಪಾರು: ಚಾನ್ಸಲರ್



**ಬರ್ಲಿನ್:** ಜರ್ಮನಿಯು ಅಫ್ಘಾನಿಸ್ತಾನ ಹಾಗೂ ಸಿರಿಯ ಸೇರಿದಂತೆ ದೇಶದಲ್ಲಿ ಆಶ್ರಯ ಪಡೆದಿರುವ ಕ್ರಿಮಿನಲ್ ಹಿನ್ನೆಲೆಯ ವಲಸಿಗರನ್ನು ಗಡಿಪಾರು ಮಾಡಲಿದೆಯೆಂದು ಚಾನ್ಸಲರ್ ಓಲಾಫ್ ಶೋಲ್ಝ್ ಗುರುವಾರ ತಿಳಿಸಿದ್ದಾರೆ.

ಜರ್ಮನ್ ಸಂಸತ್ನಲ್ಲಿ ಗುರುವಾರ ಭದ್ರತೆಯನ್ನು ಕೇಂದ್ರಬಿಂದುವಾಗಿಸಿ ಮಾಡಿದ ಭಾಷಣದಲ್ಲಿ ಈ ವಿಷಯವನ್ನು ಅವರು ಪ್ರಕಟಿಸಿದರು.

ಕಳೆದ ವಾರ ಅಫ್ಘಾನ್ ವಲಸಿಗನೊಬ್ಬ ಚಾಕುವಿನಿಂದ ನಡೆಸಿದ ದಾಳಿಯಲ್ಲಿ ಪೊಲೀಸ್ ಅಧಿಕಾರಿಯೊಬ್ಬ ಮೃತಪಟ್ಟ ಘಟನೆಯ ಬಳಿಕ ಈ ಕ್ರಮದ ನಿರ್ಧಾರ ಬಂದಿದೆ.

ಆಶ್ರಯ, ರಕ್ಷಣೆ ಕೋರಿ ಬಂದ ವ್ಯಕ್ತಿಯು ಅತ್ಯಂತ ಗಂಭೀರವಾದ ಅಪರಾಧಗಳನ್ನು ಎಸಗಿದಾಗ ನನಗೆ ಆಕ್ರೋಶ ಬರುತ್ತದೆ. ಇಂತಹ ಕ್ರಿಮಿನಲ್ಗಳನ್ನು ಗಡಿಪಾರು ಮಾಡಲಾಗುವುದು ಎಂದು ಚಾನ್ಸಲರ್ ಅವರು ಸಂಸದರ ಕರತಾಡನಗಳ ನಡುವೆ ಹೇಳಿದರು. 29 ವರ್ಷದ ಪೊಲೀಸ್ ಅಧಿಕಾರಿಯನ್ನು ಹತ್ಯೆಗೈದ ಆರೋಪಿಯು 25 ವರ್ಷದ ಅಫ್ಘಾನ್ ನಿರಾಶ್ರಿತನಾಗಿದ್ದು, ಆತ 2014ರಲ್ಲಿ ಆಶ್ರಯ ಕೋರಿ ಜರ್ಮನಿಗೆ ವಲಸೆ ಬಂದಿದ್ದ ಎನ್ನಲಾಗಿದೆ.

## ನಭಕ್ಕೆ ಚಿಮ್ಮಿದ ಸ್ಟಾರ್ ಶಿಪ್ ರಾಕೆಟ್



**ಅಮೆರಿಕ:** ದೈತ್ಯ ಉದ್ಯಮಿ ಎಲಾನ್ ಮಸ್ಕ್ ಒಡೆತನದ ಸ್ಪೇಸ್ ಎಕ್ಸ್ ತನ್ನ ಸ್ಟಾರ್ಶಿಪ್ ಮೆಗಾ ರಾಕೆಟ್ ಅನ್ನು ಗುರುವಾರ ಯಶಸ್ವಿಯಾಗಿ ಕಕ್ಷೆಗೆ ಸೇರಿಸಿತು. ಟೆಕ್ಸಾಸ್‌ನ ಬೋಕಾ ಚಿಕಾದಲ್ಲಿರುವ ಸ್ಟಾರ್ಬೇಸ್ ಬಾಹ್ಯಾಕಾಶ ಉಡಾವಣಾ ಕೇಂದ್ರದಿಂದ ಸ್ಟಾರ್ ಶಿಪ್ ರಾಕೆಟ್ ಅನ್ನು ಟೆಕ್ಸಾಸ್ ಕಾಲಮಾನ ಪ್ರಕಾರ ಗುರುವಾರ ಬೆಳಿಗ್ಗೆ 8.50 ಕ್ಕೆ ಉಡಾವಣೆ ಮಾಡಲಾಯಿತು. ಈ ಮೂಲಕ ಮೊದಲ ಬಾರಿಗೆ ಹಲವಾರು ಪ್ರಮುಖ ಮೈಲಿಗಲ್ಲುಗಳನ್ನು ಸಾಧಿಸಿತು. ಇದು ಸಿಬ್ಬಂದಿಯಿಲ್ಲದ ತನ್ನ ಪರೀಕ್ಷಾ ಹಾರಾಟ ಪ್ರಾರಂಭಿಸಿದ್ದು, ಸುರಕ್ಷಿತವಾಗಿ ಭೂಮಿಗೆ ಮರುಳಲಿದೆ. ಇದು ನಾಲ್ಕನೇ ಪ್ರಯತ್ನವಾಗಿದ್ದು, ಕೊನೆಗೂ ಯಶಸ್ಸು ಸಿಕ್ಕಂತಾಗಿದೆ. ಇದು ಸರಿ ಸುಮಾರು 400–ಅಡಿ ಉದ್ದ ಇದೆ. ಗಗನಯಾತ್ರಿಗಳನ್ನು ಚಂದ್ರ, ಮಂಗಳ ಹಾಗೂ ಅದರಾಚೆಗಿನ ಗ್ರಹಗಳಿಗೆ ಕಳುಹಿಸುವ ಉದ್ದೇಶದಿಂದ ಸ್ಟಾರ್ಶಿಪ್ ರಾಕೆಟ್‌ಅನ್ನು ಅಭಿವೃದ್ಧಿಪಡಿಸಲಾಗಿದೆ. ರಾಕೆಟ್ ವ್ಯವಸ್ಥೆಯ ಎರಡು ವಿಭಾಗಗಳಾದ ಶಕ್ತಿಶಾಲಿ ಬೂಸ್ಟರ್ ಮತ್ತು ಕ್ರೂಸ್ ನೌಕೆ ಬಳಸಲಾಗಿದೆ. ಇದನ್ನು ಸಂಪೂರ್ಣವಾಗಿ ಮರುಬಳಕೆ ಮಾಡಲು ಸ್ಪೇಸ್‌ಎಕ್ಸ್ ಗುರಿ ಹೊಂದಿದೆ. ಅಮೆರಿಕಾದ ನಾಸಾ 2026 ರಲ್ಲಿ ಕೈಗೊಳ್ಳಲಿರುವ ಆರ್ಟೆಮಿಸ್ ಮಿಷನ್‌ನಲ್ಲಿ ಗಗನಯಾತ್ರಿಗಳನ್ನು ಚಂದ್ರನ ಮೇಲ್ಮೈಗೆ ಕೊಂಡೊಯ್ಯಲು ಸ್ಟಾರ್ ಶಿಪ್ ರಾಕೆಟ್‌ಅನ್ನು ಬಳಸಲಿದೆ.

### ಬಸ್ ಗಾತ್ರದ ಕ್ಷುದ್ರಗ್ರಹ ಭೂಮಿಯತ್ತ: ನಾಸಾ

**ನವದೆಹಲಿ:** ಬಸ್ ಗಾತ್ರದ ಕ್ಷುದ್ರಗ್ರಹ ಗಂಟೆಗೆ 14,400 ಕಿಮೀ ವೇಗದಲ್ಲಿ ಭೂಮಿಯತ್ತ ಸಾಗುತ್ತಿದೆ ನಾಸಾ ಎಚ್ಚರಿಕೆ ನೀಡಿದೆ. ಈ ಕ್ಷುದ್ರಗ್ರಹವನ್ನು 2024 JP1 ಎಂದು ಹೆಸರಿಸಲಾಗಿದೆ. ಸರಿಸುಮಾರು ಸಿಟಿ ಬಸ್ನ ಗಾತ್ರದ ಕ್ಷುದ್ರಗ್ರಹವು ಭೂಮಿಯ ಸಮೀಪ ಸಾಗುತ್ತಿದ್ದು, ಅಪಾಯವನ್ನುಂಟು ಮಾಡುವ ಸಾಧ್ಯತೆಯಿದೆ ಎಂದು NEOs ಟ್ರ್ಯಾಕ್ ಮಾಡುವ ಖಗೋಳಶಾಸ್ತ್ರಜ್ಞರು ಮಾಹಿತಿ ನೀಡಿದ್ದಾರೆ. 2024 JP1 ನ ಆವಿಷ್ಕಾರವು ಓಇಔ ತಂಡದ ಜಾಗರೂಕ ಪ್ರಯತ್ನದಿಂದ ಈ ಕ್ಷುದ್ರಗ್ರಹದ ಟ್ರ್ಯಾಕಿಂಗ್ ಪತ್ತೆ ಹಚ್ಚಲಾಗಿದೆ. ಇದು 7.07 ಮಿಲಿಯನ್ ಕಿಮೀ ದೂರದಲ್ಲಿ ಭೂಮಿಗೆ ತನ್ನ ಹತ್ತಿರದ ಮಾರ್ಗವನ್ನು ಚಲಿಸುವ ನಿರೀಕ್ಷೆಯಿದೆ. ಆದರೆ ಈ ಗಾತ್ರದ ಕ್ಷುದ್ರಗ್ರಹಗಳಿಗೆ ಇದು ಅಸಾಮಾನ್ಯವೇನಲ್ಲ ಎಂದು ತಿಳಿಸಿದೆ.

## ಇಸ್ರೇಲ್‌ನೊಂದಿಗೆ ನೇರ ಯುದ್ಧ ಮಾಡಲು ಸಿದ್ಧ; ಹಿಜ್ಬುಲ್ಲಾದ ಬೆದರಿಕೆ!

**ಬೈರುತ್ (ಲೆಬನಾನ್):** ಇಸ್ರೇಲ್–ಹಮಾಸ್ ಯುದ್ಧ ನಡೆಯುತ್ತಿರುವಾಗಲೇ ಲೆಬನಾನ್ನಿಂದ ಕಾರ್ಯಾಚಟುವಟಿಕೆ ನಡೆಸುತ್ತಿರುವ ಭಯೋತ್ಪಾದಕ ಸಂಘಟನೆ ಹಿಜ್ಬುಲ್ಲಾ ಇಸ್ರೇಲ್ನೊಂದಿಗೆ ನೇರ ಯುದ್ಧದ ಸಿದ್ಧತೆಯಲ್ಲಿದೆ. ಹಿಜ್ಬುಲ್ಲಾ ಮುಖಂಡ ಶೇಖ್ ನಯಿಮ್ ಖಾಸಿಂ ಮಾತನಾಡಿ, 'ಲೆಬನಾನ್–ಇಸ್ರೇಲ್ ಗಡಿಯಲ್ಲಿ ಇಬ್ಬರ ನಡುವೆ ವೈಮನಸ್ಸು ಹೆಚ್ಚುತ್ತಿದೆ.

ಇಸ್ರೇಲ್ ಪಡೆಗಳು ಗಡಿ ದಾಟಿ ಲೆಬನಾನ್‌ಗೆ ಬಂದರೆ ಗಡಿಯಲ್ಲಿಯೇ ನಾಶಪಡಿಸುತ್ತೇವೆ' ಎಂದು ಹೇಳಿದೆ. ಇದ್ಕಕೆ ಪ್ರತ್ಯುತ್ತರವೆಂದು ಇಸ್ರೆಲ್ ನ ಪ್ರಧಾನಿ ಬೆಂಜಾಮಿನ ನೆತಾನ್ಯಾಹು ಇವರು ಹಿಜ್ಬುಲ್ಲಾಗೆ ಎಚ್ಚರಿಕೆ ನೀಡುತ್ತಾ, ಉತ್ತರ ಭಾಗದಲ್ಲಿ ದೊಡ್ಡ ಪ್ರಮಾಣದಲ್ಲಿ ಸಿದ್ಧತೆ ನಡೆಯುತ್ತಿದೆ ಎಂದು ಹೇಳಿದೆ.

ಹಿಜ್ಬುಲ್ಲಾ ಇತ್ತೀಚೆಗೆ ಇಸ್ರೇಲ್ನ ಕಿರ್ಯಾತ್ ಶಮೋನಾದಲ್ಲಿ ಡ್ರೋನ್ ದಾಳಿ ನಡೆಸಿತ್ತು.

ಲೆಬನಾನ್‌ನಗಡಿಯಲ್ಲಿರುವ ನಕೌರಾ ಪಟ್ಟಣದ ಮೇಲೆ ಇಸ್ರೇಲ್ನ ದಾಳಿಗೆ ಪ್ರತ್ಯುತ್ತರವೆಂದು ದಾಳಿ ನಡೆದಿದೆ ಎಂದು ವರದಿಯಾಗಿದೆ.

ಹಿಜ್ಬುಲ್ಲಾ ವಿರುದ್ಧದ ಯುದ್ಧವನ್ನು ಶೀಘ್ರದಲ್ಲೇ ನಿರ್ಧರಿಸಲಾಗುವುದು.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054



# ಗುಡ್ ನ್ಯೂಸ್ ಕೊಟ್ಟ ರಕ್ಷಿತ್ ಶೆಟ್ಟಿ



ಸ್ಯಾಂಡಲ್‌ವುಡ್ ನಟ ರಕ್ಷಿತ್ ಶೆಟ್ಟಿ ಅಭಿಮಾನಿಗಳಿಗೆ ಗುಡ್ ನ್ಯೂಸ್ ಕೊಟ್ಟಿದ್ದಾರೆ. 41ನೇ ವರ್ಷಕ್ಕೆ ಕಾಲಿಟ್ಟಿರುವ 'ಸಿಂಪಲ್ ಸ್ಟಾರ್' ಇದೀಗ ತಮ್ಮ ಮುಂದಿನ ಪ್ರಾಜೆಕ್ಟ್ ಬಗ್ಗೆ ಬಿಗ್ ಅಪ್‌ಡೇಟ್ ಹಂಚಿಕೊಂಡಿದ್ದಾರೆ.

'ಏಕಂ' ಎಂಬ ವೆಬ್ ಸಿರೀಸ್ ಬಗ್ಗೆ ನಟ ಮಾಹಿತಿ ನೀಡಿದ್ದಾರೆ. ರಕ್ಷಿತ್ ಸೋಷಿಯಲ್ ಮೀಡಿಯಾದಲ್ಲಿ ಶೇರ್ ಮಾಡಿರುವ ವಿಡಿಯೋ ಕ್ಲಿಪ್‌ನಲ್ಲಿ, ಕೆಸರು ನೀರು ತುಂಬಿಕೊಂಡಿರುವ ದಾರಿ ಮಧ್ಯೆ ಸಣ್ಣ ಒಂದು ಭಾಗದಲ್ಲಿ ಜನರು ಮೆಟ್ಟಿಕೊಂಡೇ ಓಡಾಡುತ್ತಿರುವ ದೃಶ್ಯವನ್ನು ಹಂಚಿಕೊಂಡಿದ್ದಾರೆ. ಏಕಂ ಬಗ್ಗೆ ಅಪ್‌ಡೇಟ್ ತರುತ್ತಿದ್ದೇವೆ. ಈ ಸ್ಥಳವನ್ನು ತುಂಬಾ ಹತ್ತಿರದಿಂದ ನೋಡಿ. ಮಚ್ ಲವ್ ಎಂದು ನಟ ಬರೆದುಕೊಂಡಿದ್ದಾರೆ. ಜೂನ್ 17ರಂದು ಅಧಿಕೃತ ಮಾಹಿತಿ ನೀಡುತ್ತೇವೆ ಎಂದಿದ್ದಾರೆ.

ರಕ್ಷಿತ್ ಶೆಟ್ಟಿ ತಮ್ಮ ನಿರ್ಮಾಣ ಸಂಸ್ಥೆಯಿಂದ ಒಟಿಟಿ ಫ್ಲಾರ್ಟ್ ಫಾರಂಗೆ 8 ಎಪಿಸೋಡ್‌ಗಳ 'ಏಕಂ' ವೆಬ್ ಸಿರೀಸ್ ನಿರ್ಮಾಣ ಮಾಡಿದ್ದಾರೆ. ಅವರೇ ನಿರ್ದೇಶನ ಕೂಡ ಮಾಡಿದ್ದಾರೆ ಎನ್ನಲಾಗಿದೆ. ಸದ್ಯದಲ್ಲೇ ಅಧಿಕೃತ ಮಾಹಿತಿ ಹೊರಬೀಳಲಿದೆ.

'ರಿಚರ್ಡ್ ಆಂಟನಿ' ಸಿನಿಮಾ ಸೇರಿದಂತೆ ರಕ್ಷಿತ್ ಹಲವು ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ನಟನೆ, ನಿರ್ದೇಶನ ಮತ್ತು ನಿರ್ಮಾಣ ಅಂತ ನಟ ತೊಡಗಿಸಿಕೊಂಡಿದ್ದಾರೆ.

# ಕಿಸ್ ಬೆಡಗಿ ಹಾಟ್‌ನೆಸ್ ನೋಡಿ ಫೈರ್ ಬಾಲ್ ಎಂದ ಫ್ಯಾನ್ಸ್



ಸ್ಯಾಂಡಲ್‌ವುಡ್‌ನ ನಟಿ ಶ್ರೀಲೀಲಾ ಸದ್ಯ ಸೌತ್ ಸಿನಿರಂಗದಲ್ಲಿ ಬಹುಬೇಡಿಕೆಯ ನಟಿ. ಲೇಟೆಸ್ಟ್ ಆಗಿ ಯೆಲ್ಲೋ ಕಲರ್ ಸೀರೆಯುಟ್ಟು ಪಡ್ಡೆ ಹುಡುಗರ ಹಾರ್ಟ್‌ಬೀಟ್ ಹೆಚ್ಚುವಂತೆ ಮಾಡಿದ್ದಾರೆ. ಫ್ಯಾನ್ಸ್ ಹಾಟ್‌ನೆಸ್ ನೋಡಿ ಫೈರ್ ಬಾಲ್ ಎಂದು ಕರೆದಿದ್ದಾರೆ.

ಶ್ರೀಲೀಲಾ, ತೆಲುಗಿನಲ್ಲಿ ಸಾಲು ಸಾಲು ಸಿನಿಮಾದಲ್ಲಿ ಅಭಿನಯಿಸುವ ಮೂಲಕ ಕ್ರೇಜ್ ಗಿಟ್ಟಿಸಿಕೊಳ್ಳುತ್ತಿದ್ದಾರೆ. ಇನ್ನೊಂದೆಡೆ ಸೋಷಿಯಲ್ ಮೀಡಿಯಾದಲ್ಲಿ ಸರಣಿ ಫೋಟೋ ಶೂಟ್ ಮೂಲಕ ಅಭಿಮಾನಿಗಳಿಗೆ ಗ್ಲಾಮರ್ ಟ್ರೀಟ್ ನೀಡುತ್ತಿದ್ದಾರೆ. ಈ ಬಾರಿ ಯೆಲ್ಲೋ ಕಲರ್ ಸ್ಯಾರಿ ಲುಕ್‌ಗೆ ನೆಟ್ಟಿಗರು ನಾನಾ ರೀತಿ ಕಾಮೆಂಟ್ ಮಾಡಿದ್ದಾರೆ.

ಗಾರ್ಜಿಯಸ್. ಬ್ಯೂಟಿಫುಲ್, ವಾವ್ವ್. ಸೆಕ್ಸೀ, ಡಾರ್ಲಿಂಗ್ ಎಂದೆಲ್ಲಾ ಕಾಮೆಂಟ್ ಮಾಡಿದ್ದಾರೆ. ಇನ್ನು ಕೆಲವರು ಮುಖದಲ್ಲಿ ಸ್ಮೈಲೇ ಇಲ್ವಲ್ಲಾ ಎಂದಿದ್ದಾರೆ.

ಶ್ರೀಲೀಲಾ ಪಾಲಿಗೆ ಮುಟ್ಟಿದ್ದೆಲ್ಲಾ ಚಿನ್ನವಾಗ್ತಿದೆ. ಶ್ರೀಲೀಲಾ ಅಭಿನಯದ ಸಾಲು ಸಾಲು ಸಿನಿಮಾಗಳು ರಿಲೀಸ್ ಆಗ್ತಿದೆ. ಭಗವಂತ ಕೇಸರಿ ಹಿಟ್ ಬಳಿಕ ಶ್ರೀಲೀಲಾಗೆ ಫುಲ್ ಡಿಮ್ಯಾಂಡ್ ಕ್ರಿಯೇಟ್ ಆಗಿದೆ.

ಧಮಾಕಾ ಸಿನಿಮಾ ಮೂಲಕ ಟಾಲಿವುಡ್ ಇಂಡಸ್ಟ್ರಿಯಲ್ಲಿ ಫೇಮಸ್ ಆದ ಶ್ರೀಲೀಲಾ ಈ ಚಿತ್ರಕ್ಕಾಗಿ ಅತ್ಯುತ್ತಮ ನಟಿ ಸೈಮಾ ಪ್ರಶಸ್ತಿಯನ್ನು ಪಡೆದರು. ಇತ್ತೀಚೆಗಷ್ಟೇ ಆಕೆ ನಟಿಸಿದ ಸ್ಕಂದ ಬಾಕ್ಸ್ ಆಫೀಸ್‌ನಲ್ಲಿ ಆವರೇಜ್ ಹಿಟ್ ಆಗಿತ್ತು.

ಬಾಲಯ್ಯ ಜೊತೆ ಶ್ರೀಲೀಲಾ ಭಗವಂತ ಕೇಸರಿ ಸಿನಿಮಾ ಮಾಡಿದ್ದಾರೆ. ದತ್ತು ಮಗಳ ಪಾತ್ರಕ್ಕೆ ಬಾಲಯ್ಯ ಜೊತೆ ಶ್ರೀಲೀಲಾ ತಮ್ಮ ಪಾತ್ರಕ್ಕೆ ನ್ಯಾಯ ಸಲ್ಲಿಸಿದ್ದಾರೆ. ಸ್ಟಾರ್ ಹೀರೋ ಸಿನಿಮಾದಲ್ಲಿ ನಟಿಸಿದ್ದರೂ ತನ್ನ ನಟನೆಯಿಂದ ಶ್ರೀಲೀಲಾ ಇಂಪ್ರೆಸ್ ಮಾಡಿದ್ದಾರೆ

ಡ್ಯಾನ್ಸ್ ವಿಚಾರದಲ್ಲಿಯೂ ಸಖತ್ ಫೇಮಸ್ ಆಗಿರುವ ಶ್ರೀಲೀಲಾ ಅವರ ನೃತ್ಯ ಎಲ್ಲರಿಗೂ ಇಷ್ಟ. ಸಿನಿಮಾಗಳಲ್ಲಿ ಶ್ರೀಲೀಲಾ ಅವರ ಡ್ಯಾನ್ಸ್ ನೋಡಿ ಜನರು ಫಿದಾ ಆಗುತ್ತಾರೆ. ಇದು ಕೂಡಾ ಅವರಿಗೆ ಪ್ಲಸ್ ಪಾಯಿಂಟ್ ಆಗಿದೆ.

ಸ್ಯಾಂಡಲ್‌ವುಡ್‌ನಿಂದ ವೃತ್ತಿ ಜೀವನ ಆರಂಭಿಸಿ, ಬಳಿಕ ಬೇರೆ ಭಾಷೆಗಳಲ್ಲಿ ಅವಕಾಶ ಗಿಟ್ಟಿಸಿಕೊಂಡು ಸ್ಟಾರ್ ನಟಿಯಾಗಿ ಮಿಂಚುತ್ತಿರುವವರಲ್ಲಿ ಶ್ರೀಲೀಲಾ ಕೂಡ ಒಬ್ಬರು.

2019ರಲ್ಲಿ ಕನ್ನಡದ 'ಕಿಸ್' ಸಿನಿಮಾ ಮೂಲಕ ಬಣ್ಣದ ಲೋಕಕ್ಕೆ ಕಾಲಿಟ್ಟು, ಸದ್ಯ ಟಾಲಿವುಡ್‌ನ ಬಹುಬೇಡಿಕೆಯ ನಾಯಕ ನಟಿಯಾಗಿ ಗುರುತಿಸಿಕೊಂಡಿದ್ದಾರೆ.

# ಮಾಧವನ್ ಜೊತೆ ಕಾಣಿಸಿಕೊಂಡ ಮೇಘಾ ಶೆಟ್ಟಿ



ಸ್ಯಾಂಡಲ್‌ವುಡ್ ನಟಿ ಮೇಘಾ ಶೆಟ್ಟಿ ಸದ್ಯ 'ಗ್ರಾಮಾಯಣ' ಸೇರಿದಂತೆ ಹಲವು ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಇದರ ನಡುವೆ ಸೌತ್ ನಟ ಆರ್. ಮಾಧವನ್ ಜೊತೆ ಮೇಘಾ ಸೆಲ್ಫಿ ಕ್ಲಿಕ್ಕಿಸಿಕೊಂಡಿರುವ ಫೋಟೋ ಸೋಷಿಯಲ್ ಮೀಡಿಯಾದಲ್ಲಿ ಶೇರ್ ಮಾಡಿದ್ದಾರೆ. ಈ ಬೆನ್ನಲ್ಲೇ, ನಟಿ ತಮಿಳು ಸಿನಿಮಾ ಮಾಡ್ತಿದ್ದಾರಾ? ಎಂಬ ಚರ್ಚೆ ಶುರುವಾಗಿದೆ.

'ಜೊತೆ ಜೊತೆಯಲಿ' ಸೀರಿಯಲ್ ಮೂಲಕ ಗಮನ ಸೆಳೆದ ಮೇಘಾ ಶೆಟ್ಟಿ ಇದೀಗ ಮಾಧವನ್ ಜೊತೆ ಫೋಟೋ ಕ್ಲಿಕ್ಕಿಸಿಕೊಂಡು ಸಂಭ್ರಮಿಸಿದ್ದಾರೆ. ಅದ್ಭುತ ನಟನೊಂದಿಗೆ ಚರ್ಚೆ ಮಾಡುತ್ತಾ ಸಮಯ ಕಳೆದೆ. ಒಂದೊಳ್ಳೆಯ ಕಲಿಕೆಯ ಅನುಭವ ಎಂದು ನಟಿ ಬರೆದುಕೊಂಡಿದ್ದಾರೆ. ನಟಿಯ ಪೋಸ್ಟ್ ವೈರಲ್ ಆಗ್ತಿದ್ದಂತೆ ಬಗೆ ಬಗೆಯ ಕಾಮೆಂಟ್‌ಗಳು ಹರಿದು ಬರುತ್ತಿವೆ.

ಮಾಧವನ್ ಜೊತೆ ನಟಿ ತಮಿಳು ಸಿನಿಮಾ ಮಾಡ್ತಿದ್ದಾರಾ? ರಶ್ಮಿಕಾ ಮಂದಣ್ಣ, ಶ್ರೀಲೀಲಾರಂತೆಯೇ ಮೇಘಾ ಶೆಟ್ಟಿ ಕೂಡ ಪರಭಾಷೆಗಳಲ್ಲಿ ಬ್ಯುಸಿಯಾಗ್ತಾರಾ? ಎಂಬ ಅಭಿಮಾನಿಗಳಲ್ಲಿ ಪ್ರಶ್ನೆ ಮೂಡಿದೆ. ನೆಟ್ಟಿಗರ ಚರ್ಚೆಗೂ ಗ್ರಾಸವಾಗಿದೆ.

ಅಂದಹಾಗೆ, 'ಆಪರೇಷನ್ ಲಂಡನ್ ಕಫೆ' ಸಿನಿಮಾ ಹಲವು ಭಾಷೆಗಳಲ್ಲಿ ಮೂಡಿ ಬಂದಿದೆ. ಪ್ರಜ್ವಲ್ ದೇವರಾಜ್ ಜೊತೆ ಚೀತಾ, ವಿನಯ್ ರಾಜ್‌ಕುಮಾರ್ ಜೊತೆ ಗ್ರಾಮಾಯಣ ಸೇರಿದಂತೆ ಹಲವು ಚಿತ್ರಗಳು ಮೇಘಾ ಶೆಟ್ಟಿ ಕೈಯಲ್ಲಿವೆ.

# ಸೂಪರ್ ಓವರ್ ಥ್ರಿಲ್ಲರ್

## ಕ್ರಿಕೆಟ್ ಶಿಶು ಅಮೆರಿಕದ ಮುಂದೆ ಸೋತ ಪಾಕ್!



**ಡಲ್ಲಾಸ್:** ಟಿ20 ವಿಶ್ವಕಪ್ ಗೆಲ್ಲಲು ಸೇನಾ ಕೇಂದ್ರದಲ್ಲಿ ದೈಹಿಕ ತರಬೇತಿ ಪಡೆದಿದ್ದ ಪಾಕಿಸ್ತಾನ ತಂಡ ಕ್ರಿಕೆಟ್ ಶಿಶು ಅಮೆರಿಕದ ವಿರುದ್ಧ ಸೋತಿದೆ. ಸೂಪರ್ ಓವರ್‌ನಲ್ಲಿ ಅಮೆರಿಕ ಪಾಕಿಸ್ತಾನವನ್ನು ಮಣಿಸಿದೆ.

ಟಾಸ್ ಸೋತು ಮೊದಲು ಬ್ಯಾಟ್ ಮಾಡಿದ ಪಾಕಿಸ್ತಾನ 7 ವಿಕೆಟ್ ನಷ್ಟಕ್ಕೆ 159 ರನ್ ಹೊಡೆಯಿತು. ಚೇಸ್ ಮಾಡಿದ ಅಮೆರಿಕಕ್ಕೆ ಕೊನೆಯ ಓವರ್‌ನಲ್ಲಿ 15 ರನ್ ಬೇಕಿತ್ತು.

ಹ್ಯಾರಿಸ್ ರೌಫ್ ಎಸೆದ ಮೊದಲ ಮೂರು ಎಸೆತದಲ್ಲಿ 1 ರನ್ ಬಂದಿದ್ದರೆ 4ನೇ ಎಸೆತವನ್ನು ಆರನ್ ಜೋನ್ಸ್ ಸಿಕ್ಸ್‌ಗೆ ಅಟ್ಟಿದರು. 5ನೇ ಎಸೆತದಲ್ಲಿ 1 ರನ್ ಓಡಿದರು. 6ನೇ ಎಸೆತದಲ್ಲಿ ಸ್ಟ್ರೈಕ್‌ನಲ್ಲಿದ್ದ ನಿತೀಶ್ ಕುಮಾರ್ ಬೌಂಡರಿ ಹೊಡೆಯುವ ಮೂಲಕ ಪಂದ್ಯ ಟೈನಲ್ಲಿ ಅಂತ್ಯವಾಯಿತು.

ಅಮೀರ್ ಎಸೆದ ಸೂಪರ್ ಓವರ್‌ನಲ್ಲಿ ಅಮೆರಿಕ 18 ರನ್ ಹೊಡೆಯಿತು. ಇದರಲ್ಲಿ ಇತರ ರೂಪದಲ್ಲಿ 7 ರನ್ ಬಿಟ್ಟುಕೊಟ್ಟಿದ್ದರು. 19 ರನ್‌ಗಳ ಸವಾಲು ಪಡೆದ ಪಾಕಿಸ್ತಾನ 1 ವಿಕೆಟ್ ನಷ್ಟಕ್ಕೆ 13 ರನ್‌ಗಳಿಸಿ ಸೋಲನ್ನು ಒಪ್ಪಿಕೊಂಡಿತು.

ಮೊದಲು ಬ್ಯಾಟ್ ಮಾಡಿದ್ದ ಪಾಕ್ ಪರ ನಾಯಕ ಬಾಬರ್ ಅಜಂ 44 ರನ್(43 ಎಸೆತ, 3 ಬೌಂಡರಿ, 2 ಸಿಕ್ಸರ್), ಶಾದಾಬ್ ಖಾನ್ 40 ರನ್ (25 ಎಸೆತ, 1 ಬೌಂಡರಿ, 3 ಸಿಕ್ಸರ್) ಇಫ್ತಿಕಾರ್ ಅಹ್ಮದ್ ಔಟಾಗದೇ 18 ರನ್ (14 ಎಸೆತ, 3 ಬೌಂಡರಿ), ಶಾಹೀನ್ ಅಫ್ರಿದಿ ಔಟಾಗದೇ 23 ರನ್ (16 ಎಸೆತ, 1 ಬೌಂಡರಿ, 2 ಸಿಕ್ಸರ್) ಹೊಡೆದರು.

ಅಮೆರಿಕ ಪರ ಮೊನಾಂಕ್ ಪಟೇಲ್ 50 ರನ್ (38 ಎಸೆತ, 7 ಬೌಂಡರಿ, 1 ಸಿಕ್ಸರ್), ಅಂಡ್ರಿಸ್ ಗೌಸ್ 35 ರನ್ (26 ಎಸೆತ, 5 ಬೌಂಡರಿ, 1 ಸಿಕ್ಸರ್), ಆರನ್ ಜೋನ್ಸ್ ಔಟಾಗದೇ 36 ರನ್ (26 ಎಸೆತ, 2 ಬೌಂಡರಿ, 2 ಸಿಕ್ಸರ್), ನಿತೀಶ್ ಕುಮಾರ್ ಔಟಾಗದೇ 14 ರನ್ (14 ಎಸೆತ, 1 ಬೌಂಡರಿ) ಹೊಡೆದರು. ಪಾಕಿಸ್ತಾನ ಇತರ ರೂಪದಲ್ಲಿ12 ರನ್ (1 ನೋಬಾಲ್, 11 ವೈಡ್) ಬಿಟ್ಟುಕೊಟ್ಟದ್ದು ಮುಳುವಾಯಿತು.

# ಉಡುಪಿಯಲ್ಲಿ ಲಕ್ಷ್ಮೀ ಹೆಬ್ಬಾಳ್ಕರ್ ಗೋ ಬ್ಯಾಕ್

## ಸಚಿವ ಪರಮೇಶ್ವರ ಅಚ್ಚರಿಯ ಹೇಳಿಕೆ



**ಉಡುಪಿ:** ಲೋಕಸಭೆ ಚುನಾವಣೆಯಲ್ಲಿ ಸೋಲಿನ ಬಳಿಕ ಉಡುಪಿಯಲ್ಲಿ ಕಾಂಗ್ರೆಸ್ ಕಾರ್ಯಕರ್ತರಿಂದ ಉಸ್ತುವಾರಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಗೋ ಬ್ಯಾಕ್ ಅಭಿಯಾನ ಆರಂಭವಾಗಿದೆ. ಈ ಬಗ್ಗೆ ಉಡುಪಿ ಪ್ರವಾಸದಲ್ಲಿರುವ ಗೃಹ ಸಚಿವ ಜಿ ಪರಮೇಶ್ವರ ಇದೀಗ ಪ್ರತಿಕ್ರಿಯಿಸಿದ್ದಾರೆ. ಕರಾವಳಿಯಲ್ಲಿ ಕಾಂಗ್ರೆಸ್ಸಿಗೆ ಹಿನ್ನಡೆ ಆಗಿದೆ. ಕರಾವಳಿಯಲ್ಲಿ ಪಕ್ಷ ಸಂಘಟನೆ ಕೆಲಸ ಆಗಬೇಕು. ಮುಂದಿನ ದಿನಗಳಲ್ಲಿ ಆತ್ಮಾವಲೋಕನ ಮಾಡುತ್ತೇವೆ. ಕರಾವಳಿಯ ಮೂರೂ ಜಿಲ್ಲೆಯಲ್ಲಿ ಹೆಚ್ಚಿನ ತಯಾರಿ ಮಾಡಬೇಕು ಎಂದರು.

ಲಕ್ಷ್ಮೀ ಹೆಬ್ಬಾಳ್ಕರ್ ಗೋ ಬ್ಯಾಕ್ ಅಭಿಯಾನ ವಿಚಾರವಾಗಿ ಪ್ರತಿಕ್ರಿಯಿಸಿ, ಜಿಲ್ಲಾ ಸಚಿವರ ನೇಮಕ ಮಾಡುವುದು ಆಡಳಿತದ ದೃಷ್ಟಿಯಿಂದಲೇ ವಿನಃ ರಾಜಕೀಯದ ದೃಷ್ಟಿಯಿಂದ ಅಲ್ಲ. ಪಕ್ಷ ಸಂಘಟನೆಗೆ ನಮ್ಮಲ್ಲಿ ಅಧ್ಯಕ್ಷರು ಇದ್ದಾರೆ. ಪ್ರತಿಯೊಂದು ಜಿಲ್ಲೆಗೂ ಪಕ್ಷ ಸಂಘಟನೆಗೆ ಉಸ್ತುವಾರಿಗಳು ಬೇರೆ ಇರುತ್ತಾರೆ. ಜಿಲ್ಲೆಯ ಆಡಳಿತ ಚುರುಕುಗೊಳಿಸುವುದು ಉಸ್ತುವಾರಿ ಸಚಿವರ ಕೆಲಸ. ಕಾರ್ಯಕ್ರಮ ಅನುಷ್ಠಾನ ಆಗುವಂತೆ ನೋಡಿಕೊಳ್ಳುವುದು ಅವರ ಕೆಲಸ. ಅವರಲ್ಲಿ ಏನಾದರೂ ತಪ್ಪಿದ್ದರೆ, ಕಾರ್ಯಕರ್ತರು ಹೇಳಿದರೆ ಮುಖ್ಯಮಂತ್ರಿಗಳು ಗಮನ ಹರಿಸುತ್ತಾರೆ ಎಂದರು.

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ ಎಂಬ ಬಿಜೆಪಿ ಆರೋಪಕ್ಕೆ ತಿರುಗೇಟು ನೀಡಿದ ಅವರು, ಯಾವ ಕಾನೂನು ಸುವ್ಯವಸ್ಥೆಯೂ ಹಾಳಾಗಿಲ್ಲ. ಕೊಲೆ ಆಗಿದೆ, ಆಗಬಾರದಿತ್ತು. ಕೊಲೆ ಯಾಕಾಗಿದೆ ಅನ್ನೋದನ್ನ ಎಲ್ಲರೂ ಗಮನಿಸಿದ್ದಾರೆ. ಎಲ್ಲಾದರೂ ಕೋಮು ಗಲಭೆ ಆಗಿದೆಯಾ? ಗಣೇಶ ಹಬ್ಬ, ರಂಜಾನ್ ಎಲ್ಲವೂ ಶಾಂತಿಯುತವಾಗಿ ಮುಗಿದಿದೆ. ಸಾಮಾನ್ಯವಾಗಿ ಈ ವೇಳೆಯಲ್ಲಿ ಅಹಿತಕರ ಘಟನೆಗಳು ನಡೆಯುತ್ತಿದ್ದವು. ರಾಜಕೀಯ ದೃಷ್ಟಿಯಿಂದ ಯಾವುದೇ ಕೊಲೆ ಆಗಿಲ್ಲ. ಬಿಜೆಪಿ ಆಡಳಿತ ಇದ್ದಾಗ ಕೊಲೆ ಆಗಲೇ ಇಲ್ಲವೇ ಎಂದು ಪ್ರಶ್ನಿಸಿದರು.

**ಒತ್ತಾಯಿಸಿ ರಾಜೀನಾಮೆ ಪಡೆಯಲಾಗದು:** ವಾಲ್ಮೀಕಿ ನಿಗಮ ಅವ್ಯವಹಾರ ಆರೋಪಕ್ಕೆ ಸಂಬಂಧಿಸಿ ಸಚಿವ ನಾಗೇಂದ್ರ ರಾಜೀನಾಮೆಗೆ ಆಗ್ರಹ ವ್ಯಕ್ತವಾಗಿದೆ. ಈ ಬಗ್ಗೆ ಪ್ರತಿಕ್ರಿಯೆ ನೀಡಿದ ಪರಮೇಶ್ವರ್, ಈ ಬಗ್ಗೆ ಅವರೇ (ನಾಗೇಂದ್ರ) ತೀರ್ಮಾನ ತೆಗೆದುಕೊಳ್ಳಬೇಕು. ಯಾರು ಕೂಡ ಒತ್ತಾಯ ಮಾಡಿ ರಾಜೀನಾಮೆ ಕೊಡಿ ಎಂದು ಹೇಳಲು ಆಗುವುದಿಲ್ಲ. ಮುಖ್ಯಮಂತ್ರಿಗಳು ಕೂಡ ರಾಜೀನಾಮೆಗೆ ಒತ್ತಾಯ ಮಾಡಿಲ್ಲ. ನಾವು ತನಿಖೆ ಪ್ರಾರಂಭ ಮಾಡಿದ್ದೇವೆ, ಎಸ್‌ಐಟಿ ರಚನೆ ಮಾಡಿದ್ದೇವೆ. ಇದು ಬ್ಯಾಂಕ್ ಫ್ರಾಡ್ ಆಗಿರುವುದರಿಂದ, ಮೂರು ಕೋಟಿಗೂ ಅಧಿಕ ವಂಚನೆ ಆಗಿರುವುದರಿಂದ ಸ್ವಾಭಾವಿಕವಾಗಿ ಸಿಬಿಐ ತನಿಖೆ ಆಗುತ್ತೆ. ತನಿಖೆಯಲ್ಲಿ ಏನು ಸತ್ಯಾಂಶ ಹೊರಬರುತ್ತದೆ ಕಾದು ನೋಡೋಣ ಎಂದರು.

ಭೋವಿ ನಿಗಮದಲ್ಲಿ 100 ಕೋಟಿ ಹಗರಣ ನಡೆದಿರುವ ಬಗ್ಗೆ ಗೂಳಿಹಟ್ಟಿ ಶೇಖರ್ ಆರೋಪ ಮಾಡಿದ್ದಾರೆ. ಈ ಬಗ್ಗೆ ಯಾರಾದರೂ ನಮಗೆ ದೂರು ಕೊಡಬೇಕು. ದೂರು ನೀಡಿದರೆ ಖಂಡಿತವಾಗಿಯೂ ಈ ಬಗ್ಗೆ ತನಿಖೆ ಮಾಡುತ್ತೇವೆ. ಸರ್ಕಾರದ ಅವಧಿಯಲ್ಲಿ ಆಗಿದೆ ಅಂತ ಯಾರಾದರೂ ದೂರು ಕೊಟ್ಟರೆ ತನಿಖೆ ಮಾಡುತ್ತೇವೆ ಎಂದರು.

ಪ್ರಜ್ವಲ್ ರೇವಣ್ಣ ಪೆನ್ ಡ್ರೈ ಪ್ರಕರಣದಲ್ಲಿ ಸಂತ್ರಸ್ತ ಸ್ತ್ರೀಯರಿಗೆ ನಾವು ಧೈರ್ಯ ನೀಡಿದ್ದೇವೆ. ತನಿಖಾ ಸಂಸ್ಥೆಗಳ ಮುಂದೆ ಬಂದು ಹೇಳಿಕೆ ನೀಡಲು ಹೇಳಿದ್ದೇವೆ. ನಾನು ಮತ್ತು ಮುಖ್ಯಮಂತ್ರಿಗಳು ರಕ್ಷಣೆಯ ಭರವಸೆ ಕೊಟ್ಟಿದ್ದೇವೆ ಎಂದರು.

# ಸೂಪರ್ 8ಗೆ ಪಾಕಿಸ್ತಾನ ತಲುಪೋದು ಅನುಮಾನ?



ಟಿ20 ವಿಶ್ವಕಪ್‌ನಲ್ಲಿ ಪಾಕಿಸ್ತಾನಕ್ಕೆ ಮೊದಲ ಪಂದ್ಯದಲ್ಲೇ ಶಾಕ್ ಸಿಕ್ಕಿದೆ. ಈಗತಾನೇ ಕ್ರಿಕೆಟ್ ಜಗತ್ತಲ್ಲಿ ಅಂಬೆಗಾಲಿಡುತ್ತಿರುವ ಅಮೆರಿಕ ತಂಡವು ಪಾಕಿಸ್ತಾನವನ್ನು ರೋಚಕ ಪಂದ್ಯದಲ್ಲಿ ಸೋಲಿಸಿದೆ. ಈ ಮೂಲಕ ಪಾಕಿಸ್ತಾನ ಕ್ರಿಕೆಟ್ ತಂಡಕ್ಕೆ ಹಾಗೂ ಅಭಿಮಾನಿಗಳಿಗೆ ಬೇಸರ ಮೂಡಿಸಿದೆ. ಸೂಪರ್ 8ಗೆ ಅರ್ಹತೆ ಪಡೆಯಬೇಕು ಎಂಬ ಕನಸು ಕಾಣುತ್ತಿರುವ ಪಾಕಿಸ್ತಾನಕ್ಕೆ ಈ ಸೋಲು ಶಾಕ್ ತಂದಿದೆ. ಸೂಪರ್ 8ಗೆ ಪಾಕ್ ಅರ್ಹತೆ ಪಡೆಯೋದು ಅನುಮಾನ ಎಂದು ಹೇಳಲು ಕಾರಣಗಳು ಇಲ್ಲಿವೆ.

ಗ್ರೂಪ್ Aನಲ್ಲಿ ಇರೋದು ಅಮೆರಿಕ, ಭಾರತ, ಪಾಕಿಸ್ತಾನ, ಕೆನಡಾ ಹಾಗೂ ಐರ್ಲೆಂಡ್. ಈ ಪೈಕಿ ಭಾರತ ಹಾಗೂ ಪಾಕಿಸ್ತಾನ ಸ್ಟ್ರಾಂಗ್ ತಂಡ ಎನಿಸಿಕೊಂಡಿದ್ದವು. ಆದರೆ, ಅಮೆರಿಕ ಯಾರೂ ಊಹಿಸದ ರೀತಿಯಲ್ಲಿ ಪರ್ಫಾರ್ಮೆನ್ಸ್ ನೀಡಿದೆ. ಈ ಸೀಸನ್‌ನಲ್ಲಿ ಅಮೆರಿಕ ಆಡಿದ ಎರಡು ಪಂದ್ಯಗಳಲ್ಲಿ ಎರಡಕ್ಕೆ ಎರಡೂ ಗೆದ್ದಿದೆ. ಇದು ಪಾಕಿಸ್ತಾನಕ್ಕೆ ಮುಳುವಾಗುವ ಸಾಧ್ಯತೆ ಇದೆ.

ಪಾಕಿಸ್ತಾನ ಜೂನ್ 9ರಂದು ಭಾರತ ತಂಡವನ್ನು ಎದುರಿಸಲಿದೆ. ಈ ಪಂದ್ಯದಲ್ಲಿ ಪಾಕ್ ಸೋತರೆ 'ಸೂಪರ್ 8'ರ ಹಾದಿ ಮತ್ತಷ್ಟು ದುರ್ಗಮ ಆಗಲಿದೆ. ಭಾರತದ ಜೊತೆ ಪಾಕ್ ಸೋತು, ಮುಂದೆ ಬರುವ ಕೆನಡಾ ಹಾಗೂ ಐರ್ಲೆಂಡ್ ಮ್ಯಾಚ್‌ಗಳಲ್ಲಿ ಗೆದ್ದರೂ ಸೂಪರ್ 8ಗೆ ಅರ್ಹತೆ ಪಡೆಯೋ ಸಾಧ್ಯತೆ ಕಡಿಮೆಯೇ ಇರುತ್ತದೆ. ಅಮೆರಿಕ ತಂಡಕ್ಕೆ ಭಾರತ ಹಾಗೂ ಐರ್ಲೆಂಡ್ ಜೊತೆ ಪಂದ್ಯಗಳಿವೆ. ಭಾರತದ ಜೊತೆ ಸೋತು, ಐರ್ಲೆಂಡ್ ಜೊತೆ ಗೆದ್ದರೆ ಪಾಕ್ ಬದಲು ಅಮೆರಿಕ ತಂಡ ಸೂಪರ್ 8ಗೆ ಅರ್ಹತೆ ಪಡೆಯಲಿದೆ. ಇದು ಪಾಕ್ ಕ್ರಿಕೆಟ್ ಪ್ರೇಮಿಗಳಿಗೆ ಆತಂಕ ಮೂಡಿಸಿದೆ.

ಭಾರತ ಹಾಗೂ ಪಾಕಿಸ್ತಾನದ ಪಂದ್ಯಕ್ಕಾಗಿ ಫ್ಯಾನ್ಸ್ ಕಾದಿದ್ದಾರೆ. ಈ ಪಂದ್ಯ ಸಾಕಷ್ಟು ಹೈ ವೋಲ್ಟೇಜ್ ಪಡೆದುಕೊಳ್ಳಲಿದೆ. ಜೂನ್ 9ರಂದು ಭಾರತೀಯ ಕಾಲಮಾನ ರಾತ್ರಿ 8 ಗಂಟೆಗೆ ಈ ಪಂದ್ಯ ಆರಂಭ ಆಗಲಿದೆ.

# ರಾಹುಲ್ ಗಾಂಧಿಗೆ ಜಾಮೀನು ಮಂಜೂರು



**ಬೆಂಗಳೂರು:** ಬಿಜೆಪಿ ವಿರುದ್ಧ 40% ಜಾಹೀರಾತು ಪ್ರಕರಣದಲ್ಲಿ ಕಾಂಗ್ರೆಸ್ ಸಂಸದ ರಾಹುಲ್ ಗಾಂಧಿಯವರಿಗೆ ಇಂದು 42ನೇ ಜನಪ್ರತಿನಿಧಿಗಳ ವಿಶೇ? ನ್ಯಾಯಾಲಯ ಜಾಮೀನು ಮಂಜೂರು ಮಾಡಿದ್ದು, ಜುಲೈ 30ಕ್ಕೆ ವಿಚಾರಣೆ ಮುಂದೂಡಿದೆ.

ಮಾಜಿ ಸಂಸದ ಡಿ.ಕೆ ಸುರೇಶ್, ರಾಹುಲ್ ಗಾಂಧಿ ಅವರಿಗೆ 50 ಸಾವಿರ ರೂ. ಮೌಲ್ಯದ ಪ್ರಾಪರ್ಟಿ ಶ್ಯೂರಿಟಿ ನೀಡಿದ್ದು, ಜಾಮೀನು ಮಂಜೂರು ಮಾಡಲಾಗಿದೆ. ಬಿಜೆಪಿ ಸಲ್ಲಿಸಿದ್ದ ಮಾನನ?ಟ ಪ್ರಕರಣಕ್ಕೆ ಸಂಬಂಧಿಸಿದಂತೆ ಜೂ.1ರಂದು ವಿಚಾರಣೆ ನಡೆಸಿದ್ದ 42ನೇ ಜನಪ್ರತಿನಿಧಿಗಳ ವಿಶೇ? ನ್ಯಾಯಾಲಯ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ ಜಾಮೀನು ಮಂಜೂರು ಮಾಡಿತ್ತು. ಅಲ್ಲದೇ ಗೈರಾಗಿದ್ದ ರಾಹುಲ್ ಗಾಂಧಿ ಅವರಿಗೆ ಜೂನ್ 7 ರಂದು ಕಡ್ಡಾಯವಾಗಿ ನ್ಯಾಯಾಲಯದ ವಿಚಾರಣೆಗೆ ಹಾಜರಾಗಬೇಕೆಂದು ಆದೇಶಿಸಿತ್ತು. ಇಂದು ಕೋರ್ಟ್‌ಗೆ ಹಾಜರಾದ ಹಿನ್ನೆಲೆ ಜಾಮೀನು ಮಂಜೂರು ಮಾಡಿದೆ.

ಜೂನ್ 1ರಂದು ವಿಚಾರಣೆಯ ಸಂದರ್ಭದಲ್ಲಿ ರಾಹುಲ್ ಪರ ವಕೀಲರು ಐಎನ್‌ಡಿಐಎ ಮೈತ್ರಿಕೂಟದ ಸಭೆಯಲ್ಲಿ ಭಾಗಿಯಾಗಿದ್ದರಿಂದ ಹಾಜರಾತಿಯಿಂದ ವಿನಾಯಿತಿ ನೀಡುವಂತೆ ಕೋರಿದ್ದರು. ಆದರೆ ನ್ಯಾಯಾಲಯವು ಮನವಿ ನಿರಾಕರಿಸಿತ್ತು. ಮಧ್ಯಾಹ್ನದ ವಿಚಾರಣೆ ಮುಂದೂಡಿ ನಂತರ ಜೂನ್ 7 ರಂದು ಖುದ್ದು ಹಾಜರಾಗಬೇಕೆಂದು ಸೂಚಿಸಿತ್ತು.

2023ರ ಕರ್ನಾಟಕ ವಿಧಾನಸಭಾ ಚುನಾವಣೆಯ ಮುನ್ನಾದಿನದಂದು ಕಾಂಗ್ರೆಸ್ ಪಕ್ಷದ ಜಾಹೀರಾತುಗಳು ಮತ್ತು ಪ್ರಚಾರದ ಘೋ?ಣೆಗಳನ್ನು ವಿರೋಧಿಸಿ ಸಿದ್ದರಾಮಯ್ಯ, ಶಿವಕುಮಾರ್ ಮತ್ತು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ವಿರುದ್ಧ ಬಿಜೆಪಿ ನಾಯಕ ಕೇಶವ ಪ್ರಸಾದ್ ಅವರು ಮಾನನ?ಟ ಮೊಕದ್ದಮೆ ದಾಖಲಿಸಿದ್ದರು.

ಬಿಜೆಪಿಯು ಸಾರ್ವಜನಿಕ ಕಾಮಗಾರಿಗಳ ನಿರ್ವಹಣೆಗಾಗಿ ಗುತ್ತಿಗೆದಾರರು ಮತ್ತು ಇತರರಿಂದ 40% ಕಮಿ?ನ್ ಮಾಡುತ್ತಿದೆ ಎಂದು ಜಾಹೀರಾತುಗಳಲ್ಲಿ ಕಾಂಗ್ರೆಸ್ ಪಕ್ಷವು ಆರೋಪಿಸಿತ್ತು. ಅಂದಿನ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಸೇರಿದಂತೆ ತನ್ನ ಪಕ್ಷದ ಸದಸ್ಯರನ್ನು ಗುರಿಯಾಗಿಸಿಕೊಂಡು ಕಾಂಗ್ರೆಸ್ ನಾಯಕರು ಸುಳ್ಳು ಜಾಹೀರಾತನ್ನು ಪ್ರಕಟಿಸಿದೆ ಎಂದು ಬಿಜೆಪಿ ತನ್ನ ದೂರಿನಲ್ಲಿ ಆರೋಪಿಸಿತ್ತು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com